ಸಂಪುಟ: 13 Volume | ಸಂಚಿಕೆ: 332 Issue | ಪುಟಗಳು 08 Pages | ಸೋಮವಾರ 23 ಫೆಬ್ರವರಿ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ಅನುಭವ ಎಂಬ ಗುರುವಿಗೆ ನಾವು ಸಲ್ಲಿಸಬೇಕಾಗಿರುವ ದಕ್ಷಿಣೆ ಅಪಾರವಿದೆ.
–ಫ್ರಾಂಕ್ಲಿನ್

ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ 6

ಉಪ ಚುನಾವಣೆ: ಸೆಕ್ಟರ ಅಧಿಕಾರಿಗಳ ಸಭೆ 7

ಮರಳು ಮಾಫಿಯಾ ದಂಧೆ: ಅಧಿಕಾರಿಗಳೇ ಕುಮ್ಮಕ್ಕು 8

ಮಲ್ಲಮ್ಮ ನುಡಿ

**ಯುಗಾದಿ ವಿಶೇಷಾಂಕ- 2026**

ಸದಾ ಹೊಸತನಕ್ಕೆ ಹೆಸರಾದ ಪ್ರತಿಷ್ಠಿತ ಪ್ರಾದೇಶಿಕ ಮಲ್ಲಮ್ಮನುಡಿ ದಿನಪತ್ರಿಕೆಯು ಈ ಬಾರಿ ಯುಗಾದಿ ವಿನೂತನ ವಿಶೇಷಾಂಕ–2026 ಹೊರತರಲಿದೆ. ಇದರ ಸಿದ್ಧತೆಯು ಈಗಾಗಲೇ ಆರಂಭವಾಗಿದೆ. ಇದರ ಪ್ರಯುಕ್ತ ವಿಶೇಷ ಸಂಚಿಕೆಗಾಗಿ ಲೇಖಕರಿಂದ ಬರಹಗಳನ್ನು ಆಹ್ವಾನಿಸುತ್ತಿದೆ.

**ಲೇಖಕರು ಪಾಲಿಸಬೇಕಾದ ಸೂಚನೆಗಳು**

- ನನ್ನೂರು ಹಲವು ವೈಶಿಷ್ಟ್ಯಗಳ ತವರು: 200 ಪದ ಮಿತಿ
- ನನ್ನ ಜೀವನದ ಟರ್ನಿಂಗ್ ಪಾಯಿಂಟ್: 200 ಪದಮಿತಿ
- ನಾನು ಪ್ರೀತಿಸಿದೆ. ಆದರೆ ಆಕೆಗೆ ಹೇಳಲೇ ಇಲ್ಲ, ಸ್ವ ಅನುಭವ: 200 ಪದ ಮಿತಿ
- ಕಥೆಗಳು: 600 ಪದಮಿತಿ
- ಯಾವುದೇ ವಿಷಯ ಕುರಿತ ಲಲಿತ ಪ್ರಬಂಧ: 300 ಪದ
- ಕವನ 24 ಸಾಲು ಮೀರದಿರಲಿ.

► ಲೇಖನಗಳನ್ನು ಕಳುಹಿಸಲು ಅಂತಿಮ ದಿನಾಂಕ: 5–03–2026

► ಬರಹಗಳ ಆಯ್ಕೆಯಲ್ಲಿ ಸಂಚಿಕೆ ಸಂಪಾದಕರ ತೀರ್ಮಾನವೇ ಅಂತಿಮ.

ಈ ಮೇಲ್: mallammanudi@gmail.com

## ಕೋಚ್ ಶುಕ್ರಿ ಕಾನ್ರಾಡ್ ಕ್ಷುಲ್ಲಕ ಹೇಳಿಕೆ

• ಮಲ್ಲಮ್ಮ ನುಡಿ ವಾರ್ತೆ ಅಹ್ಮದಾಬಾದ್




ಟಿ20 ವಿಶ್ವಕಪ್ 2026 ಟೂರ್ನಿಯ ಲೀಗ್ ಹಂತ ಮುಕ್ತಾಯವಾಗಿದೆ. ಎಲ್ಲರ ಚಿತ್ತ ಸೂಪರ್ 8 ಹಂತದತ್ತ ನೆಟ್ಟಿದೆ. ಇಂದು (ಫೆ.22) ನಡೆಯಲಿರುವ ಮೂರನೇ ಪಂದ್ಯದಲ್ಲಿ ಭಾರತ ಮತ್ತು ಸೌತ್ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಉಭಯ ತಂಡಗಳೂ ಈ ಮಹತ್ವದ ಸೂಪರ್ 8 ಪಂದ್ಯಕ್ಕೆ ಸಜ್ಜಾಗುತ್ತಿದ್ದು, ಏತನ್ಮಧ್ಯೆ ಪಂದ್ಯದ ಕುರಿತು ಆಟಗಾರರ ಅಭ್ಯಾಸದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ದಕ್ಷಿಣ ಆಫ್ರಿಕಾ ಕೋಚ್ ಶುಕ್ರಿ ಕಾನ್ರಾಡ್, ಭಾರತ ತಂಡದ ವಿರುದ್ಧ ಕ್ಷುಲ್ಲಕ ಹೇಳಿಕೆ ನೀಡಿ, ಸಣ್ಣ ತಂಡಗಳ ಜೊತೆ ಗೆಲ್ಲುವುದು ಮುಖ್ಯವಲ್ಲ, ಬಲಿಷ್ಠ ತಂಡ ಅವರನ್ನು ಮಣ್ಣುಮುಕ್ಕಿಸಲಿದೆ ಎಂದಿರುವುದು ವೈರಲ್ ಆಗಿದೆ.

## ಬೆತ್ತಲೆ ರಾಜಕೀಯಕ್ಕೆ ಪ್ರಧಾನಿ ಮೋದಿ ಕಿಡಿ

• ಮಲ್ಲಮ್ಮ ನುಡಿ ವಾರ್ತೆ ದಿಲ್ಲಿ




ಇಲ್ಲಿ ನಡೆದ ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಕಾಂಗ್ರೆಸ್ ಯುವ ಘಟಕದ ನಾಯಕರು ಬಟ್ಟೆ ಕಳಚಿ ಪ್ರತಿಭಟನೆ ನಡೆಸಿದ ನಂತರ, ಪ್ರಧಾನಿ ನರೇಂದ್ರ ಮೋದಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಜಾಗತಿಕ ಕಾರ್ಯಕ್ರಮವನ್ನು ತನ್ನ ಕೊಳಕು ಮತ್ತು ಬೆತ್ತಲೆ ರಾಜಕೀಯಕ್ಕಾಗಿ ಬಳಸುತ್ತಿದೆ ಎಂದು ಪ್ರಧಾನಿ ಮೋದಿ ಕಾಂಗ್ರೆಸ್ ವಿರುದ್ಧ ಆರೋಪಿಸಿದ್ದಾರೆ. ಪ್ರಧಾನಿ ಮೋದಿ ಅವರ ಪ್ರಕಾರ, ಈ ಪ್ರತಿಭಟನೆಯು ಕಾಂಗ್ರೆಸ್ ಪಕ್ಷವು ಎಷ್ಟು ಸೈದ್ಧಾಂತಿಕವಾಗಿ ದಿವಾಳಿಯಾಗಿದೆ ಮತ್ತುಬಡವಾಗಿದೆ ಎಂಬುದನ್ನು ತೋರಿಸಿದೆ ಎಂದು ಕಿಡಿಕಾರಿದ್ದಾರೆ.

# ಕಾಂಗ್ರೆಸ್ ಪವರ್ ಪಾಲಿಟಿಕ್ಸ್

## ನಾಯಕತ್ವ ಬದಲಾವಣೆ ಕುರಿತು ಮೂಡ ಸಹಮತ | ಸಮಸ್ಯೆ ಶೀಘ್ರ ಪರಿಹಾರ | ಹೈಕಮಾಂಡ್ ಭರವಸೆ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ

ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಕುರ್ಚಿ ಕುರಿತಂತೆ ದಿನಕ್ಕೊಂದು ಹೇಳಿಕೆಗಳು ಗಮನ ಸೆಳೆಯುತ್ತಿವೆ. ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೋಳಿ ಈ ಬಗ್ಗೆ ಮಾತನಾಡಿ, ನಾಯಕತ್ವ ವಿಚಾರದಲ್ಲಿ ಕಾಂಗ್ರೆಸ್ ಹೈಕಮಾಂಡ್ ತಾರ್ಕಿಕ ತಲುಪಿದೆ. ಈ ಬಗ್ಗೆ ಅಂತಿಮ ನಿರ್ಧಾರ ಶೀಘ್ರವೇ ಪ್ರಕಟವಾಗುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ನವದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರೊಂದಿಗೆ ಜಾರಕಿಹೊಳಿಯವರು ಭೇಟಿ ಮಾಡಿದ ಬಳಿಕ ಮಾತನಾಡಿ, ರಾಜ್ಯದಲ್ಲಿನ ರಾಜಕೀಯ ಪರಿಸ್ಥಿತಿ ಕುರಿತು ಹೈಕಮಾಂಡ್‌ಗೆ ಮಾಹಿತಿ ನೀಡಲಾಗಿದೆ. ಪಕ್ಷದೊಳಗಿನ ಗೊಂದಲವನ್ನು ಶೀಘ್ರ ಪರಿಹರಿಸುವಂತೆ ಮನವಿ ಮಾಡಲಾಗಿದೆ ಎಂದು ಹೇಳಿದ್ದಾರೆ.

**ಖರ್ಗೆ ಭರವಸೆ:** ಈ ವಿಷಯ ಶೀಘ್ರದಲ್ಲೇ ಬಗೆಹರಿಯಲಿದೆ ಎಂದು ಖರ್ಗೆ ಭರವಸೆ ನೀಡಿದ್ದಾರೆ. ಮುಖ್ಯಮಂತ್ರಿ ಬದಲಾವಣೆ ಅಥವಾ ಬೇರೆ ನಿರ್ಧಾರಗಳ ಕುರಿತು ಸ್ಪಷ್ಟ ಮಾಹಿತಿ ಇಲ್ಲ. ಆದರೆ, ಹೈಕಮಾಂಡ್ ಅಂತಿಮ ತೀರ್ಮಾನ ಕೈಗೊಳ್ಳಬೇಕೆಂದು ನಾವು ಮನವಿ ಮಾಡಿದ್ದೇವೆ. ಚರ್ಚೆಗಳು ಸಕಾರಾತ್ಮಕವಾಗಿದ್ದು, ಪರಿಸ್ಥಿತಿ ಶೀಘ್ರ ಸ್ಥಿರಗೊಳ್ಳಬಹುದು ಎಂದು ವಿವರಿಸಿದ್ದಾರೆ.



### ಕೆಪಿಸಿಸಿ ಚರ್ಚೆ ಇಲ್ಲ

ಕೆಪಿಸಿಸಿ ಅಧ್ಯಕ್ಷ ಸ್ಥಾನ ಕುರಿತು ಯಾವುದೇ ಚರ್ಚೆ ನಡೆದಿಲ್ಲ ಎಂದು ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ. ಈ ವೇಳೆ ರಾಜಣ್ಣನವರು ಸೇರಿ ಹಲವು ಶಾಸಕರು ನನ್ನ ಅಭಿಪ್ರಾಯಕ್ಕೆ ಸಹಮತ ವ್ಯಕ್ತಪಡಿಸಿದ್ದಾರೆ. ಪಕ್ಷದ ಒಳಗಿನ ಸಮಸ್ಯೆಗಳನ್ನು ವಿಳಂಬವಿಲ್ಲದೆ ಪರಿಹರಿಸಬೇಕು ಎಂಬ ಜಾರಕಿಹೋಳಿಯ ಅಭಿಪ್ರಾಯಕ್ಕೆ ಮನ್ನಣೆ ಸಿಕ್ಕಿದೆ ಎಂದಿದ್ದಾರೆ.

### ಹೋಗಿ ಬರ್ತಾ ಇರುವೆ!

ನಾನು ದೆಹಲಿಗೆ ಹೋಗುವುದು ಬರುವುದು ಇದ್ದೇ ಇರುತ್ತದೆ. ನಾನು ಹೋಗದೆ ಮತ್ಯಾರು ಹೋಗುತ್ತಾರೆ? ಅವರು ಯಾವಾಗ ಕರೆಯುತ್ತಾರೋ ಆಗೆಲ್ಲಾ ಹೋಗುತ್ತೇವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ರಾಜ್ಯ ರಾಜಕೀಯದ ಬಗ್ಗೆ ಎಲ್ಲೆಂದರಲ್ಲಿ ಚರ್ಚೆ ಮಾಡಲ್ಲ. ಅದು ಸಾರ್ವಜನಿಕವಾಗಿ ಚರ್ಚಿಸುವ ವಿಚಾರವೂ ಅಲ್ಲ.

### ಪ್ರತಿರೋಧಕ್ಕೆ ಸಿದ್ಧತೆ..?

ಮುಖ್ಯಮಂತ್ರಿ ಸ್ಥಾನ ಬದಲಾವಣೆ ಸಾಧ್ಯತೆ ಹಿನ್ನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ ವಿವಿಧ ತಂತ್ರಗಳನ್ನು ರೂಪಿಸುತ್ತಿದ್ದು, ಪ್ರತಿರೋಧಕ್ಕೆ ಸಿದ್ಧತೆ ನಡೆಸುತ್ತಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ. ಯಾವ ವಿಚಾರ ಚರ್ಚೆ ಆಗಿದೆ ಎನ್ನುವುದು ನಿಗೂಢವಾಗಿದೆ.

### ಬಾಯ್ಮುಚ್ಕೊಂಡಿರಿ..!

ಸಿಎಂ ಸ್ಥಾನ ಬದಲಾವಣೆ, ಡಿಕೆ ಶಿವಕುಮಾರ್ ದೆಹಲಿ ಪ್ರವಾಸ, ಹೈಕಮಾಂಡ್ ಭೇಟಿ ಬಗ್ಗೆ ಹೇಳಿಕೆ ನೀಡುತ್ತಿರುವ ಕಾಂಗ್ರೆಸ್ ಶಾಸಕರು ಹಾಗೂ ಮುಖಂಡರಿಗೆ ಸ್ವತಃ ಡಿಕೆ ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ. ಶಾಸಕ ಇಕ್ಬಾಲ್ ಹುಸೇನ್ ಸೇರಿದಂತೆ ಹಲವು ಶಾಸಕರಿಗೆ ಬಾಯಿ ಮುಚ್ಚಿಕೊಂಡು ಇದ್ದರೆ ಒಳ್ಳೆಯದು ಎಂದು ಸಾರ್ವಜನಿಕವಾಗಿ ನೇರ ಸಂದೇಶ ರವಾನಿಸಿದ್ದಾರೆ.




ವಿಧಾನಸಭೆಯಲ್ಲಿ ಗುಡುಗಿದ ಫೈಯರ್ ಬ್ರಾಂಡ್ ಎಂದೆ ಹೆಸರುವಾಸಿಯಾಗಿರುವ ಜನಪ್ರಿಯ ಗುರುಮಿಟ್ಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ರವರು ನಮ್ಮ ಮಲ್ಲಮ್ಮ ನುಡಿ ಪತ್ರಿಕೆಯಲ್ಲಿ ತಮ್ಮ ಸುದ್ದಿಯನ್ನು ನೋಡಿ, ಮಲ್ಲಮ್ಮ ನುಡಿ ಪತ್ರಿಕೆ ರಾಜ್ಯಾದ್ಯಂತ ಹೆಸರುವಾಸಿಯಾಗಲಿ ಜನಪ್ರಿಯತೆ ಗಳಿಸಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಮಲ್ಲಮ್ಮ ನುಡಿ ಪತ್ರಿಕೆಯ ಜಿಲ್ಲಾ ವರದಿಗಾರ ಡಿ.ಕೆ ದೇವಿಂದ್ರ ಯಾದಗಿರಿ, ಜೆಡಿಎಸ್ ಯುವ ಮುಖಂಡ ತಾಯಪ್ಪ ನಾಯಕ ನಾಗಲಾಪುರ್ ಮುಂತಾದವರಿದ್ದರು.

## ಈಜಲು ಹೋಗಿ ನೀರು ಪಾಲದ ಯುವಕ



ಮುದಗಲ್: ಸಮೀಪದ ಖೈರವಾಡಗಿ ಗ್ರಾಮದ ಪರಶುರಾಮ ಎಂಬ ಯುವಕ ಕೃಷಿ ಹೊಂಡದಲ್ಲಿ ಈಜಾಡಲು ಹೋಗಿ ನೀರು ಪಾಲದ ಘಟನೆ ಶನಿವಾರ ಜರುಗಿದೆ. ಸ್ನೇಹಿತರೊಂದಿಗೆ ಈಜಾಡಲು ಹೋದ ಪರಶುರಾಮ ಎಂಬ ಯುವಕ ದಡವನ್ನು ಮುಟ್ಟಲು ವಿಫಲವಾಗಿ ಪ್ರಾಣ ಪಕ್ಷಿ ಹಾರಿದೆ. ಅಗ್ನಿ ಶಾಮಕ ತಂಡ ಶವ ಹುಡುಕಾಟಕ್ಕೆ ಕಾರ್ಯ ಶೋಧ ಜರುಗಿದೆ. ಘಟನಾ ಸ್ಥಳದಲ್ಲಿ ಗ್ರಾಮಸ್ಥರು ಪಿಎ ವೆಂಕಟೇಶ ಮಾಡಗೇರಿ ಪೊಲೀಸ್ ಸಿಬ್ಬಂದಿ ಇದ್ದರು.

## ಜೆಡಿಎಸ್ ರಜತ ಮಹೋತ್ಸವ: ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ವಿಜಯಪುರ ಜಿಲ್ಲೆಯಲ್ಲಿ ಫೆ. 27, 2026ರಂದು ನಡೆಯಲಿರುವ ಜೆಡಿಎಸ್ ಪಕ್ಷದ ಬೆಳ್ಳಿ ಹಬ್ಬ ರಜತ ಮಹೋತ್ಸವ ನಡೆಸಲಾಗುತ್ತಿದೆ. ಕಿತ್ತೂರು ಕರ್ನಾಟಕ ವಿಭಾಗದ ಜೆಡಿಎಸ್ ಬೃಹತ್ ಕಾರ್ಯಕರ್ತರ ಸಮಾವೇಶದ ಹಿನ್ನೆಲೆಯಲ್ಲಿ ಮಾಜಿ ಸಚಿವ ವೆಂಕಟರಾವ್ ನಾಡಗೌಡರು, ಸಮಾವೇಶದ ಸ್ಥಳ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಸಮಾವೇಶದ ಸ್ಥಳವನ್ನು ಪರಿಶೀಲಿಸಿದ್ದಾರೆ. ಕಿತ್ತೂರು ಕರ್ನಾಟಕ ವಿಭಾಗದ ವಿಜಯಪುರ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ ಜಿಲ್ಲೆಯ ಕಾರ್ಯಕರ್ತರನ್ನು ಒಗ್ಗೂಡಿಸಿ ಪಕ್ಷದ ಶಕ್ತಿಯನ್ನು ಪ್ರದರ್ಶಿಸುವ ಗುರಿಯನ್ನು ಹೊಂದಿದೆ ಎಂದಿದ್ದಾರೆ. ದೇವರಹಿಪ್ಪರಗಿ ಶಾಸಕರಾದ ರಾಜುಗೌಡ ಪಾಟೀಲ್ ಉಪಸ್ಥಿತರಿದ್ದರು.

## ಬದುಕು ಕೊಟ್ಟವರ ಕಡೆ ಸಿಎಂ ಬೊಟ್ಟು


• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಸಿದ್ದರಾಮಯ್ಯನವರು ಕುರ್ಚಿಗಾಗಿ ಜಾತಿ ಎಳೆದು ತಂದಿದ್ದಾರೆ ಎಂದು ನಾನು ತಮಾಷೆಗೆ ಹೇಳಿದ್ದಲ್ಲ, ಸೀರಿಯಸ್ಸಾಗೇ ಹೇಳಿದ್ದೇನೆ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಮಾತನಾಡಿದ ಅವರು, ತಮಾಷೆಗೆ ಹೇಳಿದ್ದೇನೆ ಎಂದಿಟ್ಟುಕೊಳ್ಳಿ, ನೀವು ಇಷ್ಟುದ್ದ ಉತ್ತರ ಬರೆಯುವ ಅಗತ್ಯವಿರಲಿಲ್ಲ ಎಂದಿದ್ದಾರೆ.

ಸಾಮಾಜಿಕ ನ್ಯಾಯದ ಸಂಹಾರಿ ನೀವು. ನಿಮಗೆ ರಾಜಕೀಯ ಶಕ್ತಿ–ಬದುಕು ಕೊಟ್ಟ ದೇವೇಗೌಡರ ಕಡೆ ಬೆಟ್ಟು ಮಾಡುವುದು ಆಘಾತಕಾರಿ. ಇವತ್ತು ನಿಮಗೆ ಸಿಕ್ಕಿರುವ ಅಧಿಕಾರ, ಸಾಮಾಜಿಕ ನ್ಯಾಯಕಾರ ಎಂಬ ಪೋಷಾಕು ಎಲ್ಲವೂ ದೇವೇಗೌಡರ ದೇಣಿಗೆ. ನೀವೂ ಅವರ ಸಾಮಾಜಿಕ ನ್ಯಾಯದ ಫಲ ಮತ್ತು ಫಲಾನುಭವಿ. ಸ್ವಜಾತಿ, ಕುಟುಂಬ ಎಂದು ಅವರು ಆವತ್ತೇ ಭಾವಿಸಿದ್ದಿದ್ದರೆ ನೀವು ಹಣಕಾಸು ಮಂತ್ರಿ ಆಗುವುದಿರಲಿ, ಅಟ್ಲೀಸ್ಟ್ ಒಂದು ನಿಗಮದ ಅಧ್ಯಕ್ಷಗಿರಿಯೂ ದಕ್ಕುತ್ತಿರಲಿಲ್ಲ ಎಂದಿದ್ದಾರೆ.

## ಸಚಿವರ ಜನಪರ ಆಡಳಿತಕ್ಕೆ ಶ್ಲಾಘನೆ



• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ರಾಜ್ಯದ ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರಿಗೆ ವಿವಿಧ ಸಂಘಟನೆಗಳ ವತಿಯಿಂದ ಅದ್ದೂರಿಯಾಗಿ ಸನ್ಮಾನಿಸಲಾಯಿತು.

ನಗರದ ಸಾರ್ವಜನಿಕ ಚಕ್ ಪೋಸ್ಟ್ ಬಳಿ ಸಚಿವರಿಗೆ ಶಾಲು ಹೊದಿಸಿ, ಹಾರ ಹಾಕಿ, ಫಲಕ ನೀಡಿ ಗೌರವಿಸಲಾಯಿತು. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಸಚಿವರು ನೀಡುತ್ತಿರುವ ಕೊಡುಗೆ, ಜನಪರ ಆಡಳಿತ ಹಾಗೂ ಸರಳ ವ್ಯಕ್ತಿತ್ವವನ್ನು ಪ್ರಶಂಸಿಸಲಾಯಿತು. ರಾಮಲಿಂಗಾರೆಡ್ಡಿ ಅವರು ಸದಾ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಜನನಾಯಕ ಎಂದು ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ. ಹಾಗೂ ಶ್ರೀ ವೀರಭದ್ರೇಶ್ವರ ದೇವಸ್ಥಾನ ಸೇವಾ ಸಮಿತಿ ಸದಸ್ಯ ಮಲ್ಲಿಕಾರ್ಜುನ ಮಾಶಟ್ಟಿ, ಮಹೇಶ ಅಗಡಿ, ಬ್ರಾಹ್ಮಣ ಸಮಾಜ ರಾಜ್ಯ ಉಪಾಧ್ಯಕ್ಷ ವೆಮಕಟರೆಡ್ಡಿ, ರೆಡ್ಡಿ ಸಮಾಜದ ತಾಲೂಕು ಅಧ್ಯಕ್ಷ ಬ್ಯಾಂಕ್ ರೆಡ್ಡಿ ಕೊಂಡಾಡಿದರು. ವಿವಿಧ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಹಾಗೂ ಉಪಸ್ಥಿತರಿದ್ದರು.

## ಆಧ್ಯಾತ್ಮ ಜ್ಞಾನ ಆಶಾಕಿರಣ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮನುಷ್ಯನ ಯಾಂತ್ರಿಕ ಬದುಕಿನಲ್ಲಿ ಅಧ್ಯಾತ್ಮ ಜ್ಞಾನ ಆಶಾಕಿರಣವಾಗಿದೆ ಎಂದು ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ್‌ಬಿ ಇಟ್ನಾಳ್ ಅಭಿಪ್ರಾಯಪಟ್ಟಿದ್ದಾರೆ.

ಇಲ್ಲಿಏರ್ಪಡಿಸಿದ್ದ ಅಧ್ಯಾತ್ಮ ಮಹೋತ್ಸವದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಾರ್ವಜನಿಕರ ಶಾರೀರಿಕ, ಮಾನಸಿಕ ಆರೋಗ್ಯ ಸದೃಢತೆಗೆ ಅಗತ್ಯ ಎಂದಿದ್ದಾರೆ.

ಬಿ.ಕೆ ಯೋಗಿನಿ ಅಕ್ಕ ಮಾತನಾಡಿ, ಜೀವನದಲ್ಲಿ ಹಣ ಆಸ್ತಿ ಅಂತಸ್ತು ಅಧಿಕಾರ ಗಳಿಸಬಹುದು. ಇವುಗಳ ಜೊತೆಗೆ ಮನಸ್ಸಿಗೆ ಶಾಂತಿ ನೆಮ್ಮದಿಯನ್ನು ಪಡೆದಾಗ ವ್ಯಕ್ತಿಯ ಜೀವನ ಪರಿಪೂರ್ಣ ಎನಿಸಿಕೊಳ್ಳುತ್ತದೆ ಎಂದು ತಿಳಿಸಿದ್ದಾರೆ.ಡಾ. ಶಿವನಗೌಡ ಪಾಟೀಲ್ ಮಾತನಾಡಿದ್ದಾರೆ. ಚಂದ್ರಕಾಂತ ಬೆಟ್ಗೇರಿ ಸಂಗಮೇಶ್ ಕಲ್ಹಾಳ್ ರಮೇಶ್ ಕೌಲೂರ್ ಶೇಖರಪ್ಪ ಉಪಸ್ಥಿತರಿದ್ದರು.



## ಅಕ್ರಮ ಮರಳು, ಶಾಸಕ ತರಾಟೆ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಹುಮನಾಬಾದ್ ಕ್ಷೇತ್ರದ ಶಾಸಕ ಡಾ.ಸಿದ್ದುಪಾಟೀಲ್ ಕ್ಷೇತ್ರದ ಪ್ರವಾಸ ವೇಳೆಯಲ್ಲಿ ಕಲ್ಬುರ್ಗಿಯಿಂದ ಅಕ್ರಮವಾಗಿ ಮರಳು ಸಾಗಿಸುತ್ತಿದ್ದ ಟಿಪ್ಪರ್ ತಾಲೂಕಿನ ವಳಖಿಂಡಿ ಗ್ರಾಮದಲ್ಲಿ ತಡೆದು ತನಿಖೆ ನಡೆಸಿದ್ದಾರೆ. ಈ ವೇಳೆ ವಾಹನದ ಯಾವುದೇ ಮೂಲ ದಾಖಲಾತಿ ಇರಲಿಲ್ಲ. ನಂಬರ್ ಪ್ಲೇಟ್ ಬದಲಾಯಿಸಿ ಚಲಾಯಿಸುತ್ತಿರುವುದು ಕಂಡು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಚಾಲಕನ ಲೈಸೆನ್ಸ್ ಕೂಡ ಇಲ್ಲದಿರುವುದು ಕಂಡು ಸ್ಥಳೀಯ ಪೊಲೀಸ್ ಅಧಿಕಾರಿಗಳಿಗೆ ಕರೆಸಿ ತರಾಟೆಗೆ ತೆಗೆದುಕೊಂಡಿದ್ದಾರೆ.

ಕ್ಷೇತ್ರದಲ್ಲಿ ಇಂಥ ಅಕ್ರಮ ಕಾರ್ಯಗಳಿಗೆ ಕಡಿವಾಣ ಹಾಕಬೇಕು. ಯಾವುದೇ ಪರವಾನಿಗೆ ಇಲ್ಲದೆ ಅತಿ ಭಾರವಾದ ವಾಹನವನ್ನು ವೇಗವಾಗಿ ಚಲಾಯಿಸುತ್ತಿರುವುದರಿಂದ ಸಣ್ಣ ಮಕ್ಕಳಿಗೆ, ಸಾರ್ವಜನಿಕರಿಗೆ ಅಪಘಾತ ಸಂಭವಿಸಿ ಸಾವು ನೋವು ಆದರೆ ಇದಕ್ಕೆ ಯಾರು? ಎಂದು ಕಿಡಿ ಕಾರಿದ್ದಾರೆ.

**ಬಿಜೆಪಿಯರವರ ಟೀಕೆಗಳ ನಡುವೆಯೂ ರಾಜ್ಯದ ಅಭಿವೃದ್ಧಿ ಸಾಗುತ್ತಿದೆ, ರವಾರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಮಂಜೂರು: ಮುಖ್ಯಮಂತ್ರಿ ಸಿದ್ದರಾಮಯ್ಯ**

# ಕೆ.ಜಿ.ಟಿ.ಟಿ.ಐ.ದಲ್ಲಿ ಇನ್ಕ್ಯುಬೇಷನ್ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕೇಂದ್ರ ಸರ್ಕಾರದ ವಿಶ್ವ ಬ್ಯಾಂಕ್ ಆರ್ಥಿಕ ನೆರವಿನ ಮಹತ್ವಾಕಾಂಕ್ಷಿಯೋಜನೆಯಾದ ಆರ್.ಎ.ಎಮ್.ಪಿ. RAMP (RaisingandAccelerating MSME'sPerformance) (ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮ) (ಎಂಎಸ್ಎಂಇ) ಗಳ ಕಾರ್ಯಕ್ಷಮತೆ ಹೆಚ್ಚಿಸುವುದು ಮತ್ತು ವೇಗಗೊಳಿಸುವುದು) ಯೋಜನೆಯಡಿ ಒಂದು ದಿನದ ಇನ್ಕ್ಯುಬೇಶನ್ (ಖಓಅಗಃಂ–ಖಿಖಔಓ) ಕಾರ್ಯಕ್ರಮವನ್ನು ಇದೇ ಫೆಬ್ರವರಿ 23 ರಂದು ಕಲಬುರಗಿಯ ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆ (ಏಉಖಿಖಿಖ) ಯಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಇನ್ಕ್ಯುಬೇಶನ್ (INCU-BATION) ಕಾರ್ಯಕ್ರಮಗಳಲ್ಲಿ ವಿವಿಧ ವಿಷಯಗಳ ಕುರಿತು ವಿಷಯ ತಜ್ಞರು, ಇಲಾಖೆ ಅಧಿಕಾರಿಗಳು ಮತ್ತು ಬ್ಯಾಂಕ್ ಅಧಿಕಾರಿಗಳು ತಾಂತ್ರಿಕ ಅಧಿವೇಶನಗಳನ್ನು ನೆರವೇರಿಸಲಿದ್ದಾರೆ.

**CHANGE OF NAME**

I, **SHIVASAGAR CHATNALE S/O SUBHASH** resident of R/O. BALUR TQ BHALKI DIST BIDAR-585413 KARNATAKA STATE do here by change of my name from **SHIVASAGAR** to **SHIVASAGAR CHATNALE** Affidavit before Advocate and notary by Mohd Idris Adv and Notary Bidar. dated 22 FEB 2026 Bidar -585401 (K.S.)

# ಧರ್ಮದ ದಾರಿ ತೋರಿಸುವ ಜಾತ್ರೆ, ಪುರಾಣ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಬೀದರ್ ತಾಲೂಕಿನ ಜನವಾಡ ಗ್ರಾಮದ ಶ್ರೀ ಸಿದ್ದಲಿಂಗೇಶ್ವರ ಚಿದ್ರಿ ಮಠದಲ್ಲಿ ಮಹಾಶಿವರಾತ್ರಿ ಪ್ರಯುಕ್ತ ಜಾತ್ರಾ ಮಹೋತ್ಸವ ಹಾಗೂ ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ನಿಮಿತ್ಯ ತತ್ವಜ್ಞಾನಿ ಶ್ರೀ ಕಡಿಕೋಳ ಮಡಿವಾಳೇಶ್ವರರ ಮಹಾ ಪುರಾಣ ಕಾರ್ಯಕ್ರಮದ ಉದ್ಘಾಟನೆ ಮಾಡಲಾಯಿತು,

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ ಹಳ್ಳಿಖೇಡ (ಬಿ) ಪಟ್ಟಣದ ಸಂಸ್ಥಾನ ಚಿಕ್ಕಮಠದ ಪರಮಪೂಜ್ಯ ಶ್ರೀ ಷ. ಬ್ರ. ಶ್ರೀಪತಿ ಪಂಡಿತಾರಾಧ್ಯ ಶಿವಾಚಾರ್ಯರು ಕಾರ್ಯಕ್ರಮವನ್ನು ಉದ್ಘಾಟಿಸಿ, ಜಾತ್ರಾ ಮಹೋತ್ಸವಗಳು, ಪುರಾಣ ಕಾರ್ಯಕ್ರಮ ಧಾರ್ಮಿಕ ಭಕ್ತಿ ಬಿತ್ತುವುದರ ಮೂಲಕ ಪ್ರತಿಯೊಬ್ಬ ವ್ಯಕ್ತಿಯ ಮನಸ್ಸನ್ನು ಪರಿಶುದ್ಧ ಗೊಳಿಸಿ ಬೆಳಗಿಸುತ್ತವೆ , ಹಾಗೂ ಧರ್ಮದ ಮಾರ್ಗ ತೋರಿಸಿ, ಅದೇ ಮಾರ್ಗದಲ್ಲಿ ನಡೆಸುತ್ತವೆ ಎಂದು ಆಶೀರ್ವಚನ ನುಡಿದರು. ಈ ವೇಳೆ ಗ್ರಾಮದ ಸಿದ್ದಲಿಂಗೇಶ್ವರ ಚಿದ್ರೀ ಮಠದ ಚನ್ನಮಲ್ಲಯ್ಯ ಸ್ವಾಮಿ ಯವರು ಸಾನಿಧ್ಯ ವಹಿಸಿದ್ದರು, ಅಂತರಾಷ್ಟ್ರೀಯ ಜ್ಯೋತಿಷ್ಯ ವಿದ್ವಾಂಸರಾದ ಶ್ರೀ ಬಸಯ್ಯ ಸ್ವಾಮಿ ಅಧ್ಯಕ್ಷರು ಶ್ರೀ ಮಠ ಚಿದ್ರೀ ಚಾರಿಟೇಬಲ್ ಟ್ರಸ್ಟ್ ಜನವಾಡ ಇವರು ಕಾರ್ಯಕ್ರಮದ ದಿವ್ಯ ನೇತೃತ್ವ ವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮದ ಮುಖಂಡರಾದ ಧನರಾಜ ಪಾಟೀಲ ರವರು ವಹಿಸಿದ್ದರು, ರಾಜೇಂದ್ರ ಪೂಜಾರಿ ಯುವ ನಾಯಕರು, ಮಾಜಿ ಗ್ರಾಮ್ ಪಂಚಾಯತ್ ಅಧ್ಯಕ್ಷರಾದ ಹಣಮಂತರಾವ್ ಪಾಪಡೇ, ಕರ್ನಾಟಕದ ಪ್ರಖ್ಯಾತ ಪುರಾಣಿಕರಾದ ಪಂಡಿತ್ ವೇದಮೂರ್ತಿ ಶಿವಕುಮಾರ ಶಾಸ್ತ್ರಿಗಳು ಧುತ್ತರಗಾಂವ, ಕಲಾವಿದರಾದ ಮಲ್ಲಿಕಾರ್ಜುನ್ ಸ್ವಾಮಿ ಐನೋಳಿ, ಪವನ್ ಸ್ವಾಮಿ ಖಾಶಂಪುರ, ಗ್ರಾಮದ ಮುಖಂಡರು, ಹಾಗೂ ಸಕಲ ಜನವಾಡ ಗ್ರಾಮಸ್ಥರು ಭಾಗವಹಿಸಿದ್ದರು.

# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



## ವೈದ್ಯರ ಕೆಲಸ ದೇವರ ಕೆಲಸ ಎಂಬ ವಾಕ್ಯ ನಿಜವಾಗಲಿ

ಮಾನವನ ಜೀವನದಲ್ಲಿ ಅತ್ಯಂತ ಅಮೂಲ್ಯವಾದುದು ಆರೋಗ್ಯ. ಆರೋಗ್ಯವೇ ಭಾಗ್ಯ ಎಂಬ ಮಾತು ನಮ್ಮ ಸಂಸ್ಕೃತಿಯಲ್ಲಿ ಆಳವಾಗಿ ಬೇರೂರಿದೆ. ಈ ಆರೋಗ್ಯವನ್ನು ಕಾಪಾಡುವಲ್ಲಿ ವೈದ್ಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಆದ್ದರಿಂದಲೇ "ವೈದ್ಯರ ಕೆಲಸ ದೇವರ ಕೆಲಸ" ಎಂಬ ವಾಕ್ಯ ಜನಪ್ರಿಯವಾಗಿದೆ. ಆದರೆ ಈ ಮಾತು ಕೇವಲ ನುಡಿಯಾಗಿ ಉಳಿಯದೇ, ನಿಜ ಜೀವನದಲ್ಲಿ ಪ್ರತಿಬಿಂಬಿಸಬೇಕಾದ ಅಗತ್ಯ ಇಂದು ಹೆಚ್ಚಾಗಿದೆ.

ವೈದ್ಯರು ಕೇವಲ ವೃತ್ತಿಪರರು ಮಾತ್ರವಲ್ಲ, ಅವರು ಜೀವ ಉಳಿಸುವ ಮಹತ್ತರ ಹೊಣೆಗಾರಿಕೆಯನ್ನು ಹೊತ್ತಿರುವವರು. ರೋಗಿಯ ನೋವು, ಆತಂಕ ಮತ್ತು ಭಯವನ್ನು ನಿವಾರಿಸಿ ಅವರಿಗೆ ಹೊಸ ಜೀವನ ನೀಡುವ ಶಕ್ತಿ ವೈದ್ಯರಲ್ಲಿ ಇದೆ. ಅನೇಕ ಸಂದರ್ಭಗಳಲ್ಲಿ ವೈದ್ಯರು ತಮ್ಮ ವೈಯಕ್ತಿಕ ಜೀವನವನ್ನು ತ್ಯಜಿಸಿ, ದಿನರಾತ್ರಿ ಸೇವೆ ಸಲ್ಲಿಸುತ್ತಾರೆ. ತುರ್ತು ಪರಿಸ್ಥಿತಿಗಳಲ್ಲಿ, ಅಪಘಾತಗಳ ಸಂದರ್ಭದಲ್ಲಿ ಮತ್ತು ಸಾಂಕ್ರಾಮಿಕ ರೋಗಗಳ ಸಮಯದಲ್ಲಿ ವೈದ್ಯರ ಸೇವೆ ಅತ್ಯಂತ ಅಮೂಲ್ಯವಾಗುತ್ತದೆ. ಕೋವಿಡ್ ಮಹಾಮಾರಿಯ ಸಂದರ್ಭದಲ್ಲಿ ವೈದ್ಯರು ತಮ್ಮ ಜೀವವನ್ನು ಪಣಕ್ಕಿಟ್ಟು ಜನರ ಸೇವೆ ಮಾಡಿದುದು ಎಲ್ಲರಿಗೂ ನೆನಪಿದೆ.

ಆದರೆ ಇತ್ತೀಚಿನ ದಿನಗಳಲ್ಲಿ ಕೆಲವೆಡೆ ವೈದ್ಯಕೀಯ ಕ್ಷೇತ್ರದ ಮೇಲೆ ನಂಬಿಕೆ ಕುಂದಿಸುವ ಘಟನೆಗಳೂ ವರದಿಯಾಗುತ್ತಿವೆ. ಅತಿಯಾದ ಶುಲ್ಕ, ನಿರ್ಲಕ್ಷ್ಯ ಮತ್ತು ವಾಣಿಜ್ಯ ಮನೋಭಾವವು ವೈದ್ಯರ ಗೌರವಕ್ಕೆ ಧಕ್ಕೆಯುಂಟು ಮಾಡುತ್ತಿದೆ. ವೈದ್ಯಕೀಯ ಸೇವೆ ವ್ಯಾಪಾರವಾಗದೇ, ಸೇವೆಯಾಗಿ ಉಳಿಯಬೇಕಾದ ಅಗತ್ಯ ಇದೆ. ರೋಗಿಯ ನೋವನ್ನು ಅರ್ಥಮಾಡಿಕೊಂಡು, ಮಾನವೀಯತೆಯಿಂದ ಚಿಕಿತ್ಸೆ ನೀಡಿದಾಗ ಮಾತ್ರ ವೈದ್ಯರ ಸೇವೆ ದೇವರ ಸೇವೆಯಾಗಿ ಪರಿಗಣಿಸಲಾಗುತ್ತದೆ.

ಇನ್ನೊಂದೆಡೆ, ಸಮಾಜವೂ ವೈದ್ಯರನ್ನು ಗೌರವದಿಂದ ಕಾಣಬೇಕು. ವೈದ್ಯರ ಮೇಲೆ ದಾಳಿ, ಅವಮಾನ ಮತ್ತು ಅವಿಶ್ವಾಸದ ಘಟನೆಗಳು ಹೆಚ್ಚುತ್ತಿರುವುದು ಕಳವಳಕಾರಿ. ವೈದ್ಯರು ಕೂಡ ಮಾನವರೇ; ಅವರು ತಮ್ಮ ಶಕ್ತಿಮಿತಿಯೊಳಗೆ ಶ್ರೇಷ್ಠ ಸೇವೆ ನೀಡಲು ಪ್ರಯತ್ನಿಸುತ್ತಾರೆ. ಅವರಿಗೆ ಸೂಕ್ತ ಗೌರವ ಮತ್ತು ಸಹಕಾರ ನೀಡಿದಾಗ ಮಾತ್ರ ಆರೋಗ್ಯ ವ್ಯವಸ್ಥೆ ಬಲವಾಗುತ್ತದೆ.

ಸರ್ಕಾರವೂ ವೈದ್ಯಕೀಯ ಕ್ಷೇತ್ರಕ್ಕೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಸಮರ್ಪಕ ಆಸ್ಪತ್ರೆಗಳು, ವೈದ್ಯರು ಮತ್ತು ಔಷಧಿಗಳ ಕೊರತೆ ನಿವಾರಣೆಯಾಗಬೇಕು. ವೈದ್ಯರಿಗೆ ಉತ್ತಮ ಕಾರ್ಯಪರಿಸರ ಮತ್ತು ಭದ್ರತೆ ಒದಗಿಸಿದರೆ, ಅವರು ಇನ್ನಷ್ಟು ಸಮರ್ಪಣೆಯಿಂದ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ.

ಒಟ್ಟಾರೆ, ವೈದ್ಯರ ಸೇವೆ ಮಾನವೀಯತೆಯ ಶ್ರೇಷ್ಠ ಉದಾಹರಣೆ. ವೈದ್ಯರು ತಮ್ಮ ವೃತ್ತಿಯನ್ನು ಸೇವೆಯ ಮನೋಭಾವದಿಂದ ನಿರ್ವಹಿಸಿದಾಗ ಮತ್ತು ಸಮಾಜವು ಅವರಿಗೆ ಗೌರವ ನೀಡಿದಾಗ ಮಾತ್ರ "ವೈದ್ಯರ ಕೆಲಸ ದೇವರ ಕೆಲಸ" ಎಂಬ ವಾಕ್ಯ ನಿಜವಾಗುತ್ತದೆ. ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ವೈದ್ಯರ ಸೇವೆ ಮತ್ತು ಸಮಾಜದ ಸಹಕಾರ ಎರಡೂ ಅವಶ್ಯಕ.

# ಭಾರತೀಯ ಜನತಾ ಪಾರ್ಟಿ ಯುವ ಮೋರ್ಚಾಯಿಂದ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಭಾರತೀಯ ಜನತಾ ಪಾರ್ಟಿ ಜಿಲ್ಲಾ ಯುವ ಮೋರ್ಚಾದ ಬೀದರ್ ವತಿಯಿಂದ ನಿನ್ನೆ ನಡೆದ ದೆಹಲಿಯಲ್ಲಿ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ – 2026ರ ಸಭೆಯಲ್ಲಿ ಯುವ ಕಾಂಗ್ರೆಸ್ ನ ಕಾರ್ಯಕರ್ತರು ಅಶ್ಲೀಲವಾಗಿ ವರ್ತಿಸಿ, ನಮ್ಮ ದೇಶದ ಗೌರವಕ್ಕೆ ಧಕ್ಕೆ ತರುವ ರೀತಿಯಲ್ಲಿ ವರ್ತಿಸಿ ಜಗತ್ತಿನ ಎದುರು ದೇಶಕ್ಕೆ ಅವಮಾನ ಮಾಡಿರುವ ದೇಶದ್ರೋಹಿ ಕಾಂಗ್ರೆಸ್ ಪಕ್ಷದ ಈ ವರ್ತನೆಯನ್ನು .ಖಂಡಿಸಿ ಬೀದರ್ ಕಾಂಗ್ರೆಸ್ ಜಿಲ್ಲಾ ಕಾರ್ಯಾಲಯಕ್ಕೆ ಮುತ್ತಿಗೆ ಹಾಕಲಾಯಿತು ಈ ಸಂದರ್ಭದಲ್ಲಿ ಬಿಜೆಪಿ ಯುವ ಮೋರ್ಚ ಜಿಲ್ಲಾಧ್ಯಕ್ಷರಾದ ಸಂತೋಷ ರೆಡ್ಡಿ ಅಣದೂರು ನಗರ ಮಂಡಲದ ಅಧ್ಯಕ್ಷರು ಶಶಿಧರ್ ಹೊಸಳ್ಳಿ ಪ್ರಕೋಷ್ಠ ಜಿಲ್ಲಾ ಸಂಚಾಲಕರು ರಾಜಕುಮಾರ್ ಚಿದರಿ ಸುಭಾಷ್ ಮಡಿವಾಳ ಗುಂಡಪ್ಪ ಬುದೇರಾ ಚಂದ್ರೇಯ ಸ್ವಾಮಿ ಗಣೇಶ್ ಭೋಸಲೆ ಯುವ ಮೂರ್ಛೆ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು ರಮೇಶ್ ಕಲ್ಲೂರ್ ವೀರೇಶ್ ಸ್ವಾಮಿ ಬಸವರಾಜ್ ಬಂಬಳಗಿ ಸತೀಶ್ ಶೆಡ್ಗೊಂಡ್ ಸಂಗಮೇಶ್ ಪಾಟೀಲ್ ಬಾಲಾಜಿ ಪಾಟೀಲ್ ನಿತಿನ್ ನವಲಕಲೆ ವಿಜಯಕುಮಾರ್ ಹೆಗ್ಗೆ ಶರಣು ಸಿದ್ವೀರ್ ಶಿವ ಸುಲ್ತಾನ್ಪುರ್ ಸನ್ನಿ ಕುಮಾರ್ ಸಂತೋಷ್ ಬಿರಾದರ್ ಆಕಾಶ್ ಮಮದಾಪುರ್ ಸಂಜು ಕುಮಾರ್ ಜಿರಿಗೆ ಗೋಪಾಲ್ ಕೃಷ್ಣ ಸುರೇಂದರ್ ಕುಲಕರ್ಣಿ ಹಾಗೂ ಬಿಜೆಪಿ ಯುವ ಮೋರ್ಚಾದ ಪದಾಧಿಕಾರಿಗಳು ಹಾಗೂ ನೂರಾರು ಯುವಕರು ಭಾಗವಹಿಸಿದರು.

### ಚನ್ನಬಸವೇಶ್ವರ ಗುರುಕುಲದಲ್ಲಿ 6ನೇ ತರಗತಿ ಪ್ರವೇಶ ಪರೀಕ್ಷೆ

# ಪರೀಕ್ಷೆ ಬರೆದ 4777 ವಿದ್ಯಾರ್ಥಿಗಳು



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ 2026–27ನೇ ಸಾಲಿನ 6ನೇ ತರಗತಿಯ ಕನ್ನಡ ಮಾಧ್ಯಮದ ಸ್ಕಾಲರ್‌ಶಿಪ್ ಪ್ರವೇಶಕ್ಕೆ ನಡೆದ ಎರಡು ಹಂತದ ಪರೀಕ್ಷೆಯಲ್ಲಿ ಒಟ್ಟು 4777 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ತಿಳಿಸಿದ್ದಾರೆ.

ಭಾನುವಾರ ನಡೆದ ಎರಡನೇ ಹಂತದ ಪರೀಕ್ಷೆಯಲ್ಲಿ 2554 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಇನ್ನೂ ಇದಕ್ಕೂ ಮುನ್ನ ಕಳೆದ ಭಾನುವಾರ ನಡೆದ ಪ್ರಥಮ ಹಂತದ ಪರೀಕ್ಷೆಯಲ್ಲಿ 2223 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು.

ಬೀದರ್ ಜಿಲ್ಲೆ ಅಲ್ಲದೇ ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟ, ಬೆಳಗಾವಿ ಸೇರಿ ಮುಂತಾದ ಜಿಲ್ಲೆಗಳಿಂದ ವಿದ್ಯಾರ್ಥಿಗಳು ಈ ಸ್ಕಾಲರ್‌ಶಿಪ್ ಪರೀಕ್ಷೆಗೆ ಹಾಜರಾಗಿದ್ದರು ಎಂದು ತಿಳಿಸಿದ್ದಾರೆ.

ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಕನ್ನಡ ಮಾಧ್ಯಮದ ಶಿಕ್ಷಣಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಸ್ಕಾಲರ್‌ಶಿಪ್ ಪರೀಕ್ಷೆ ಏರ್ಪಡಿಸಿ ಕ್ರಮವಾಗಿ ಹೆಚ್ಚು ಅಂಕ ಗಳಿಸುವ 30 ವಿದ್ಯಾರ್ಥಿಗಳಿಗೆ 5 ವರ್ಷ ಉಚಿತ ಶಿಕ್ಷಣ, ವಸತಿ, ಕೋಚಿಂಗ್ ಸೌಲಭ್ಯ ಸಿಗಲಿದೆ ಎಂದಿದ್ದಾರೆ.



> "ಕನ್ನಡ ಮಾಧ್ಯಮದ ಶಿಕ್ಷಣಕ್ಕೆ ಉತ್ತೇಜನ ನೀಡುವ ಸದಾಶಯದೊಂದಿಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಮಾರ್ಗದರ್ಶನದಲ್ಲಿ ನಡೆದ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆಗೆ ನಿರೀಕ್ಷೆಗೂ ಮೀರಿ ಉತ್ತಮ ಸ್ಪಂದನೆ ದೊರೆತಿದೆ. ಪರೀಕ್ಷೆಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳಿಗೆ ಅಭಿನಂದನೆಗಳು.
>
> **ಮೋಹನರೆಡ್ಡಿ ಆಡಳಿತಾಧಿಕಾರಿಗಳು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿ**

### ಯಶಸ್ವಿಯಾಗಿ ಜರುಗಿದ ಗುರುವಂದನಾ ಹಾಗೂ ಸ್ನೇಹಸಮ್ಮಿಲನ

## ಗುರುವಿನ ಆಶೀರ್ವಾದವಿದ್ದರೆ ಉನ್ನತ ಸ್ಥಾನ ಗಳಿಸಲು ಸಾಧ್ಯ:

# ಗುರುಲಿಂಗ ಶಿವಾಚಾರ್ಯರ ಅಭಿಮತ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

**ಪ್ರಸಕ್ತ ಶಾಲೆಯಲ್ಲಿರುವ ಮಕ್ಕಳಿಂದ ಭರತನಾಟ್ಯ, ನೃತ್ಯ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.**

ಜೀವನದಲ್ಲಿ ಗುರಿ ಮತ್ತು ಚಲ ಹಾಗೂ ಗುರುವಿನ ಆಶೀರ್ವಾದ ಇದ್ದರೆ ಸಮಾಜದಲ್ಲಿ ಉನ್ನತ ಸ್ಥಾನ ಗಳಿಸಲು ಸಾಧ್ಯ ಎಂದು ಹಿರೇಮಠ ಸಂಸ್ಥಾನದ ಗುರುಲಿಂಗ ಶಿವಾಚಾರ್ಯರು ಹೇಳಿದರು. ಪಟ್ಟಣದ ಸದ್ಬೋದನಿ ಶಿಕ್ಷಣ ಸಂಸ್ಥೆಯಲ್ಲಿ ಹಳೆ ವಿದ್ಯಾರ್ಥಿಗಳಿಂದ ನಡೆದ ಸ್ನೇಹ ಸಮ್ಮಿಲನ ಹಾಗೂ ಗುರುವಂದನಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು. ನಾವು ಇಂದು ಏನಾದರೂ ಗಳಿಸಿದ್ದರೆ ಅದೆಲ್ಲವೂ ಈ ಸಮಾಜದಿಂದ ಗಳಿಸಿದ್ದೇವೆ. ಹಾಗಾಗಿ ಈ ಸಮಾಜದಿಂದ ಪಡೆದದ್ದನ್ನು ನಾವು ಮತ್ತೆ ಸಮಾಜಕ್ಕೆ ವಾಪಸ್ ನೀಡಬೇಕಾಗುತ್ತದೆ. ಆ ಮೂಲಕ ಅಕ್ಷರ ಕಲಿಸಿದ ಗುರುಗಳು, ಜನ್ಮ ಕೊಟ್ಟ ಹೆತ್ತವರು, ಆಡಿ ಬೆಳೆದ ಭೂಮಿಯ ಋಣವನ್ನು ತೀರಿಸಲೇಬೇಕು. ಸುಮಾರು 20 ವರ್ಷ ನಂತರವೂ ವಿದ್ಯೆ ಕಲಿಸಿದ ಗುರುವಿನ ಮಹತ್ವ ಅರಿತು, ಅವರಿಗೆ ವಂದಿಸುವ ಕಾರ್ಯ ಮಾದರಿಯಾಗಿದೆ. ಉಜ್ವಲ ಜೀವನ ನಿರ್ಮಿಸಬೇಕಾದರೆ ಗುರುವಿನ ಉತ್ತಮ ಮಾರ್ಗದರ್ಶನ ಅತ್ಯವಶ್ಯಕವಾಗಿದೆ' ಎಂದರು. ಕಾರ್ಯಕ್ರಮದ ಅಧ್ಯಕ್ಷೆ ಡಾ. ಮಂಗಲಾ ಗಡಮಿ, ಕಾರ್ಯದರ್ಶಿ ಡಾ. ಸುರೇಖಾ, ಉಪ ಕಾರ್ಯದರ್ಶಿ ಲತಾ ಕುಲಕರ್ಣಿ, ಕೋಶಾಧ್ಯಕ್ಷೆ ಜ್ಯೋತಿ ಜಾಧವ್, ಶಾಲಿನಿ ದಾಮಾ, ನೀಲಕಂಠ ಇಸ್ಲಾಂಪೂರ, ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗದಲ್‌ಕರ್, ಸಂಸ್ಥೆಯ ಅಧ್ಯಕ್ಷ ರಮೇಶ ಪಾರಾ, ಉಪಾಧ್ಯಕ್ಷ ಪ್ರಭುಶೆಟ್ಟಿ ತೂಗಾವ, ಕಾರ್ಯದರ್ಶಿ ಶಿವಲಿಂಗಪ್ಪ ಪಾಟೀಲ, ಕೋಶಾಧ್ಯಕ್ಷ ರೇವಣಸಿದ್ದಪ್ಪ ಕಂಚನಾಳ್, ನಿರ್ದೇಶಕರಾದ ಶರದ ಮಹಿಂದ್ರಕರ್, ಕರಬಸಪ್ಪ ಗಡಮಿ, ರಾಜರೆಡ್ಡಿ ಚಾಮರೆಡ್ಡಿ, ಆನಂದಯ್ಯ ಸ್ವಾಮಿ, ಶರಣಬಸವ ಕಾಳಗಿ, ನೂರೊಂದಪ್ಪ ಪೋಲಿಸ್ ಪಾಟೀಲ, ಕಾಶೀನಾಥ ಜಕ್ಕಾ, ಪ್ರಾಂಶುಪಾಲ ಬಸವರಾಜ ದಿಗಡೆ ಸೇರಿದಂತೆ ಶಿಕ್ಷಕರು ಹಾಗು ಹಳೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಪುರಾಣ ಪ್ರವಚನ ಆಲಿಸಿದರೆ ಸುವಿಚಾರ ಪ್ರಾಪ್ತಿ:

# ರುದ್ರಮುನಿ ಶಿವಾಚಾರ್ಯರು ಅಭಿಮತ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಪುರಾಣ ಪ್ರವಚನ ಆಲಿಸುವುದರಿಂದ ಒಳ್ಳೆಯ ವಿಚಾರಗಳು ಮೂಡುತ್ತವೆ. ಭಗವಂತನ, ಶರಣರ, ಮಹಾತ್ಮರ ಜೀವನ ಚರಿತ್ರೆಗಳನ್ನು ಕೇಳುವುದರಿಂದ ವ್ಯಕ್ತಿತ್ವ ಉನ್ನತಿಗೊಳ್ಳುತ್ತದೆ ಎಂದು ಗವಿಮಠ ತ್ರೀಪುರಾಂತ, ಬಸವಕಲ್ಯಾಣ ಘನಲಿಂಗ ರುದ್ರಮುನಿ ಶಿವಾಚಾರ್ಯರು ಹೇಳಿದರು. ಪಟ್ಟಣದ ಶ್ರೀ ರೇವಣಸಿದ್ದೇಶ್ವರರ ದ್ವಿತೀಯ ವರ್ಷದ ರಥೋತ್ಸವ ಹಾಗೂ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಮಹಾಸಾಧ್ವಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಪುರಾಣ ಪ್ರವಚನ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಭಕ್ತಿ ಬದುಕನ್ನು ದಿವ್ಯಗೊಳಿಸುವ ಮಧುರ ಸಾಧನ. ಹಿರಿಯರಾಗಲಿ ಕಿರಿಯರಾಗಲಿ ಅವರ ಮನಸ್ಸುಗಳಲ್ಲಿ ಭಕ್ತಿ ಭಾವವನ್ನು ಒಡಮೂಡಬೇಕು. ಭಗವಂತನ, ಮಹಾತ್ಮರ, ಶರಣರ ತತ್ವಾದರ್ಶಗಳನ್ನು ಆಲಿಸಿ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದಾನ, ಧರ್ಮದಿಂದ ಪುಣ್ಯ ಪ್ರಾಪ್ತಿ ಆಗುತ್ತದೆ. ಬೇಡುವ ಕೈಗಿಂತ ನೀಡುವ ಕೈ ಶ್ರೇಷ್ಠ. ಆ ನಿಟ್ಟಿನಲ್ಲಿ ಪ್ರತಿಯೊಬ್ಬರು ದಾನ, ಧರ್ಮ ಕಾರ್ಯಗಳಲ್ಲಿ ಪಾಲ್ಗೊಳ್ಳಬೇಕು. ಅಂದಾಗ ಆರೋಗ್ಯ ಮತ್ತು ನೆಮ್ಮದಿ ಸಿಗುತ್ತದೆ ಎಂದರು. ಐನಾಪುರ ಉಪಮುನ್ಯ ಶಿವಾಚಾರ್ಯರು, ಉಪ ವಲಯ ಅರಣ್ಯಾಧಿಕಾರಿ ವೀರಯ್ಯಾ ಪೂಜಾರಿ, ಪತ್ರಕರ್ತರಾದ ಕೃಷ್ಣಚಾರ್ಯ ಪಂಚಾಳ, ರಾಜಕುಮಾರ ಆರ್. ಹಡಪದ, ಶಿಕ್ಷಣ ಪ್ರೇಮಿ ಶರಣುಬಸವ ಕಾಳಗಿ, ಹಣಮಂತರೆಡ್ಡಿ ಬಸಂತಪುರ್, ಪುರಾಣಿಕ ಮಡಿವಾಳಯ್ಯ ಶಾಸ್ತ್ರಿ ಜೇರಟಗಿ, ಸಂಗೀತ ಗಾಯಕ ವೀರಭದ್ರಯ್ಯಾ ಹಿರೇಮಠ ಕಟ್ಟಿಸಂಗಾವಿ, ತಬಲಾವಾದಕ ರಾಜಶೇಖರ ಕಟ್ಟಿಸಂಗಾವಿ, ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ವಿಜಯಕುಮಾರ್ ಬೊಮ್ಮಣಿ, ವೀರಪ್ಪ ಹೊಸಳ್ಳಿ, ಅಮೀತ ತೊಗಲೂರ್ ಸೇರಿದಂತೆ ಭಕ್ತಾಧಿಗಳು ಉಪಸ್ಥಿತರಿದ್ದರು.

# ಅಯ್ಯಪ್ಪ ಶಿವಾಚಾರ್ಯರ 56ನೇ ಪುಣ್ಯಸ್ಮರಣೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಲಿಂಗೈಕ್ಯ ಅಯ್ಯಪ್ಪ ಶಿವಾಚಾರ್ಯರರು ಬ್ರಹನ್ಮಠ ಚಾಂಗಲೇರಾ ಮತ್ತು ಚಿಟಗುಪ್ಪ ಇವರ 56ನೇ ಪುಣ್ಯ ಸ್ಮರಣೋತ್ಸವದ ಅಂಗವಾಗಿ ಅತ್ಯಜ್ಯೋತಿ ಕಾರ್ಯಕ್ರಮವು ಇಂದು ಸೋಮವಾರ ಬೆಳಗಿನ ಜಾವ 6 ಗಂಟೆಗೆ ಕತೃರ್ಜ ಗದ್ದುಗೆಗೆ ರುದ್ರಾಭಿಷೇಕ ಮತ್ತು ದೀಪ ಪ್ರಜ್ವಲಿಸಿ ನಂತರ ಶ್ರೀ ಸಂತ ಶಿರೋಮಣಿ ಮಡಿವಾಳೇಶ್ವರ ಗವಿಯಿಂದ ವಾಧ್ಯ, ವೈಭವಗಳೊಂದಿಗೆ ಹೊರಟು ಊರಿನ ರಾಜ ಮಾರ್ಗಗಳನ್ನು ಕೂಡಿ ಶ್ರೀ ಗುರು ಅಯ್ಯಪ್ಪ ಸ್ವಾಮಿ ಹಿರೇಮಠಕ್ಕೆ ತಲುಪುತ್ತದೆ. ನಂತರ ಶ್ರೀ ಅಯ್ಯಪ್ಪ ಶಿವಾಚಾರ್ಯರ ಕತೃರ್ಜ ಗದ್ದುಗೆಗೆ ಮಹಾ ಮಂಗಳಾರತಿ ನೆರವೇರಿಸಿ, ಧರ್ಮಸಭೆ ಜರಗುತ್ತದೆ.

ನಂತರ ಮಹಾ ಪ್ರಸಾದ ಸೇವೆ ಜರುಗುತ್ತದೆ.. ಸಾಯಂಕಾಲ ವಿವಿಧ ಕಲಾ ತಂಡಗಳಿಂದ ಸಂಗೀತ ದರ್ಬಾರ, ಭಜನಾ ಕಾರ್ಯಕ್ರಮ ಜರಗುತ್ತವೆ. ಬ್ರಹನ್ಮಠ, ಚಾಂಗಲೇರಾ ಮತ್ತು ಚಿಟಗುಪ್ಪ ಗುರುಲಿಂಗ ಶಿವಾಚಾರ್ಯರು ಹಾಗೂ ಮರುಳಾರಾಧ್ಯ ಶಿವಾಚಾರ್ಯರು ನೇತೃತ್ವ ವಹಿಸಲಿದ್ದಾರೆ. ಮಾಗಣಗೇರಿ ಹಿರೇಮಠದ ಡಾ. ವಿಶ್ವ–ರಾಧ್ಯ ಶಿವಾಚಾರ್ಯರು, ನಾಗಣಸೂರ್ ಹಿರೇಮಠದ ನೀಲಕಂಠ ಶಿವಾಚಾರ್ಯರು, ಮೈಂದರ್ಗಿ ಹಿರೇಮಠದ ಚಂದ್ರಗುಂಡ ಶಿವಾಚಾರ್ಯರು, ಜಯಶಾಂತಲಿಂಗ ಮಹಾಸ್ವಾಮಿಗಳು ಹಿರೇನಾಗಾಂವ, ಐನಾಪುರ್ ಹಿರೇಮಠದ ಉಪಮನ್ಯು ಶಿವಾಚಾರ್ಯರು, ಹೆಡಗಾಪುರ್ ಹಿರೇಮಠದ ದಾರುಕಲಿಂಗ ಶಿವಾಚಾರ್ಯರು ಕಾರ್ಯಕ್ರಮ ಉಪಸ್ಥಿತಿ ವಹಿಸಲಿದ್ದಾರೆ. ಆದ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಬೇಕೆಂದು ಬ್ರಹನ್ಮಠ ಪೂಜ್ಯರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರಕಾರ

**ಉಪ ನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ ಕಲಬುರಗಿ**

ದೂರವಾಣಿ ಸಂಖ್ಯೆ: 9448999341,ಇ–ಮೇಲ್: ddpigulbarga32@gmail.com

ಸಂಖ್ಯೆ:.ಸಿ3(2)/ಯೋ/ಕಜಿಎತಾ/ಒ/ಕುರಿತ/plate stand racks /ಒ/30/2025–26    ದಿನಾಂಕ:19/02/2026

**ಟೆಂಡರ ಪ್ರಕಟಣೆ**


2025–26 ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತ ಅನಿರ್ಭಂದಿತ ಅಭಿವೃದ್ಧಿ ಅನುದಾನದಲ್ಲಿ Stainless steel plate Racks for Kitchen ( 100 PLATE CAPACITY ) ಸರಬರಾಜು ಮಾಡಲು 2ND CALL ಇ–ಟೆಂಡರ್ ಆಹ್ವಾನಸಲಾಗಿದೆ.

ಟೆಂಡರ್ ಅಂದಾಜು ಮೊತ್ತ : **ರೂ.50,00,000/–** ಟೆಂಡರ್ ಸಲ್ಲಿಸುವ ಪ್ರಾರಂಭಿಕ ದಿನಾಂಕ ಮತ್ತು ಸಮಯ ದಿನಾಂಕ : 18.02.2026 ಬೆಳಗ್ಗೆ 10.00 ಗಂಟೆಯಿಂದ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ ದಿನಾಂಕ : 25.02.2026 ಸಂಜೆ 05.00 ಗಂಟೆಯೊಳಗೆ, ತಾಂತ್ರಿಕ ಬಿಡ್‌ತೆರೆಯುವ ದಿನಾಂಕ ಮತ್ತು ಸಮಯ ದಿನಾಂಕ : 26.02.2026 ಬೆಳಗ್ಗೆ ಸಂಜೆ 05.00 ಗಂಟೆಗೆ, ಹಣಕಾಸಿನ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ ದಿನಾಂಕ : 27.02.2026 ಬೆಳಿಗ್ಗೆ 11.00ಗಂಟೆಗೆ, ಟೆಂಡರನ EARNEST MONEY DEPOSIT (EMD) **ರೂ.1,00,000/–** ಸಂಪರ್ಕಿಸುವ ವಿಳಾಸ ಉಪ ನಿರ್ದೇಶಕರು (ಆಡಳಿತ) ಕಾರ್ಯಲಯ ಶಾಲಾ ಶಿಕ್ಷಣ ಇಲಾಖೆ ಕಲಬುರಗಿ Wedsite http://kppp.karanataka.gov.in

**ಸಹಿ/–** ಉಪ ನಿರ್ದೇಶಕರು (ಆಡಳಿತ)
ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ

**ವಾ.ಸಾ.ಸಂ.ಇ./ಕಲಬುರಗಿ/1105 /ದೇಶಪಾಂಡೆ ಪಬ್ಲಿಸಿಟಿ/2025–26**

# ಫೆ,26ಕ್ಕೆ ನರೇಂದ್ರಚಾರ್ಯ ಜೀ. ಪಾದುಕ ದರ್ಶನ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಮಹಾರಾಷ್ಟ್ರದ ದಕ್ಷಿಣ ಪೀಠ ನಾಣೀಜಧಾಮ ಮಠದ ಜಗದ್ಗುರು ನರೇಂದ್ರಚಾರ್ಯಜಿ ರವರ ಪಾದುಕಾ ದರ್ಶನ ಕಾರ್ಯಕ್ರಮವನ್ನು ಫೆಬ್ರವರಿ 26ರಂದು ಬೆಳಿಗ್ಗೆ 9 ಘಂಟೆಗೆ ಕುನಬಿವಾಡ ಹನುಮಾನ ದೇವಸ್ಥಾನದಿಂದ ಭವ್ಯ ಮೆರವಣಿಗೆ ಪ್ರಾರಂಭಗೊಂಡು ಮುಖ್ಯ ರಸ್ತೆಯ ಮೂಲಕ ಪಟ್ಟಣದ ಜೈ ಭವಾನಿ ಕಲ್ಯಾಣ ಮಂಟಪಕ್ಕೆ ತಲುಪಲಿದೆ. ನಂತರ ಪಾದುಕಾಗಳ ಹಾಗೂ ಗುರು ಪೂಜಾ ಸಮಾರಂಭ, ಸಾಮಾಜಿಕ ಉಪಕ್ರಮ, ಗುರುಪೂಜಾ, ಆರತಿ ಸಮಾರಂಭ, ಪ್ರವಚನ, ಉಪಾಸಕ ದೀಕ್ಷಾ, ದರ್ಶನ, ಪುಷ್ಪವೃಷ್ಟಿ, ಇತರ ಕಾರ್ಯಕ್ರಮಗಳು ಜರುಗಲಿವೆ. ಆದ ಕಾರಣ ಸುತ್ತ ಮುತ್ತಲಿನ ಭಕ್ತಾದಿಗಳು ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀಗಳ ದರ್ಶನ ಪಡೆಯಬೇಕೆಂದು ಜಿಲ್ಲಾ ಮೇಲ್ವಿಚಾರಕ ವಿಠಲ ಮುಳೆ ಹಾಗೂ ಜಿಲ್ಲಾಧ್ಯಕ್ಷ ಶ್ರೀಪಾದ ಕಪ್ಪಿಕೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಸ್ಲೀಮ ಬೇಗಂ ರವರಿಗೆ ಜಿಲ್ಲಾ ವಿದ್ಯಾರತ್ನ ಪ್ರಶಸ್ತಿ ಪ್ರದಾನ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘ ಬೆಂಗಳೂರು, ಜಿಲ್ಲಾ ಶಾಖೆ ಬೀದರ ವತಿಯಿಂದ ಫೆಬ್ರವರಿ 21ರಂದು ಭಾಲ್ಕಿ ತಾಲೂಕಿನ ಭೀಮಣ್ಣ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯದ ಸಭಾ ಭವನದಲ್ಲಿ ನಡೆದ ಸಂಘದ ಜಿಲ್ಲಾ ಸಮಾವೇಶದಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಸಕ್ಕರೆ ಕಾರ್ಖಾನೆ ಚಿಟಗುಪ್ಪ ಶಾಲೆಯ ಸಹ ಶಿಕ್ಷಕಿ ತಸ್ಲೀಮ್ ಬೇಗಂ ಸಿದ್ದಿಕಿ ಇವರಿಗೆ ಬೀದರ್ ಲೋಕಸಭಾ ಸದಸ್ಯ ಸಾಗರ್ ಖಂಡ್ರೆ ಅವರು ಜಿಲ್ಲಾ ವಿದ್ಯಾರತ್ನ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಿದರು.

# ಶಾಹೀನ್ ಪದವಿ ಕಾಲೇಜು ವಿದ್ಯಾರ್ಥಿಗಳಿಂದ ಸಮೀಕ್ಷೆ: ಅಫ್ರಾನಾಜ್

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಶಾಹೀನ್ ಪದವಿ ಕಾಲೇಜು ವಿದ್ಯಾರ್ಥಿಗಳು ನಗರದಲ್ಲಿ ನಡೆಸಿದ ಸಮೀಕ್ಷೆಯಲ್ಲಿ ಶೇ 80 ರಷ್ಟು ಪಾಲಕರು 16 ವರ್ಷದ ಒಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆಗೆ ನಿರ್ಬಂಧ ಹೇರಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯರಾದ ಅಫ್ರಾನಾಜ್ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಈಗಾಗಲೇ ಆಸ್ಟ್ರೇಲಿಯಾದಲ್ಲಿ 16 ವರ್ಷದ ಒಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆಗೆ ನಿರ್ಬಂಧ ಹೇರಲಾಗಿದೆ. ಅಂತಹುದೇ ಕಾನೂನನ್ನು ದೇಶದಲ್ಲೂ ಜಾರಿಗೆ ತರಬೇಕು ಎಂದು ಪಾಲಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

ಅತಿಯಾದ ಮೊಬೈಲ್ ವೀಕ್ಷಣೆಯಿಂದ ಮಕ್ಕಳ ಮನಸ್ಸಿನ ಮೇಲೆ ಆಗುತ್ತಿರುವ ಪರಿಣಾಮ, ಮಹಿಳೆಯರ ಸುರಕ್ಷತೆಗಾಗಿ ಇರುವ ಕಾನೂನು ಹಾಗೂ ಸ್ವಚ್ಛ ಭಾರತ ಅಭಿಯಾನ ಕುರಿತು ವಿದ್ಯಾರ್ಥಿಗಳು ಸಮೀಕ್ಷೆ ನಡೆಸಿದರು ಎಂದು ಹೇಳಿದರು.

ಮೂರು ವಿಷಯಗಳ ಕುರಿತು ಜನವರಿ 10 ರಿಂದ ಫೆಬ್ರುವರಿ 5 ರ ವರೆಗೆ ನಡೆದ ಸಮೀಕ್ಷೆಯಲ್ಲಿ ಬಿ.ಎ, ಬಿ.ಎಸ್ಸಿ, ಬಿ.ಕಾಂ ಹಾಗೂ ಬಿ.ಸಿ.ಎ. ಓದುತ್ತಿರುವ 200 ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ನಗರದ ಓಲ್ಡ್ ಸಿಟಿ, ಫೈಜಪುರ, ಶಹಾಪುರ ಗೇಟ್, ರಾಜಗೊಂಡ ಕಾಲೊನಿ ಹಾಗೂ ಗುಂಪಾ ಪ್ರದೇಶದ ಒಟ್ಟು 825 ಮನೆಗಳಿಗೆ ಭೇಟಿ ಕೊಟ್ಟು ಪಾಲಕರ ಅಭಿಪ್ರಾಯ ಸಂಗ್ರಹಿಸಿದ್ದರು ಎಂದು ತಿಳಿಸಿದರು.

ಸಮೀಕ್ಷೆ ವೇಳೆ ಮೂರು ವಿಷಯಗಳ ತಲಾ 20 ಪ್ರಶ್ನೆಗಳನ್ನು ಕೇಳಿ, ಅವರ ಅಭಿಪ್ರಾಯ ದಾಖಲಿಸಿಕೊಂಡಿದ್ದರು. ಯಾರೊಬ್ಬರ ವ್ಯಯಕ್ತಿಕ ಮಾಹಿತಿ ಅಥವಾ ಮೊಬೈಲ್ ಸಂಖ್ಯೆ ಪಡೆದಿಲ್ಲ ಎಂದು ಹೇಳಿದರು.

ಸಮೀಕ್ಷೆಯಲ್ಲಿ ಶೇ.65 ರಷ್ಟು ಪಾಲಕರು 16 ವರ್ಷದ ಒಳಗಿನ ಮಕ್ಕಳು ಮೊಬೈಲ್ ಅನ್ನು ಶಿಕ್ಷಣೇತರ ಉದ್ದೇಶಕ್ಕೆ ಬಳಸುತ್ತಿದ್ದಾರೆ ಗೇಮ್, ಯುಟ್ಯೂಬ್ ರೀಲ್ಸ್ ಹಾಗೂ ಫೇಸ್‌ಬುಕ್ ವೀಕ್ಷಣೆ ಉಪಯೋಗಿಸುತ್ತಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ ಎಂದು ತಿಳಿಸಿದರು.

ಶೇ 48 ರಷ್ಟು ಪಾಲಕರು ಮೊಬೈಲ್ ಬಳಕೆಯ ಕಾರಣ–ಕ್ಕಾಗಿ ಮಕ್ಕಳು ದೈಹಿಕ ಕ್ರೀಡೆಗಳಲ್ಲಿ ಪಾಲ್ಗೊಳ್ಳುತ್ತಿಲ್ಲ ಎಂದು, ಶೇ 42 ರಷ್ಟು ಮಂದಿ ಕಣ್ಣು ನೋವು, ತಲೆ ನೋವು, ನಿದ್ರಾ ಹೀನತೆ ಸೇರಿದಂತೆ ಮಕ್ಕಳ ದೈಹಿಕ ಆರೋಗ್ಯದ ಮೇಲೆ ಪರಿಣಾಮ ಉಂಟಾಗುತ್ತಿದೆ ಎಂದ ಅವರು, ಶೇ 33 ರಷ್ಟು ಪಾಲಕರು ಮಕ್ಕಳು ಪಾಲಕರೊಂದಿಗೆ ಮುಕ್ತವಾಗಿ ಬೆರೆಯುತ್ತಿಲ್ಲ ಮಾತನಾಡುತ್ತಿಲ್ಲ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಸ್ವಚ್ಛ ಭಾರತ ಅಭಿಯಾನದ ಬಗ್ಗೆ ಗೊತ್ತಿದೆ ಎಂದು ಶೇ 95 ರಷ್ಟು ಮಂದಿ, ಸ್ವಚ್ಛತೆ ತಮ್ಮ ವೈಯಕ್ತಿಕ ಜವಾಬ್ದಾರಿ ಎನ್ನುವುದು ತಿಳಿದಿದೆ ಎಂದು ಶೇ 90 ರಷ್ಟು ಜನ ಹೇಳಿದ್ದಾರೆ.

ಸ್ವಚ್ಛ ಭಾರತ ಮೊಬೈಲ್ ಪ್ ಬಗ್ಗೆ, ಶೇ 60 ರಷ್ಟು ಮಂದಿಗೆ ಗೊತ್ತಿದ್ದರೂ, ಶೇ 10 ರಷ್ಟು ಮಂದಿಯಷ್ಟೇ ಈ ಪ್ ಅನ್ನು ಡೌನ್‌ಲೋಡ್ ಮಾಡಿಕೊಂಡಿದ್ದಾರೆ.

ಡೌನ್ಲೋಡ್ ಮಾಡಿಕೊಂಡವರಲ್ಲಿ ಶೇ 20 ರಷ್ಟು ಮಂದಿ ಮಾತ್ರ ಸಂತೃಪ್ತರಾಗಿದ್ದಾರೆ ಎಂದು ತಿಳಿಸಿದರು. ಶೇ 35 ರಷ್ಟು ಮಂದಿ ಒಣ ಕಸ, ಹಸಿ ಕಸ ವಿಂಗಡಿಸಿ ಕೊಡುತ್ತಿಲ್ಲವೆಂದು, ಶೇ 22 ರಷ್ಟು ಜನ ನಗರಸಭೆಯವರು ಮನೆ ಮನೆ ಮನೆಗೆ ಬಂದು ಕಸ ಸಂಗ್ರಹಿಸುತ್ತಿದ್ದಾರೆಂದು,

ಶೇ 58 ರಷ್ಟು ಮಂದಿ ಕೆಲವೊಮ್ಮೆ ಬರುತ್ತಿದ್ದಾರೆಂದು ಮಾಹಿತಿ ನೀಡಿದ್ದಾರೆ ಎಂದು ಹೇಳಿದರು.

ಇನ್ನು ಮಹಿಳೆಯರ ಸುರಕ್ಷತೆ–ಗಾಗಿ ಇರುವ ಕಾನೂನು ಕುರಿತ ಸಮೀಕ್ಷೆಯಲ್ಲಿ ಶೇ 20.90 ರಮ್ಮ ಮಹಿಳೆಯರು ಸೋಷಿಯಲ್ ಮೀಡಿಯಾದಲ್ಲಿ ಟ್ರೋಲ್‌ಗೆ ಒಳಗಾಗಿದ್ದಾಗಿ ತಿಳಿಸಿದ್ದಾರೆ. ಶೇ 68.40 ರಷ್ಟು ಮಂದಿ ಕಾನೂನು ತಿಳಿವಳಿಕೆ ಇದೆ. ಇನ್ನಷ್ಟು ತಿಳಿದುಕೊಳ್ಳುವ ಆಸಕ್ತಿಯೂ ಇದೆ. ಆದರೆ, ಕಾನೂನು ಅರಿವು ಸಿಗುತ್ತಿಲ್ಲ ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ಜನರ ಅಭಿಪ್ರಾಯ ಸಂಗ್ರಹಿಸುವುದು ಹಾಗೂ ಅದನ್ನು ಆಡಳಿತದ ಮುಂದೆ ಇಡುವುದು ವಿದ್ಯಾರ್ಥಿಗಳ ಸಮೀಕ್ಷೆಯ ಉದ್ದೇಶವಾಗಿತ್ತು. ಸಮೀಕ್ಷೆಯ ಆಧಾರದ ಮೇಲೆ ಆಡಳಿತ ಕ್ರಮ ಕೈಗೊಳ್ಳಬೇಕು ಎನ್ನುವುದೇ

ವಿದ್ಯಾರ್ಥಿಗಳ ಆಶಯವಾಗಿದೆ ಎಂದು ಅಫ್ರಾನಾಜ್ ಹೇಳಿದರು. ಕಾಲೇಜಿನ ಪ್ರಾಧ್ಯಾಪಕರಾದ ಪ್ರೊ. ಅಭಿಲಾಸ ಪೋಲದಾಸ್, ಡಾ.ಸಿರಾಜುಲ್ ಹಸನ್, ಪ್ರೊ.ಮ

ಹಮ್ಮದ್ ಇಕ್ಲಾಕ್, ಪ್ರೊ.ಬಿಲಾಲ್ ಅಹಮ್ಮದ್, ಪ್ರೊ.ಅಶ್ವಿನಿ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಸಿಎಂ ಭೇಟಿಗೆ ಕಾರಂಜಾ ಸಂತ್ರಸ್ತರ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್



ಕಾರಂಜಾ ಸಂತ್ರಸ್ತರ ಬೇಡಿಕೆ ಈಡೇರಿಕೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಭೇಟಿಗೆ ಒತ್ತಾಯಿಸಿ, ನಗರದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಛೇರಿಯಲ್ಲಿ ಭಾನುವಾರ ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ ಮತ್ತು ಬೀದರ್ ಸಮಗ್ರ ಅಭಿವೃದ್ಧಿ ಜಂಟಿ ಕ್ರಿಯಾ ಸಮಿತಿಯಿಂದ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಅವರಿಗೆ ಮನವಿ ಸಲ್ಲಿಸಲಾಯಿತು. ಬಳಿಕ ಸಮಿತಿಯ ಅಧ್ಯಕ್ಷ ಚಂದ್ರಶೇಖರ ಪಾಟೀಲ್ ಹೊಚಕನಳ್ಳಿ ಮಾತನಾಡಿ, ಕಾರಂಜಾ ಸಂತ್ರಸ್ತರಿಗೆ ಎದುರಾದ ಸಮಸ್ಯೆಗಳ ನಿವಾರಣೆಗಾಗಿ ದೀರ್ಘ ಕಾಲದಿಂದ ಹೋರಾಟ ಮಾಡಿಕೊಂಡು ಬರಲಾಗುತ್ತಿದೆ. ಹೀಗಾಗಿ ಜ್ವಲಂತ ಸಮಸ್ಯೆ ನಿವಾರಣೆ ಮಾಡಲು ಜಿಲ್ಲಾ ಉಸ್ತವಾರಿ ಸಚಿವರ ನೇತೃತ್ವದಲ್ಲಿ ಪಕ್ಷ ಭೇದ ಮರೆತು ಜಿಲ್ಲೆಯ ಎಲ್ಲ ರಾಜಕೀಯ ನಾಯಕರು ಒಗ್ಗಟ್ಟಿನಿಂದ ಸಿಎಂ ಮತ್ತು ಡಿಸಿಎಂ ಭೇಟಿ ಮಾಡುವುದು ಅವಶ್ಯಕವಾಗಿದೆ ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಆರ್. ರಾಜಶೇಖರ, ಸುಭಾಷ ಪೊಲೀಸ್ ಪಾಟೀಲ್, ಎಂ.ಡಿ. ಅಹ್ಮದ್, ರಾಜಪ್ಪ ಕಮಲಾಪೂರ್ ಸೇರಿ ಅನೇಕರಿದ್ದರು.

# ಶ್ರೀಶಂಕರ ಯುವಕ ಮಂಡಳಿ ಪದಾಧಿಕಾರಿಗಳ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಸಮೀಪದ ಭಾಗ್ಯನಗರದ ಶಂಕರಾಚಾರ್ಯ ಮಠದಲ್ಲಿ ಗುರುವಾರ ಶಂಕರಾಚಾರ್ಯ ಮಠದ ಪೀಠಾಧಿಪತಿ ಶಿವರಾಮಕೃಷ್ಣಾನಂದ ಸ್ವಾಮೀಜಿ ಮಾರ್ಗದರ್ಶನದಲ್ಲಿ ಶ್ರೀಶಂಕರ ಯುವಕ ಮಂಡಳಿಯ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದು, ಗಂಗಾಧರ ನೇವಾರ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು.

ಹನುಮಂತಪ್ಪ ಜೀರಾಳ ಗೌರವಾಧ್ಯಕ್ಷ, ವಿಜಯಕುಮಾರ ಹಣಗಿ ಉಪಾಧ್ಯಕ್ಷ, ಅಶ್ವಥರಾಯದುರ್ಗ ಕಾರ್ಯದರ್ಶಿ, ಈರಣ್ಣ ಎನ್.ಪಗಡಲ್ ಸಹ ಕಾರ್ಯದರ್ಶಿ, ಸಂತೋಷ ಪಾಸ್ತೆ ಖಜಾಂಚಿ, ಚಂದ್ರು ಉಂಕಿ, ರಮೇಶ ದೇವದುರ್ಗ, ಮಂಜುನಾಥ, ವಜ್ರೇಶ ಮ್ಯಾಳಿ, ಮೋಹನ ಅರಕಲ್ಲ್ ನಿರ್ದೇಶಕರನ್ನಾಗಿ ಆಯ್ಕೆ ಮಾಡಲಾಯಿತು. ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ಸದಸ್ಯರು ಶುಭಕೋರಿದರು.

# ರಾಜ್ಯ ಮಟ್ಟದ ಶೈಕ್ಷಣಿಕ ಸಮ್ಮೇಳನ: ಒಂದು ಲಕ್ಷ ಶಿಕ್ಷಕರು ಪಾಲ್ಗೊಳ್ಳುವ ನಿರೀಕ್ಷೆ: ಮುಖ್ಯಮಂತ್ರಿ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಮಟ್ಟದ ಶೈಕ್ಷಣಿಕ ಮಹಾ ಸಮ್ಮೇಳನ ಹಾಗೂ ಸಂಘದ ಸುವರ್ಣೋತ್ಸವ ಸಮಾರಂಭ ಬೆಂಗಳೂರಿನ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಜರುಗಲಿದೆ.

ಸಮ್ಮೇಳನದ ಬಗ್ಗೆ ಮಾಹಿತಿ ನೀಡಿದ ಸಂಘದ ರಾಜ್ಯ ಘಟಕದ ಅಧ್ಯಕ್ಷ ಚಂದ್ರಶೇಖರ ನುಗ್ಗಲಿ, ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಏಳಿಗೆಗಾಗಿ ಶ್ರಮಿಸುತ್ತಿರುವ ಸಂಘದ 55 ನೇ ಸುವರ್ಣ ಸಂಭ್ರಮವೂ ಜರುಗಲಿದೆ. ಸಮ್ಮೇಳನವನ್ನು ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಉದ್ಘಾಟಿಸಲಿದ್ದು, ಸುವರ್ಣ ಸಂಭ್ರಮವನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಲೋಕಾರ್ಪಣೆ ಮಾಡಲಿದ್ದಾರೆ. ರಾಜ್ಯದ 1.80 ಲಕ್ಷ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಟ್ಯಾಕ್ಸ್ ಇ ಫೈಲಿಂಗ್ ಹಾಗೂ ಬಾಲಾ ಸಂಜೀವಿನಿ ಯೋಜನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಮಧು ಬಂಗಾರಪ್ಪ ಲೋಕಾರ್ಪಣೆ ಮಾಡಲಿದ್ದಾರೆ.

ಸಮ್ಮೇಳನದ ವಿಶೇಷ ಆಹ್ವಾನಿತರಾಗಿ ಸಚಿವರಾದ ರಾಮಲಿಂಗಾರೆಡ್ಡಿ, ಡಾ ಜಿ. ಪರಮೇಶ್ವರ, ಎಚ್.ಕೆ. ಪಾಟೀಲ, ಸತೀಶ ಜಾರಕಿಹೊಳಿ, ಲಕ್ಷ್ಮಿ ಹೆಬ್ಬಾಳಕರ, ಎನ್.ಚಲುವರಾಯಸ್ವಾಮಿ, ಭೈರತಿ ಸುರೇಶ, ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ, ರಾಮೋಜಿಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ. ರೇವಣ್ಣ ಆಗಮಿಸಲಿದ್ದಾರೆ.

ಪ್ರಾಥಮಿಕ ಶಿಕ್ಷಣ ಹಾಗೂ ಸವಾಲುಗಳ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ ಶಾಲಿನಿ ರಜನೀಶ್, ಶಿಕ್ಷಕರ ಜವಾಬ್ದಾರಿಗಳು ಹಾಗೂ ತಲ್ಲಣಗಳು ಕುರಿತು ಖ್ಯಾತ ಸಾಹಿತಿ ಡಾ ಬರಗೂರು ರಾಮಚಂದ್ರಪ್ಪ ಉಪನ್ಯಾಸ ನೀಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಶ್ಮಿ ಮಹೇಶ, ಆಯುಕ್ತರಾದ ವಿಕಾಸ ಕಿಶೋರ ಸುರಳ್ಕರ್, ರಾಜ್ಯ ಯೋಜನಾ ನಿರ್ದೇಶಕ ಡಾ ವಿದ್ಯಾಕುಮಾರಿ, ಪ್ರಾಥಮಿಕ ಶಿಕ್ಷಣ ನಿರ್ದೇಶಕಿ ಅನಿತಾ ನಜಾರೆ, ಪ್ರೌಢಶಿಕ್ಷಣ ನಿರ್ದೇಶಕ ಕೃಷ್ಣಾಜೀ ಕರಿಚಣ್ಣವರ ಆಗಮಿಸಲಿದ್ದಾರೆ. ಎಐಪಿಟಿಎಫ್ ರಾಷ್ಟ್ರೀಯ ಅಧ್ಯಕ್ಷ ಬಸವರಾಜ ಗುರಿಕಾರ, ಸಂಘದ ನಿಕಟಪೂರ್ವ ಅಧ್ಯಕ್ಷ ವಿ.ಎಂ. ನಾರಾಯಣಸ್ವಾಮಿ, ಸರ್ಕಾರಿ ನೌಕರರ ಸಂಘದ ಖಜಾಂಚಿ ಶಿವರುದ್ರಯ್ಯ, ಕೃಷ್ಣೇಗೌಡ, ಮಲ್ಲಿಕಾರ್ಜುನ, ನಾಗಭೂಷಣ, ನಜೀರ್ ಅಹ್ಮದ್ ಅವರನ್ನು ಸನ್ಮಾನಿಸಲಾಗುತ್ತದೆ.

ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಗಲಿ ಅಧ್ಯಕ್ಷತೆ ವಹಿಸಲಿದ್ದಾರೆ.

ಫೆ.28 ರಂದು ಶೈಕ್ಷಣಿಕ ಸಮ್ಮೇಳನದಲ್ಲಿ ಭಾಗವಹಿಸುವ ಎಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಓಓಡಿ ಸೌಲಭ್ಯವನ್ನು ಸರ್ಕಾರ ಮಂಜೂರು ಮಾಡಿದೆ.

ಒಂದು ಲಕ್ಷ ಜನ ನಿರೀಕ್ಷೆ:

ಸಮ್ಮೇಳನಕ್ಕೆ ರಾಜ್ಯದ ನಾನಾ ಮೂಲೆಗಳಿಂದ ಪ್ರಾಥಮಿಕ ಶಾಲಾ ಶಿಕ್ಷಕರು ಆಗಮಿಸಲಿದ್ದು, ಕನಿಷ್ಠ ಒಂದು ಲಕ್ಷ ಶಿಕ್ಷಕರು ಪಾಲ್ಗೊಳ್ಳಲಿದ್ದಾರೆ. ಎಲ್ಲರಿಗೂ ಉತ್ತರಕರ್ನಾಟಕದ ಶೈಲಿಯ ಜೋಳದ ರೊಟ್ಟಿಯ ಊಟದ ವ್ಯವಸ್ಥೆ ಮಾಡಲಾಗಿದೆ.

ಸಂಘಕ್ಕೆ 55 ವಸಂತಗಳು:

1971 ರಲ್ಲಿ ದಿ. ಕೆ.ಎಲ್. ಜಯಶಂಕರ ಎಂಬ ದಲಿತ ಶಿಕ್ಷಕ ಈ ಸಂಘಟನೆಯನ್ನು ಹುಟ್ಟಹಾಕಿದ್ದು, ಶಿಕ್ಷಕರ ಪರವಾಗಿ ಹೋರಾಟ ಮಾಡಿ, ಶಿಕ್ಷಕರಿಗೆ ನ್ಯಾಯ ಒದಗಿಸಿದ ಕಾರಣ, ಈ ಸಂಘಕ್ಕೆ ಸರ್ಕಾರದಿಂದ ಅಧಿಕೃತ ಮಾನ್ಯತೆ ದೊರೆತಿದ್ದು, 1981 ರಲ್ಲಿ ಗುಂಡುರಾವ ಮುಖ್ಯಮಂತ್ರಿಯಾಗಿದ್ದ ಕಾಲಘಟ್ಟದಲ್ಲಿ ಎಂದು ಸದ್ಯದ ಸಂಘಟನೆಯ ಕ್ರಿಯಾಶೀಲ ಅಧ್ಯಕ್ಷ ಚಂದ್ರಶೇಖರ ನುಗ್ಗಲಿ ಮಾಹಿತಿ ನೀಡಿದರು.

# ಅಂಗವಿಕಲರ ಹಕ್ಕಿಗಾಗಿ ಹೋರಾಟ: ಸಂಗಮೇಶ ಭಾವಿದೊಡ್ಡಿ ಹೇಳಿಕೆ



• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬಸವಕಲ್ಯಾಣದ ಅನುಭವ ಮಂಟಪದಿಂದ ವಿಧಾನಸೌಧದ ವರೆಗೆ ಕರ್ನಾಟಕ ಅಂಗವಿಕಲರ ರಾಜ್ಯ ಒಕ್ಕೂಟದ ವತಿಯಿಂದ ಹಮ್ಮಿಕೊಳ್ಳಲಾದ ಹೋರಾಟ ಕಾರ್ಯಕ್ರಮದಲ್ಲಿ ಸಾಮಾಜಿಕ ಹೋರಾಟಗಾರ ಸಂಗಮೇಶ ಭಾವಿದೊಡ್ಡಿ ಅವರು ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು.

ಹೋರಾಟವನ್ನು ಉದ್ದೇಶಿಸಿ ಮಾತನಾಡಿದ ಅವರು, ಇದು ಅಂಗವಿಕಲರ ಹಕ್ಕಿನ ಹೋರಾಟವಾಗಿದ್ದು, ಸರ್ಕಾರ ಅಂಗವಿಕಲರಿಗೆ "ವಿಶೇಷ ಚೇತನರು" ಎಂಬ ನಾಮಕರಣ ನೀಡಿದರೂ, ಅವರಿಗೆ ಅಗತ್ಯವಾದ ವಿಶೇಷ ಅನುದಾನ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಮೀಸಲಾತಿ ಒದಗಿಸಿಲ್ಲ ಎಂದು ಆರೋಪಿಸಿದರು. ಈ ಹೋರಾಟವು ಯಾವುದೇ ಒಂದು ರಾಜಕೀಯ ಪಕ್ಷದ ಕಾರ್ಯಕ್ರಮವಲ್ಲ, ಕರ್ನಾಟಕ ರಾಜ್ಯದ ಎಲ್ಲಾ ವಿಶೇಷ ಚೇತನರ ಹಕ್ಕಿಗಾಗಿ ನಡೆಯುತ್ತಿರುವ ಸಾಮೂಹಿಕ ಹೋರಾಟವಾಗಿದೆ ಎಂದು ಅವರು ಹೇಳಿದರು.

ಇದೇ ವೇಳೆ, ಫೆಬ್ರವರಿ 23ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ "ಅಂಗವಿಕಲರ ನಡೆ ರಾಜಕೀಯದ ಕಡೆ" ಎಂಬ ಶೀರ್ಷಿಕೆಯಲ್ಲಿ ವಿವಿಧ ಬೇಡಿಕೆಗಳನ್ನು ಒತ್ತಾಯಿಸಿ ಪ್ರತಿಭಟನೆ ನಡೆಯಲಿದ್ದು, ರಾಜ್ಯದ ಮೂಲೆಮೂಲೆಗಳಿಂದ ವಿಶೇಷ ಚೇತನರು ಭಾಗವಹಿಸಿ ತಮ್ಮ ಹಕ್ಕುಗಳನ್ನು ಪಡೆದುಕೊಳ್ಳಬೇಕೆಂದು ಅವರು ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಮಂಗಲಾ ಮಹಿಳಾ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷೆ ಕು.ಮಂಗಲಾ ಮರಕಲೆ, ಎಂ ಆರ್ ಡಬ್ಲ್ಯೂ ಹಾಗೂ ವಿ ಆರ್ ಡಬ್ಲ್ಯೂ ಕಾರ್ಯಕರ್ತರಾದ ಗುರುನಾಥರೆಡ್ಡಿ ಚಿಂತಕಿ, ಬಾಬುರಾವ ರಾಠೋಡ, ಜಗನ್ನಾಥ, ಶಿವಕುಮಾರ ಪಾಟೀಲ್, ಬಂಡೆಪ್ಪ ಮಾಳಿ, ಶಿವಲಿಂಗ, ಅನಿತಾ, ಶಿಲ್ಪಾ, ಶಶಿಕಲಾ, ಪ್ರತಾಪ, ಗುರಮ್ಮ, ಮಂಗಲಾ ಸ್ವಾಮಿ ಹಾಗೂ ಇತರರಿದ್ದರು.

# ಭಾಗ್ಯನಗರ ಬಂದ್: ಮುಖಂಡರನ್ನು ಭೇಟಿ ಮಾಡಿದ ಸದಸ್ಯರು

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಇಲ್ಲಿನ ನಗರಸಭೆ ಸಂಕೀರ್ಣದ ಮುಂದುಗಡೆ ನಡೆದಿರುವ ಅನಿರ್ದಿಷ್ಟವಾದಿ ಧರಣಿ ಸತ್ಯಾಗ್ರಹ ದ 114 ನೇ ದಿನ ಸಂಪನ್ನಗೊಂಡಿತು. ಫೆ. 24 ರಂದು ಕರೆದಿರುವ ಕೊಪ್ಪಳ ಭಾಗ್ಯನಗರ ಬಂದ್ ಕುರಿತು ಮನವರಿಕೆ ಮಾಡಿಕೊಡಲು ಮತ್ತು ಹೋರಾಟಕ್ಕೆ ಆಹ್ವಾನ ಮಾಡಲು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ಸಂಚಾಲಕ ಸದಸ್ಯರು ವಿವಿಧ ಮುಖಂಡರನ್ನು ಭೇಟಿ ಮಾಡಿ ಆಹ್ವಾನ ನೀಡಿದರು.

ಸರ್ವಪಕ್ಷಗಳ ಮುಖಂಡರನ್ನು ಕೊಪ್ಪಳ ಭಾಗ್ಯನಗರ ಬಂದ್ ಹೋರಾಟದ ಬೆಂಬಲಕ್ಕೆ ಬರಬೇಕೆಂದು ಕರಪತ್ರ ಕೊಟ್ಟು ಆಹ್ವಾನ ಕೊಡಲಾಯಿತು. ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು ಅವರು, ಸದರಿ ಹೋರಾಟ ಬೆಂಬಲಿಸಿ, ಸರ್ಕಾರದ ಹಂತದಲ್ಲಿ ಬೇಗ ಬಲ್ಡೋಟ ವಿಸ್ತರಣೆ ನಿಲುಗಡೆ ಆದೇಶ ಮಾಡಿಸಬೇಕು. ಶೀಘ್ರವೇ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಆರೋಗ್ಯ ಮಂತ್ರಿಗಳನ್ನು ಬಾಧಿತ ಹಳ್ಳಿಗಳಿಗೆ ಕರೆದುಕೊಂಡು ಬರಬೇಕು, ಬಸಾಪುರ ಕೆರೆ ಸಾರ್ವಜನಿಕರು, ಜಾನುವಾರುಗಳಿಗೆ ನೀರು ಕುಡಿಯಲು ಬಲ್ಡೋಟ ಅತಿಕ್ರಮಣವನ್ನು ತೆರವುಗೊಳಿಸಬೇಕು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿಸಿ ಕೇಂದ್ರ ಸರ್ಕಾರ ಇರಲಿ, ರಾಜ್ಯ ಸರ್ಕಾರ ಇರಲಿ ಎರಡೂ ಸರ್ಕಾರ ಸೇರಿಸಿ ತಾವೆಲ್ಲ ಸೇರಿ ಬಾಧಿತ ಜನರ ಜೀವ ಉಳಿಸಿ ಎಂದು ಜಂಟಿ ಕ್ರಿಯಾ ವೇದಿಕೆ ಮೂಲಕ ಆಗ್ರಹಿಸಿದರು. ಅದಕ್ಕೆ ಎಲ್ಲರೂ ಸಕಾರಾತ್ಮಕವಾಗಿ ಸ್ಪಂದಿಸಿ, ಹೋರಾಟಕ್ಕೆ ಕೈಜೋಡಿಸತ್ತೇವೆ ಎಂದಿದ್ದಾರೆ. ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ,

ಶಾಸಕ ರಾಘವೇಂದ್ರ ಹಿಟ್ನಾಳ, ಸಂಸದ ರಾಜಶೇಖರ ಹಿಟ್ನಾಳ, ಮಾಜಿ ಸಂಸದ ಸಂಗಣ್ಣ ಕರಡಿ ಅವರನ್ನು ಭೇಟಿ ಮಾಡಿ ಆಮಂತ್ರಣ ಕೊಡಲಾಯಿತು. ವಿ.ಪ. ಸದಸ್ಯೆ ಹೇಮಲತಾ ನಾಯಕ, ಜೆಡಿಎಸ್ ಮುಖಂಡರಾದ ಸಿ.ವಿ.ಚಂದ್ರಶೇಖರ, ಬಿಜೆಪಿ ಮುಖಂಡರಾದ ಡಾ.ಬಬಸವರಾಜ ಕ್ಯಾವಟರ ಅವರಿಗೆ ಹೋರಾಟಕ್ಕೆ ಬೆಂಬಲಿಸಿ ಬರುವಂತೆ ಆಹ್ವಾನ ಕೊಡಲಾಯಿತು.

ತಂಡದಲ್ಲಿ ಸಂಚಾಲಕರಾದ ಮಲ್ಲಿಕಾರ್ಜುನ ಬಿ. ಗೋನಾಳ, ಮಂಜುನಾಥ ಜಿ. ಗೊಂಡಬಾಳ, ವಕೀಲರಾದ ರಾಜು ಬಾಕಳೆ, ಜ್ಯೋತಿ ಎಂ. ಗೊಂಡಬಾಳ, ಕಾವ್ಯ ಪ್ರಸನ್ನ ಗಡಾದ, ಪ್ರಕಾಶಕಿ ಮಾಲಾ ಬಡಿಗೇರ, ಸೌಮ್ಯ ನಾಲ್ವಾಡ, ಸರೋಜಾ ಬಾಕಳೆ, ವಿದ್ಯಾ ನಾಲ್ವಾಡ, ಈಶ್ವರ ಕೊರ್ಲಹಳ್ಳಿ, ನಿವೃತ್ತ ಪ್ರಾಚಾರ್ಯ ಎಸ್.ಬಿ. ರಾಜೂರು, ಪ್ರಕಾಶಕ ಡಿ.ಎಂ.ಬಡಿಗೇರ, ರಂಗ ನಿರ್ದೇಶಕ ಶರಣು ಶೆಟ್ಟರ್, ಕಾಶಪ್ಪ ಚಲುವಾದಿ, ನಿವೃತ್ತ ನ್ಯಾಯಾಂಗ ಅಧಿಕಾರಿ ಜಿ.ಬಿ.ಪಾಟೀಲ ಮುಂತಾದ ಪ್ರಮುಖರು ಇದ್ದರು. 114ನೇ ದಿನದ ಧರಣಿಯನ್ನು ಮಹಾದೇವಪ್ಪ ಮಾವಿನಮಾಡು, ಶಿವಪ್ಪ ಜಲ್ಲಿ, ಗಂಗಮ್ಮ ಕೊಡೇಕಲ್, ಗವಿಸಿದ್ದಪ್ಪ ಹಲಿಗಿ, ಸುರೇಶ ಪೂಜಾರ, ಪ್ರಕಾಶ ಹೊಳೆಯಪ್ಪನನರ ಮುಂತಾದವರು ನಡೆಸಿದರು.

# ಕೃಷಿ ಲಾಭದಾಯಕ ಕ್ಷೇತ್ರವಾಗಲೂ ಸಂಶೋಧನೆ ಅಗತ್ಯ: ಸಚಿವ ಈಶ್ವರ್ ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಕೃಷಿ ಲಾಭದಾಯಕ ಕ್ಷೇತ್ರವಾಗಲೂ ಚರ್ಚೆ, ಸಂಶೋಧನೆ, ಮಾರುಕಟ್ಟೆ ಲಭ್ಯತೆ, ಸರ್ಕಾರದ ಯೋಜನೆಗಳು ರೈತರ ಮನೆ ಬಾಗಿಲಿಗೆ ತಲುಪುವಂತಾಗಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಅವರು ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಮೀನುಗಾರಿಕೆ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ನಗರದ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಿದ ಉದ್ಯೋಗ ಮೇಳ, ಸಿರಿಧಾನ್ಯ ಮೇಳ, ಫಲ ಮತ್ತು ಪುಷ್ಪ ಪ್ರದರ್ಶನ ಹಾಗೂ ಮತ್ಸ ಮೇಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕೈಗಾರಿಕೆಗಳು ಇಲ್ಲದಿದ್ದರಿಂದ ಶೇ. 75 ಪ್ರತಿಶತ ಜನ ಕೃಷಿ ಮೇಲೆ ಅವಲಂಬನೆ ಆಗಿದ್ದಾರೆ. ಆದ್ದರಿಂದ ಕೃಷಿಗೆ ಉತ್ತೇಜನೆ ನೀಡಬೇಕಿದೆ. ಪ್ರತಿ ವರ್ಷ ಜಿಲ್ಲೆಯಲ್ಲಿ 10 ಲಕ್ಷ ಎಕರೆ ಭೂಮಿಯಲ್ಲಿ ಬಿತ್ತಣಿಕೆ ಮಾಡಲಾಗುತ್ತದೆ. ಅದರಲ್ಲಿ ಶೇ.50 ಸೋಯಾ, ಶೇ.25 ತೊಗರಿ ಹಾಗೂ ಶೇ. 25 ಪ್ರತೀಶತದಲ್ಲಿ ಇತರೆ ಬೆಳೆಗಳನ್ನು ಬೆಳೆಯಲಾಗುತ್ತದೆ. ರೈತರು ಕೇವಲ ಒಂದೇ ಬೆಳೆಗೆ ಅವಲಂಬನೆ ಆಗದೆ ಸಿರಿಧಾನ್ಯಗಳಂತಹ ಬೇರೆ ಬೇರೆ ಬೆಳೆಗಳನ್ನು ಬೆಳೆಸಲು ಮುಂದಾಗಬೇಕು. ಸಿರಿಧಾನ್ಯಗಳು ಕೇವಲ ಆಹಾರವಲ್ಲ; ಆರೋಗ್ಯಪೂರ್ಣ ಜೀವನದ ಭದ್ರ ಆಧಾರವಾಗಿವೆ. ಸಿರಿಧಾನ್ಯಗಳು ಕಡಿಮೆ ನೀರಿನಲ್ಲಿ ಬೆಳೆಯುವ ಶಾಶ್ವತ ಬೆಳೆಗಳಾಗಿದ್ದು, ಹವಾಮಾನ ಬದಲಾವಣೆಯ ಸಂದರ್ಭದಲ್ಲಿಯೂ ರೈತರಿಗೆ ಭದ್ರ ಆದಾಯ ನೀಡುತ್ತವೆ. ಆರೋಗ್ಯ ಮತ್ತು ಕೃಷಿ ಎರಡನ್ನೂ ಒಟ್ಟಿಗೆ ರಕ್ಷಿಸುವ ಶಕ್ತಿ ಸಿರಿಧಾನ್ಯಗಳಲ್ಲಿ ಅಡಗಿದೆ. ಜನರು ತಮ್ಮ ದೈನಂದಿನ ಆಹಾರದಲ್ಲಿ ಸಿರಿಧಾನ್ಯಗಳನ್ನು ಅಳವಡಿಸಿಕೊಳ್ಳಬೇಕು. ರೈತರು ಮೌಲ್ಯವರ್ಧಿತ ಉತ್ಪನ್ನಗಳತ್ತ ಗಮನಹರಿಸಬೇಕು ಎಂದ ಅವರು ಈ ಮೇಳದ ಮುಖ್ಯ ಉದ್ದೇಶ ಸರ್ಕಾರದ ಯೋಜನೆ, ಕಾರ್ಯಕ್ರಮ, ತೋಟಗಾರಿಕೆ ಉತ್ಪನ್ನ ಹಾಗೂ ಮಾರುಕಟ್ಟೆಯಲ್ಲಿ ರೈತರಿಗೆ ಬೆಂಬಲ ಬೆಲೆ ಸಿಗಬೇಕು ಎಂಬುದು ಮುಖ್ಯ ಉದ್ದೇಶವಾಗಿದೆ ಎಂದರು.

ಜಿಲ್ಲೆಯ ರೈತರ ಖಾತೆಗೆ ಸುಮಾರು 450 ಕೋಟಿ ರೂ. ಜಮೆ: ಕಳೆದ ವರ್ಷದಲ್ಲಾದ ಅತೀವೃಷ್ಟಿಯಿಂದ 1.65 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿ ರೈತರು ಸಂಕಷ್ಟದಲ್ಲಿದ್ದರು, ಆದರೆ ಸರಕಾರವು ಕಾಳಜಿ ವಹಿಸಿ ಹೆಚ್ಚಿನ ಪರಿಹಾರ ಒದಗಿಸಿದೆ. ಒಟ್ಟು 288 ಕೋಟಿ ರೂಪಾಯಿ 1.92 ಲಕ್ಷ ರೈತರ ಖಾತೆಗೆ ನೇರವಾಗಿ ಜಮೆ ಆಗಿದೆ. ಇದಕ್ಕೆ ಅನುಗುಣವಾಗಿ ಬೆಳೆ ಕಟಾವು ಪ್ರಯೋಗ ಮಾಡಿಸಿ ಈಗಾಗಲೇ 100 ಕೋಟಿ ರೂ. ಬೆಳೆವಿಮೆ ಹಣ ಜಮೆ ಆಗಿದ್ದು, ಇನ್ನು 50 ಕೋಟಿ ರೂ. ಬೆಳೆ ವಿಮೆ ಬರಲಿದೆ. ಒಟ್ಟು 450 ಕೋಟಿ ರೂ. ಜಿಲ್ಲೆಯ ರೈತರ ಖಾತೆಗೆ ನೇರವಾಗಿ ಹಣ ಜಮೆ ಆಗಿದೆ ಎಂದು ಸಚಿವರು ತಿಳಿಸಿದರು.

ರೈತರ ಬೆಳೆಗಳಿಗೆ ಉತ್ತಮ ಮಾರುಕಟ್ಟೆ ಬೆಲೆ ದೊರೆಯಬೇಕು, ರೈತರು ಸಹ ವಿವಿಧ ಬೆಳೆಗಳನ್ನು ಬೆಳೆಯಬೇಕೆಂದರು. ಎಲ್ಲೆಡೆ ಮಾಲಿನ್ಯ ಕಂಡುಬರುತ್ತಿದೆ. ಮಣ್ಣಿನಲ್ಲಿ, ಬೆಳೆಗಳಲ್ಲಿ ರಸಾಯನಿಕಗಳ ಪ್ರಮಾಣ ಹೆಚ್ಚುತ್ತಿದೆ. ರೈತರು ಹೆಚ್ಚು ಸಿರಿಧಾನ್ಯ ಬೆಳೆಯಬೇಕಿದೆ. ಜಿಲ್ಲೆಯಲ್ಲಿ ಕಾರಂಜಾ, ಮೇಕರ ನೀರಾವರಿ ಚಾಲ್ತಿಯಲ್ಲಿದೆ. ಔರಾದ್ ಕೆರೆಗಳನ್ನು ತುಂಬಿಸಲಾಗುವುದು, ಒಟ್ಟಾರೆ ರೈತರ ಅಭಿವೃದ್ಧಿಗೆ ತಾವು ಬದ್ಧರಿದ್ದೇವೆ ಎಂದು ಸಚಿವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ್ ಬದೋಲೆ ಪ್ರಾಸ್ತಾವಿಕವಾಗಿ ಮಾತನಾಡಿ, ಉದ್ಯೋಗ ಮೇಳದಲ್ಲಿ 32 ವಿವಿಧ ಕಂಪನಿಗಳು ಭಾಗವಹಿಸಿವೆ, ಉದ್ಯೋಗಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಳ್ಳಲು ಎನ್.ಆರ್.ಎಲ್.ಎಮ್ ಯೋಜನೆಯಿಂದ ಜಿ.ಪಿ.ಎಲ್.ಎಫ್ ಗಳ ಮೂಲಕ ಗ್ರಾಮಗಳಲ್ಲಿ ಪ್ರಚಾರ ನಡೆಸಿ ನೊಂದಣಿಗಾಗಿ ಆನ್‌ಲೈನ್ ಲಿಂಕ್‌ನಲ್ಲಿ ಅವಕಾಶ ನೀಡಲಾಗಿದೆ, ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಂಡು ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮೇಳದ ಅಂಗವಾಗಿ ಕೃಷಿ, ತೋಟಗಾರಿಕೆ, ಮೀನುಗಾರಿಕೆ, ಗ್ರಾಮೀಣಾಭಿವೃದ್ಧಿ, ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಖಾಸಗಿ ಸಂಸ್ಥೆಗಳು ಸ್ಥಾಪಿಸಿದ 49 ಮಳಿಗೆಗಳಿಗೆ ಸಚಿವರು ಭೇಟಿ ನೀಡಿ ವೀಕ್ಷಣೆ ನಡೆಸಿದರು.

ವೇದಿಕೆ ಕಾರ್ಯಕ್ರಮ ಚಾಲನೆಗೂ ಮುನ್ನ ನಗರದ ಛತ್ರಪತಿ ಶಿವಾಜಿ ವೃತ್ತದಿಂದ ನೆಹರು ಕ್ರೀಡಾಂಗಣ ವರೆಗೆ ನಡೆದ ಸಿರಿಧಾನ್ಯ ನಡಿಗೆ ಮೆರವಣಿಗೆಗೆ ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಚಾಲನೆ ನೀಡಿದರು, ಮೆರವಣಿಗೆಯಲ್ಲಿ ಸಿರಿಧಾನ್ಯ ಹೊತ್ತ ಮಹಿಳೆಯರು ಗಮನ ಸೆಳೆದರು.


ಈ ಸಂದರ್ಭದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ನಾರಾಯಣರಾವ, ಬಾಬು ಹೊನ್ನನಾಯ್ಕ, ಅಧ್ಯಕ್ಷರು ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನಗುಡಿ ಕಲಬುರಗಿ, ಬೀದರ ಕೃಷಿಕ ಸಮಾಜದ ಜಿಲ್ಲಾಧ್ಯಕ್ಷರಾದ ಸಿದ್ರಾಮಯ್ಯಾ ಸ್ವಾಮಿ, ವಿಶ್ವನಾಥ ಪಾಟೀಲ ಮಾಡಗೊಳ, ರಾಜ್ಯ ಪ್ರತಿನಿಧಿ, ಕರ್ನಾಟಕ ಪ್ರದೇಶ ಕೃಷಿಕ ಸಮಾಜ, ಬೆಂಗಳೂರು, ಹಣಮಂತ ಚೌಹಾಣ್, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಬೀದರ ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ, ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ, ಮೀನುಗಾರಿಕೆ ಉಪ ನಿರ್ದೇಶಕರಾದ ಜಾನವಿ ಸೇರಿದಂತೆ ಅನೇಕ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

### ಶಿವಾಜಿ ಜಯಂತಿ ಸಂಭ್ರಮದಲ್ಲಿ ಯತ್ನಾಳ ದೇಶಪತಿ ಅಬ್ಬರದ ಭಾಷಣ

# ವಂದೇ ಮಾತರಂ ಹೇಳಿ ಇಲ್ಲದಿದ್ದರೆ ಇಲ್ಲಿಂದ ತೊಲಗಿ: ಯತ್ನಾಳ್



> “ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗ್ ಜೀವನ್ ರಾವ್ ಅವರ ಪು ತ್ತಾಳಿ ನಿರ್ಮಾಣಕ್ಕೆ ಏಳು ಎಂಟು ಬಾರಿ ಗುರುಮಠಕಲ್ ಕ್ಷೇತ್ರದಿಂದ ಗೆದ್ದವರು ಮುಂದಾಗಲಿಲ್ಲ, ಆ ಕೆಲಸ ಶರಣ ಗೌಡ ಕಂದಕೂರು ಅವರಿಂದ ಆಗಿದೆ.
>
> ಬಸನಗೌಡ ಆರ್ ಪಾಟೀಲ್ ಯತ್ನಾಳ.




• ಮಲ್ಲಮ್ಮ ನುಡಿ ವಾರ್ತೆ
ಗುರುಮಠಕಲ್

ಛತ್ರಪತಿ ಶಿವಾಜಿ ಮಹಾರಾಜ ಅವರ ಜಯಂತಿಯ ಅಂಗವಾಗಿ ಭಾಗವಹಿಸಿದ ಬಸನಗೌಡ ಅರ್ ಪಾಟೀಲ್ ಯತ್ನಾಳ ಇಸ್ ದೇಶ ಮೇ ರಹೇನಾ ಹೈತೋ ವಂದೇ ಮಾತರಂ ಬೋಲ್ನಾ ಹೋಗಾನಹೀ ತೋ ಜಾಗ ಖಾಲಿ ಕರ್ನಾ ಹೋಗಾ ಎಂದು ದೇಶದಲ್ಲಿರುವ ದೇಶದ್ರೋಹಿಗಳಿಗೆ ದೇಶಭಕ್ತಿ, ರಾಷ್ಟಭದ್ರತೆ ಕುರಿತಾದ ಕಠಿಣ ಸಂದೇಶ ನೀಡಿದರು.

ಪಟ್ಟಣದಲ್ಲಿ ಶಿವಾಜಿ ಮಹಾರಾಜರ 396 ನೇಯ ಜಯಂತಿಯನ್ನು ಹಿಂದೂ ಯುವ ಘರ್ಜನೆ ವೇದಿಕೆ ವತಿಯಿಂದ ಫೆಬ್ರುವರಿ 21 ಶನಿವಾರದಂದು ವಿಜೃಂಭಣೆಯಿಂದ ಆಚರಿಸಲಾಯಿತು.

ನಗರೇಶ್ವರ ದೇವಸ್ಥಾನದಿಂದ ಶಿವಾಜಿ ಮಹಾರಾಜರ ಪುತ್ತಳಿಗೆ ಪೂಜೆ ಸಲ್ಲಿಸಿ, ನಂತರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಭವ್ಯ ಶೋಭಾಯಾತ್ರೆ ನಡೆಯಿತು. ನಂತರ ನಡೆದ ಸಮಾರಂಭದಲ್ಲಿ ವಿಶೇಷ ಆಹ್ವಾನಿತರಾದ ಮಾಜಿ ಕೇಂದ್ರ ಸಚಿವ, ಪ್ರಸ್ತುತ ವಿಜಯಪುರ ಶಾಸಕರಾದ ಬಸನಗೌಡ ಯತ್ನಾಳ ಹಾಗೂ ಪ್ರಮುಖ ವಕ್ತಾರರಾದ ಅಮೋಘ ದೇಶಪತಿ ಪಾಲ್ಗೊಂಡರು.

ವಕ್ತಾರರಾದ ಅಮೋಘ ದೇಶಪತಿ ಜಯಂತಿ ಕುರಿತು ಮಾತನಾಡಿ ಶಿವಾಜಿ ಮಹಾರಾಜರ ಶೌರ್ಯ, ತಂತ್ರಜ್ಞಾನ ಹಾಗೂ ಸ್ವರಾಜ್ಯದ ಕನಸನ್ನು ಸ್ಮರಿಸಿದರು, “ದೇಶದ ಸ್ವಾಭಿಮಾನ ಮತ್ತು ಭದ್ರತೆ ಎಲ್ಲಕ್ಕಿಂತ ಮುಖ್ಯ” ಎಂದು ಹೇಳಿದರು. ರಾಷ್ಟಭಕ್ತಿ, ಗಡಿಭದ್ರತೆ ಮತ್ತು ರೊಹಿಂಗ್ಯ ನುಸುಳುಕೊರರಿಂದ ದೇಶದ ಆರ್ಥಿಕತೆ ಮೇಲಾಗುವ ಪರಿಣಾಮ, ಮತಾಂತರ, ಲವ್ ಜಿಹಾದ್ ಕುರಿತು ವಿಸ್ತೃತವಾಗಿ ಮಾತನಾಡಿದರು.

ಬಸನಗೌಡ ಯತ್ನಾಳ ಮಾತನಾಡಿ ಭಾರತದಲ್ಲಿ ಪ್ರತಿಯೊಬ್ಬರ ಮನೆಯಲ್ಲಿ ಪೂಜೆಗೊಳ್ಳುವ ಏಕೈಕ ವ್ಯಕ್ತಿ ಶಿವಾಜಿ ಮಹಾರಾಜರು ಕೇವಲ ಒಂದು ಪ್ರಾಂತ, ಒಂದು ಜಾತಿಗೆ ಸೀಮಿತವಾಗದೆ ಹಿಂದೂಗಳ ರಕ್ಷಣೆ ಮಾಡಿದ್ದಾರೆ, ದಕ್ಷಿಣ ಕನ್ನಡ ಜಿಲ್ಲೆಯ ಶಿವಪ್ಪ ನಾಯಕರಿಗೆ ಸಹಾಯ ಕುರಿತಾದ ವಿಚಾರ ಪ್ರಸ್ತಾಪಿಸಿದರು, ರಾಜಕೀಯ ವಿಚಾರಗಳನ್ನು ಸ್ಪರ್ಶಿಸಿದ ಅವರು, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ನೀತಿಗಳನ್ನು ಟೀಕಿಸಿ, ಜನರ ಭಾವನೆಗಳನ್ನು ಕಡೆಗಣಿಸಿದ ಸರ್ಕಾರಗಳು ದೀರ್ಘಕಾಲ ಉಳಿಯುವುದಿಲ್ಲ ಎಂದು ಅಭಿಪ್ರಾಯಪಟ್ಟರು. ಮುಂದಿನ ವರ್ಷಗಳಲ್ಲಿ ಜನತೆ ತಮ್ಮ ತೀರ್ಪನ್ನು ನೀಡಲಿದ್ದಾರೆ, ಖಂಡಿತ ಮುಂದಿನ ಬಾರಿ ನಾನೇ ಮುಖ್ಯಮಂತ್ರಿಯಾಗುವೆ ಎಂಬ ವಿಶ್ವಾಸವನ್ನೂ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಬಿ. ಆರ್. ಅಂಬೇಡ್ಕರ್ ಅವರ ಸಮಾನತೆ ಮತ್ತು ನ್ಯಾಯದ ಸಂದೇಶವನ್ನು ಸ್ಮರಿಸಿ, ಅವರು ಕೇವಲ ದಲಿತ ನಾಯಕರಲ್ಲ ಈ ದೇಶದ ನಾಯಕ ಎಂದು ಹೇಳಿದರು, ಭಾರತ ವಿಭಜನೆ ಸಮಯದಲ್ಲಿ ಡಾ. ಅಂಬೇಡ್ಕರ್ ರವರು ಬರೆದ 'ದ ಪರ್ಟೀಷನ್ ಆಫ್ ಇಂಡಿಯಾ' ಪುಸ್ತಕ ಸಾಕಷ್ಟು ವಿಷಯ ತಿಳಿಸುತ್ತದೆ, ನಮಗೆ ಸಮರ್ಥ ನಾಯಕತ್ವ ಸ್ವತಂತ್ರ್ಯದ ನಂತರ ಸಿಗಲಿಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಸಂಸದ ಡಾ. ಉಮೇಶ್ ಜಾಧವ್ ವೇದಿಕೆ ಹಂಚಿಕೊಂಡರು, ಹಿಂದೂ ಯುವ ಘರ್ಜನೆ ಅಧ್ಯಕ್ಷ ವೆಂಕಟೇಶ್ ಮುದಿರಾಜ್, ರಾಜರಮೇಶ್ ಗೌಡ, ರಮೇಶ್ ಹೂಗಾರ್, ನರಸಪ್ಪ, ಬನ್ನಪ್ಪ, ನರಸಿಮುಲು ಗಂಗನೊಳ, ಶಂಕರ್, ಶಿವು, ಕಲಬುರಗಿ ವಿಭಾಗ ಬಜರಂಗದಳ ಸಹ ಸಂಯೋಜಕ ಶಿವಕುಮಾರ್, ಪರಶುರಾಮ ಸೆಗೂರಕರ್, ಶ್ರೀನಿವಾಸ್ ಯಾದವ್ ಸೇರಿದಂತೆ ವಿವಿಧ ಸಂಘಟನೆಗಳ ಕಾರ್ಯಕರ್ತರು, ಸಾರ್ವಜನಿಕರು ಭಾಗವಹಿಸಿದ್ದರು.

# ಸಕಾರಾತ್ಮಕ ಚಿಂತನೆಗಳಿಗೆ ಸುದರ್ಶನ ಕ್ರಿಯೆ ಅಗತ್ಯ: ಆನಂದ ಬಾರಿಗಿಡದ



• ಮಲ್ಲಮ್ಮ ನುಡಿ ಹುಣಸಗಿ

ನಿತ್ಯ ಜೀವನದ ಜಂಜಾಟದಲ್ಲಿ ಸುದರ್ಶನ ಕ್ರಿಯೆಯು ಸಕಾರಾತ್ಮಕ ಚಿಂತನಗೆಳಿಗೆ ದಾರಿದೀಪವಾಗಿದೆ ಎಂದು ಆರ್ಟ ಆಫ್ ಲೀವಿಂಗ್‌ನ ಶಿಕ್ಷಕ ಆನಂದ ಬಾರಿಗಿಡದ ಹೇಳಿದರು.

ಪಟ್ಟಣದ ಯುಕೆಪಿ ಕ್ಯಾಂಪಿನ ಕಲ್ಯಾಣ ಮಂಟಪದಲ್ಲಿ 6 ದಿನಗಳಿಂದ ಜರುಗುತ್ತಿರುವ ಆರ್ಟ ಆಫ್ ಲೀವಿಂಗ್ ನ ಆನಂದ ಅನುಭೂತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಧ್ಯಾನದಿಂದ ಏಕಾಗ್ರತೆ ಸಿಗುತ್ತದೆ, ಇಡೀ ದಿನ ಲವಲವಿಕೆಯಿಂದ ಇರಲು ಸಾಧ್ಯ ಎಂದರು. ಗುರು ಹುಲಕಲ್ ಮಾತನಾಡಿ ಸುದರ್ಶನ ಕ್ರಿಯೆಯು ಇಡೀ ದಿನ ವ್ಯಕ್ತಿಯನ್ನು ಕ್ರಿಯಾಶೀಲನನ್ನಾಗಿ ಇಡುತ್ತದೆ. ದಿನಂಪ್ರತಿ ಸುದರ್ಶನ ಕ್ರಿಯೆ ಮಾಡುವುದರಿಂದ ದೇಹದಲ್ಲಿನ ಮಾಲಿನ್ಯ ಹೊರಹೋಗಿ ಶ್ವಾಸಕೋಶವನ್ನು ಸ್ವಚ್ಛಗೊಳಿಸಿ ಹೊಸ ಚೈತನ್ಯವನ್ನು ತರುತ್ತದೆ ಎಂದು ತಿಳಿಸಿದರು.

ನಂತರ ಆರ್ಟ್ ಆಫ್ ಲಿವಿಂಗ್ ನ ಶಿಕ್ಷಕಿ ಸಿದ್ದಮ್ಮ ಅವರು6 ದಿನಗಳಿಂದ ಕಲಿತಿರುವ ಸುದರ್ಶನ ಕ್ರಿಯೆಯನ್ನು ದಿನನಿತ್ಯ ಮಾಡುವುದರಿಂದ ಆರೋಗ್ಯವನ್ನು ಕಾಪಾಡಿಕೊಂಡು ಕುಟುಂಬದಲ್ಲಿ ಸಕಾರಾತ್ಮಕ ಚಿಂತನೆಗಳು ಪ್ರತಿಫಲಿಸುತ್ತವೆ, ರೋಗನಿರೋಧಕ ಶಕ್ತಿ ಹೆಚ್ಚಿಸುತ್ತದೆ ಎಂದು ತಿಳಿಸಿದರು. 48ದಿನಗಳ ಕಾಲ ನಿರಂತರ ಸುದರ್ಶನ ಕ್ರಿಯೆ ಮಾಡುವುದರಿಂದ ಹೊಸ ಉಲ್ಲಾಸ, ಉತ್ಸಾಹ ಲಭಿಸುತ್ತದೆ ಎಂದರು. ಶಿಬಿರಾರ್ಥಿಗಳು ದಿನಂಪ್ರತಿ ಮನೆಯಲ್ಲಿ ಸುದರ್ಶನ ಕ್ರಿಯೆಯನ್ನು ಮಾಡುವದು ಹಾಗೂ ಕನಿಷ್ಠ ವಾರಕ್ಕೊಮ್ಮೆ ಎಲ್ಲರೂ ಜೊತೆಗೂಡಿ ಧ್ಯಾನವನ್ನು ಮಾಡುಬೇಕು ಎಂದರು.

ನಿತ್ಯ ಒತ್ತಡದ ಜೀವನ ಜೊತೆಗೆ ಸಾಮಾಜಿಕ ಜಾಲತಾಣಗಳ ಕಡೆಗೆ ಹೆಚ್ಚು ಸಮಯ ನೀಡುವುದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತವೆ. ಪ್ರಸ್ತುತ ಒತ್ತಡ ರಹಿತ ಜೀವನದ ಅಗತ್ಯವಿದೆ. ಹೀಗಾಗಿ ನಿತ್ಯ ಯೋಗ, ಧ್ಯಾನ, ಸುದರ್ಶನ ಕ್ರಿಯೆಯ ಅಗತ್ಯವಿದೆ ಎಂದು ಶಿಬಿರಾರ್ಥಿ ಮಹೇಶ ಸ್ಥಾವರಮಠ ಹೇಳಿದರು.

ಆರ್ಟ ಆಫ್ ಲೀವಿಂಗ್‌ನ ಸ್ವಯಂ ಸೇವಕರಾದ ನಂದುಲಾಲ್ ಠವಾಣಿ, ನೀಲಕಂಠ ವೈಲಿ, ಮಲ್ಲಿಕಾರ್ಜುನ ದೇಸಾಯಿ, ಮುತ್ತು ಜಂಬಲದಿನ್ನಿ, ಜ್ಯೋತಿ ಜಂಬಲದಿನ್ನಿ, ಲಲಿತಾ ವೈಲಿ, ವಿಜಯಲಕ್ಷ್ಮಿ ದೇಶಮುಖ, ಅಕ್ಕಮಹಾದೇವಿ ದೇಶಮುಖ, ಸವಿತಾ ಬೆಳ್ಳಿ, ಸರೋಜಿನಿ ಅಮರಣ್ಣನವರ, ನಂದಿನಿ ಅಂಗಡಿ, ನಿಖಿತಾ ಅಂಗಡಿ, ಭಾಗವಹಿಸಿದ್ದರು.

# ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ



• ಮಲ್ಲಮ್ಮ ನುಡಿ ವಾರ್ತೆ,ಗುರುಮಠಕಲ್

ಗುರುಮಠಕಲ್: ಪಟ್ಟಣದ ಹೊರವಲಯದಲ್ಲಿರುವ ಎಸ್‌ಎಲ್‌ಟಿ ಪಿಯುಸಿ ಕಾಲೇಜಿನಲ್ಲಿ ವಿಜ್ಞಾನ ವಿಭಾಗದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಭಾನುವಾರ ಹಮ್ಮಿಕೊಳ್ಳಲಾಯಿತು. ಕಾಲೇಜಿನ ಪ್ರಾಂಶುಪಾಲರಾದ ನಾಗರಾಜ್ ಅವರು ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಯಾದಗಿರಿಯ ಕನ್ನಡ ಉಪನ್ಯಾಸಕರಾದ ಸಂತೋಷ ಮಾತನಾಡಿ, ಪಿಯುಸಿ ನಂತರದ ಹಂತವು ಜೀವನದಲ್ಲಿ ಮಹತ್ವದ್ದಾಗಿದೆ. ಈ ಸಮಯದಲ್ಲಿ ತೆಗೆದುಕೊಳ್ಳುವ ನಿರ್ಧಾರಗಳು ಭವಿಷ್ಯವನ್ನು ರೂಪಿಸುತ್ತವೆ ಎಂದು ಹೇಳಿದರು. ಪರೀಕ್ಷೆಯನ್ನು ಹಬ್ಬದಂತೆ ಸ್ವಾಗತಿಸಬೇಕು ದೂರದರ್ಶನ ಮತ್ತು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಓದಿನತ್ತ ಗಮನಹರಿಸಬೇಕು. ಆರೋಗ್ಯಕ್ಕೂ ಸಮಾನ ಪ್ರಾಮುಖ್ಯತೆ ನೀಡಬೇಕು ಎಂದು ಪತ್ರಕರ್ತ ಸಂಘದ ಅಧ್ಯಕ್ಷ ರವಿ ಬುರನೋಳ್ ವಿದ್ಯಾರ್ಥಿಗಳಿಗೆ

ಕಿವಿಮಾತು ಹೇಳಿದರು. ಪ್ರಾಂಶುಪಾಲರು ಅಧ್ಯಕ್ಷೀಯ ಭಾಷಣದಲ್ಲಿ, ಈ ವರ್ಷವೂ ಶೇ.100 ರಷ್ಟು ಫಲಿತಾಂಶ ಬರಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳು ಹೆಚ್ಚಿನ ಪರೀಕ್ಷೆಗಳನ್ನು ಬರೆದು ತಮ್ಮ ಸಾಮರ್ಥ್ಯವನ್ನು ಹೆಚ್ಚಿಸಿಕೊಂಡಿದ್ದಾರೆ ಎಂದು ಹೇಳಿದರು. ಬೀಳ್ಕೊಡುಗೆ ಸಂದರ್ಭದಲ್ಲಿ ವಿದ್ಯಾರ್ಥಿನಿ ಗಾಯತ್ರಿ ಹಾಗೂ ತರೋಣ ತಮ್ಮ ಸ್ನೇಹಿತರೊಂದಿಗೆ ಕಳೆದ ನೆನಪುಗಳನ್ನು ಹಂಚಿಕೊಂಡರು. ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ, ಪರೀಕ್ಷಾ ಪ್ಯಾಡ್ ಮತ್ತು ಪೆನ್ನುಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಎಸ್‌ಎಲ್‌ಟಿ ಶಾಲೆಯ ಮುಖ್ಯಗುರುಗಳು ಡೆನ್ನಿಮುರರೊ, ಶಾನ್ ಬೇಗಂ, ರಾಹುಲ್, ತನ್ವೀರ್ ಅಹ್ಮದ್, ಶರಣಪ್ಪ ಎಂ.ಟಿ. ಪಲ್ಲಿ, ಅಂಬರೀಶ್, ನಾಗೇಶ್ ಡಿ., ಯಲ್ಲಪ್ಪ (ದೈಹಿಕ ಶಿಕ್ಷಕರು), ನರೇಂದ್ರ ಸಾಕ (ಕಂಪ್ಯೂಟರ್ ಆಪರೇಟರ್), ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಶ್ರದ್ಧೆಯಿಂದ ಅಭ್ಯಾಸ ಮಾಡಿದರೆ ಸಾಧನೆ ಸಾಧ್ಯ : ಕಾಡಸಿದ್ದೇಶ್ವರ ಶ್ರೀಗಳು


• ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ



ವಿದ್ಯಾರ್ಥಿಗಳು ಜೀವನದಲ್ಲಿ ಸ್ಪಷ್ಟ ಗುರಿ ಹೊಂದಿ, ಶ್ರದ್ಧೆಯಿಂದ ಅಭ್ಯಾಸ ಮಾಡಿದರೆ ಮಾತ್ರ ಸಾಧನೆ ಮಾಡುವುದು ಸಾಧ್ಯವಾಗುತ್ತದೆ ಎಂದು ಗುಳೇದಗುಡ್ಡ ಮರಡಿಮಠದ ಅಭಿನವ ಕಾಡಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು. ಜಿಲ್ಲೆಯ ಹುನಗುಂದ ಪಟ್ಟಣದ ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಹುಚ್ಚೇಶ್ವರ ಪ್ರೌಢಶಾಲೆಯ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಶುಭಕೋರುವ ಸಮಾರಂಭ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳ ಜೀವನ ಒಂದು ತಪಸ್ಸಿದ್ದಂತೆ ಅಲ್ಲಿ ಪರಿಶ್ರಮದಿಂದ ಗಳಿಸಿದ ಜ್ಞಾನ, ಅನುಭವ ನಿರಂತರ ಶಿಸ್ತು ವ್ಯಾಸಂಗದ ಬದ್ಧತೆ ಇದ್ದಾಗ ನಿರ್ದಿಷ್ಟ ಗುರಿಯನ್ನು ಸಾಧಿಸಿ ಸಂಭ್ರಮಿಸಲು ಸಾಧ್ಯವಾಗುತ್ತದೆ ಎಂದರು. ಕಾರ್ಯಕ್ರಮದ ಮುಖ್ಯತಿಥಿಗಳಾಗಿ ಮಾತನಾಡಿದ ಡಾ. ಎಚ್.ಎಸ್. ಕಲ್ಯಾಣಮಠ ಅವರು, ಪರೀಕ್ಷೆಯ ಸಮಯದಲ್ಲಿ ಸತತ ಪ್ರಯತ್ನ ಅಗತ್ಯ, ಏಕಾಗ್ರತೆ, ಸಾಧಿಸುವ ಛಲ ಹಾಗೂ ಇಚ್ಛಾಶಕ್ತಿ ಇದ್ದರೆ ಯಾವುದೇ ಗುರಿಯನ್ನು ಸಾಧಿಸಬಹುದು ಎಂದು ಹೇಳಿದರು. ಶಾಲೆಯ ಹಳೆಯ ವಿದ್ಯಾರ್ಥಿಗಳಾದ ನಂದಾ ಜಮಖಂಡಿ, ಶ್ರೀಮತಿ ಪ್ರೀತಿ ಗಂಗಾಧರ ಮಾತನಾಡಿದರು. ಹುಚ್ಚೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಹುಚ್ಚೇಶ್ವರ ಮಹಾಸ್ವಾಮಿಗಳು ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ವಿಶ್ರಾಂತ ಶಿಕ್ಷಕರಾದ ಎಸ್.ಎಂ. ಶೆಟ್ಟರ, ಚನ್ನಪ್ಪ ಹಳ್ಳೂರ, ಆಯ್. ಎನ್. ಬಂಡಿ ಹಾಗೂ ಜಿಲ್ಲಾ ಮತ್ತು ತಾಲೂಕಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಉಮ್ಮಣ್ಣ ಯರಗಲ್, ಹುಚ್ಚಮ್ಮ ಹಡಪದ, ಸುನೀಲ ಮಾರಬಸರಿ ಅವರಿಗೆ ಸನ್ಮಾನಿಸಿ ಗೌರವಿಸಿದರು. ಶಾಲೆಯ ವಿದ್ಯಾರ್ಥಿಗಳು ವಿವಿಧ ಕ್ರೀಡಾಕೂಟ, ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಿದರು. ಸಂಘದ ಆಡಳಿತ ಮಂಡಳಿಯ ಸದಸ್ಯರಾದ ಆರ್. ಎಸ್. ಬಾಪ್ರಿ, ಎಸ್.ಬಿ ಶಾಬಾದಿ, ಸಂಘದ ಸಹಕಾರ್ಯದರ್ಶಿ ವಿದ್ಯಾಧರ ಮಳ್ಳಿ, ನಿರ್ದೇಶಕರಾದ ಅನಿಲಕುಮಾರ ಹುಚ್ಚೇಶ್ವರಮಠ, ನೂರಂದಪ್ಪ ಗಂಗನಗೌಡ್ರ ಗೌಡ್ರ, ಶಾಲೆಯ ಮುಖ್ಯೋಪಾಧ್ಯ ಎಚ್. ಎಂ. ಪಾಟೀಲ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ, ಪದಾಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಲಿಂ. ಅಪ್ಪಾರಾವ ಬಿರಾದಾರ ನುಡಿ ನಮನ ಕಾರ್ಯಕ್ರಮ

# ಸಮಾಜಮುಖಿ ಕೆಲಸಕ್ಕೆ ಬಿರಾದಾರ ಪ್ರೇರಣೆ



• ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ

ಹುಟ್ಟುಸಾವಿನ ಮಧ್ಯೆ ಅಳಿಸಲಾಗದ ಹಜ್ಜೆ ಮೂಡಿಸಿದವರಿಗೆ ನುಡಿ ನಮನ ಸಲ್ಲಿಸುತ್ತಾರೆ. ಅಂಥವರ ಸಾಲಿನಲ್ಲಿ ಹಿರಿಯ ಪತ್ರಕರ್ತ ಲಿಂ. ಅಪ್ಪಾರಾವ ಬಿ. ಬಿರಾದಾರ ನಿಲ್ಲುತ್ತಾರೆ ಎಂದು ಹಿರಿಯ ಪತ್ರಕರ್ತೆ ಶೀಲಾ ತಿವಾರಿ ಅಭಿಪ್ರಾಯಪಟ್ಟರು.

ನಗರದ ಕನ್ನಡ ಭವನದಲ್ಲಿ ಭಾನುವಾರ ಲಿಂ. ಅಪ್ಪಾರಾವ ಬಿರಾದಾರ ಅವರಿಗೆ ಆಯೋಜಿಸಿದ್ದ ನುಡಿ ನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ಹಿಂದೆ ಪತ್ರಕರ್ತರು ನಿಸ್ವಾರ್ಥವಾಗಿ ಸೇವೆ ಸಲ್ಲಿಸುತ್ತಿದ್ದರು. ಆಗ

ಅಭಿವೃದ್ಧಿ ಬಗ್ಗೆ ಚಿಂತನೆ ನಡೆ–ಯುತ್ತಿತ್ತು. ಈ ಕೊರತೆ ಈಗಿನ ಕಾಲದ ಪತ್ರಕರ್ತರಲ್ಲಿ ಕಾಣುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಕಾದಂಬರಿಕಾರ ಡಾ. ಲಕ್ಷ್ಮಣ ಕೌಂಟೆ ಮಾತನಾಡಿ, ಪತ್ರಿಕೆಯ ಮೂಲಕ ಜನಜಾಗೃತಿ ಮಾಡಿದ ಅಪ್ಪಾರಾವ ಬಿರಾದಾರ ತಾತ್ವಿಕ ಸಿದ್ಧಾಂತದ ಮೇಲೆ ಪತ್ರಿಕೆ ನಡೆಸಿಕೊಂಡು ಬಂದಿದ್ದರು ಎಂದರು.

ಅಧ್ಯಕ್ಷತೆ ವಹಿಸಿದ್ದ ಪತ್ರಕರ್ತ ದೇವೇಂದ್ರ ಶೆಳ್ಳಗಿ ಮಾತನಾಡಿ, 80ರ ದಶಕದಲ್ಲಿ ನಿಯತಕಾಲಿಕ ಪತ್ರಕರ್ತರ ಸಂಘ ಹಾಗೂ ಸಣ್ಣ ಮತ್ತು ಮಧ್ಯಮ ಪತ್ರಿಕೆಗಳ ಒಕ್ಕೂಟ ಆರಂಭಿಸಿದ ತಮ್ಮ ಒಡನಾಟ ಸ್ಮರಿಸಿಕೊಂಡರು.

ಡಿ.ಶಿವಲಿಂಗಪ್ಪ, ಸಿದ್ದಣ್ಣ ಮಾಲಗಾರ, ಡಾ. ಸೂರ್ಯಕಾಂತ ಪಾಟೀಲ, ರವೀಂದ್ರ ಶಾಬಾದಿ, ದೇವೇಂದ್ರಪ್ಪ ಕಪನೂರ, ಎ.ಬಿ. ಹೊಸಮನಿ, ಗುಂಡೂರಾವ ಕಡಣಿ, ಪ್ರೊ.ಪಿ.ಕೆ. ತಿವಾರಿ ನುಡಿ ನಮನ ಸಲ್ಲಿಸಿದರು. ಅಪ್ಪಾರಾವ ಬಿರಾದಾರ ಪುತ್ರ ಸಿದ್ದು ಬಿರಾದಾರ, ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿದರು.


ಸಾನ್ನಿಧ್ಯ ವಹಿಸಿದ್ದ ಮಂಗಲಗಿ ಶಾಂತೇಶ್ವರ ಮಠದ ಡಾ. ಶಾಂತ ಸೋಮನಾಥ ಶಿವಾಚಾರ್ಯರು ಮಾತನಾಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಜಡಿಯಪ್ಪ ಜಿ., ಸಾಹಿತಿ ಡಾ. ಕಾಶೀನಾಥ ಅಂಬಲಗಿ, ಹೋರಾಟಗಾರ ದಯಾನಂದ ಪಾಟೀಲ,

ಸಿದ್ದನಗೌಡ ಪಾಟೀಲ, ಕಡಣಿ, ಉಮಾಶಂಕರ ಚಿನಮಳ್ಳಿ, ಶರಬಸಪ್ಪ ಜಿಡಗಾ, ಶಿವರಾಜ ಅಂಡಗಿ ಸೇರಿದಂತೆ ಬಿರಾದಾರ ಕುಟುಂಬಸ್ಥರು ಇದ್ದರು.

ಪತ್ರಕರ್ತ ಡಾ. ಶಿವರಂಜನ ಸತ್ಯಂಪೇಟೆ ಪ್ರಾಸ್ತಾವಿಕ ಮಾತನಾಡಿದರು. ಸುರೇಶ ಬಡಿಗೇರ ನಿರೂಪಿಸಿ ವಂದಿಸಿದರು.

# ಗುತ್ತಿಗೆ ಹಣ ಬಿಡುಗಡೆ ಮಾಡುವಂತೆ ಗುತ್ತಿಗೆದಾರರಿಂದ ಮಾರ್ಚ್ 6 ರಂದು ಪ್ರತಿಭಟನೆ




ಬಳ್ಳಾರಿ : ಸರ್ಕಾರ ಕಳೆದ ಮೂರು ವರ್ಷಗಳಿಂದ ಗುತ್ತಿಗೆದಾರರಿಗೆ ಉಳಿಸಿಕೊಂಡ ಬಾಕಿ ಹಣ ರೂ.37,000 ಕೋಟಿ ರೂಪಾಯಿಗಳನ್ನು ತಕ್ಷಣ ಬಿಡುಗಡೆ ಮಾಡಬೇಕು ಇಲ್ಲವಾದಲ್ಲಿ ಗುತ್ತಿಗೆದಾರರಿಂದ ಮಾರ್ಚ್ 6 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ರಾಜ್ಯದ ಎಲ್ಲಾ ಗುತ್ತಿಗೆದಾರ–ರಿಂದ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಆರ್ ಮಂಜುನಾಥ್ ತಿಳಿಸಿದರು.

ಅವರು ಇಂದು ನಗರದ ಪೋಲಾ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿ ರಾಜ್ಯದ ಗುತ್ತಿಗೆದಾರರು ತಮ್ಮ ಹೊಲ ಮನೆ ಆಸ್ತಿಗಳನ್ನು ಅಡವಿಟ್ಟು ಸಾಲ ಸೋಲ ಮಾಡಿ ಪಿಡಬ್ಲ್ಯೂಡಿ, ಆರ್ ಡಿ ಪಿ ಆರ್, ಜಲಸಂಪನ್ಮೂಲ ಸೇರಿದಂತೆ ಐದಾರು ಇಲಾಖೆಯ ಕೆಲಸಗಳನ್ನು ಮಾಡಿಕೊಟ್ಟಿದ್ದೇವೆ ಆದರೆ ನಮಗೆ ಗುತ್ತಿಗೆ ಹಣವನ್ನು ಬಿಡುಗಡೆ ಮಾಡದೇ ಹಿಂದಿನ ಸರ್ಕಾರ ಮುಂದಿನ ಸರ್ಕಾರ ಎಂದು ಸಬೂಬುಗಳನ್ನು ಹೇಳುತ್ತಾ ಮುಂದೂಡುತ್ತಿದೆ ಇದರಿಂದ ನಮಗೆ ತುಂಬಾ ಆರ್ಥಿಕ ನಷ್ಟ ಉಂಟಾಗಿದೆ, ನಾವು ಕೆಲಸ ಮಾಡಿದ ಪಿಡಬ್ಲ್ಯೂಡಿ ಇಲಾಖೆಯ 8370, ಆರ್ ಡಿ ಪಿ ಆರ್ 3800, ಜಲಸಂಪನ್ಮೂಲ ಇಲಾಖೆಯ 13000, ಸಣ್ಣ ನೀರಾವರಿ ಇಲಾಖೆಯ 3000, ನಗರಾಭಿವೃದ್ಧಿ ಇಲಾಖೆಯ 2000 ವಸತಿ 2006, ಕಾರ್ಮಿಕ ಇಲಾಖೆಯ 2000 ಕೋಟಿ ಬಿಬಿಎಂಪಿ 2600 ಕೋಟಿ ಒಟ್ಟು 37,000 ಕೋಟಿ ಬಾಕಿ ಹಣವನ್ನು ಕೂಡಲೇ ಸರ್ಕಾರ ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ 100 ಪುಟಗಳ ಮನವಿ ಪತ್ರವನ್ನು ಸಲ್ಲಿಸಿದ್ದೇವೆ ಆದರೂ ಸಹ ಸರ್ಕಾರ ನಮ್ಮ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ನಮ್ಮ ಗುತ್ತಿಗೆ ಹಣ ಬಾಕಿ ಉಳಿಸಿಕೊಂಡು ಹತ್ತು ಜಿಲ್ಲೆಗಳ ಒಟ್ಟುಗೂಡಿಸಿ ಪ್ಯಾಕೇಜ್ ಆಗಿ ಹೊರ ರಾಜ್ಯದವರಿಗೆ ಗುತ್ತಿಗೆಯನ್ನು ನೀಡಲಾಗುತ್ತದೆ ಅವರು ನೀಡುವ ಉಪಗುತ್ತಿಗೆಯಿಂದ ನಾವು ಕೆಲಸ ಮಾಡುವ ಅನಿವಾರ್ಯತೆ ಎದುರಾಗಿದೆ ಕೂಡಲೇ ಸರ್ಕಾರ ನಮ್ಮ ಬಾಕಿ ಹಣವನ್ನು ಬಿಡುಗಡೆ ಮಾಡಿ ಕಾಮಗಾರಿಗಳನ್ನು ನೇರವಾಗಿ ನಮಗೆ ಗುತ್ತಿಗೆ ನೀಡಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ನಮ್ಮ ಸಂಘದ 67 ಜನ ನಿರ್ದೇಶಕರು ಮತ್ತು ಎಲ್ಲಾ ಜಿಲ್ಲೆಯ ಜಿಲ್ಲಾಧ್ಯಕ್ಷರು ಸಭೆ ಸೇರಿ ಒಂದು ದಿನ ಕಾಮಗಾರಿಯನ್ನು ನಿಲ್ಲಿಸಿ ಸಾಂಕೇತಿಕವಾಗಿ ಧರಣಿ ನಡೆಸಲಾಗುವುದು ನಂತರ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ರಾಜ್ಯದ ಎಲ್ಲಾ ಗುತ್ತಿಗೆದಾರರು ಸೇರಿ ಪ್ರತಿಭಟನೆಯನ್ನು ನಡೆಸಲಾಗುವುದು ಅಷ್ಟರೊಳಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಬಂದು ನಮ್ಮ ಜೊತೆ ಮಾತನಾಡಿದಲ್ಲಿ ನಾವು ಪ್ರತಿಭಟನೆಯನ್ನು ಕೈ ಬಿಡಲು ಸಿದ್ದರಿದ್ದೇವೆ ಎಂದರು.

ನಮ್ಮ ಹೋರಾಟ ಅಥವಾ ಪ್ರತಿಭಟನೆ ಸರ್ಕಾರದೊಂದಿಗೆ ಸಂಘರ್ಷವಲ್ಲ ನಮ್ಮ ಹಣಕ್ಕಾಗಿ ನಾವು ಹೋರಾಟ ಮಾಡುತ್ತಿದ್ದೇವೆ ನಮ್ಮ ಸಮಸ್ಯೆಯನ್ನು ಸಿಎಂ ಗಮನಕ್ಕೆ ತಂದರು ಅವರು ಹಾರಿಕೆ ರೀತಿಯಲ್ಲಿ ಮಾತನಾಡಿ ಸಾಗ ಹಾಕುತ್ತಾರೆ ಇದರಿಂದ ನಮ್ಮ ಆರ್ಥಿಕ ಪರಿಸ್ಥಿತಿ ಹದಗೆಟ್ಟು ನಮ್ಮ ಕುಟುಂಬಗಳು ಬೀದಿಗೆ ಬೀಳುವ ಸಾಧ್ಯತೆ ಇದೆ. ಕಾರಣ ಸರ್ಕಾರ ಕೂಡಲೇ ನಮ್ಮ ಬಾಕಿ ಹಣವನ್ನು ಬಿಡುಗಡೆಗೊಳಿಸಬೇಕೆಂದು ಆರ್ ಮಂಜುನಾಥ್ ಒತ್ತಾಯಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಬಳ್ಳಾರಿ ಜಿಲ್ಲಾ ಅಧ್ಯಕ್ಷ ರಮಣ ರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಉಮಾಶಂಕರ್ ರೆಡ್ಡಿ, ನಾಗಪ್ಪ ನಾಗರಾಜ್ ರಾಜಶೇಖರ್, ಪ್ರದೀಪ್, ಸಿದ್ದೇಶ್ ಸೇರಿದಂತೆ ಇತರರಿದ್ದರು.

# ತಂಬಾಕು ಅಧಿಕಾರಿಗಳ ಸಭೆ

ಮಲ್ಲಮ್ಮ ನುಡಿ ವಾರ್ತೆ ಹುಣಸೂರು ತಾಲೂಕಿನ ಕಟ್ಟೆಮಳಲವಾಡಿ ತಂಬಾಕು ಹರಾಜು ಮಾರುಕಟ್ಟೆಯಲ್ಲಿ ಕಳೆದ ಮೂರು ನಾಲ್ಕು ದಿನಗಳಿಂದ ರೈತರು ತಂಬಾಕು ಬೆಲೆ ಕುಸಿತದಿಂದಾಗಿ ಹೋರಾಟ ಮಾಡುತ್ತಿರುವ ಬಗ್ಗೆ ಮಾಹಿತಿ ತಿಳಿದು ಸ್ಥಳಕ್ಕೆ ಮಾಜಿಶಾಸಕರಾದ ಎಚ್ ಪಿ ಮಂಜುನಾಥ್ ಹಾಗೂ ಕೆಪಿಸಿಸಿ ವಕ್ತಾರ ಎಂ ಲಕ್ಷ್ಮಣ್ ರವರು ಭೇಟಿ ನೀಡಿ ಸ್ಥಳದಿಂದಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದೂರವಾಣಿ ಮೂಲಕ ಮಾಹಿತಿ ನೀಡಿ ರೈತರಿಗೆ ಆತ್ಮಸ್ಥೈರ್ಯ ತುಂಬಿ ಈಗಾಗಲೇ ಮುಂದಾಬೇಕೆಂದು ಪತ್ರ ಬರೆಯಲಾಗಿದೆ. ರೈತರ ಹಿತ ಕಾಪಾಡಲು ಮುಂದಾಗಬೇಕೆಂದು ತಿಳಿಸಿ. ಈ ಬಗ್ಗೆ ಮುಖ್ಯಮಂತ್ರಿಗಳಾದ



ದೂರವಾಣಿ ಮೂಲಕವೇ ತಂಬಾಕು ತಂಬಾಕು ಬೆಳೆಗಾರ ಹಿತ ಕಾಯಲು ಕೂಡಲೇ ಕೇಂದ್ರಸರ್ಕಾರ ತಂಬಾಕು ಮತ್ತೊಮೆ ಪತ್ರ ಬರೆದಿರುವುದಾಗಿ ಸಿದ್ದರಾಮಯ್ಯನವರು ಮೈಸೂರು ಜಿಲ್ಲಾಧಿಕಾರಿಗಳಾದ ಲಕ್ಷೀಕಾಂತ್ ರೆಡ್ಡಿಯವರಿಗೆ ದೂರವಾಣಿ ಮೂಲಕವೇ ಮಾತನಾಡಿ ತಂಬಾಕು ಮಂಡಳಿಯ ಅಧಿಕಾರಿಗಳು ಹಾಗೂ ತಂಬಾಕು ಖರೀದಿ ಕಂಪನಿಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿ ಕೂಡಲೇ ತಂಬಾಕು ಬೆಳೆಗಾರರ ಹಿತ ಕಾಪಾಡಲು ಮುಂದಾಗಬೇಕೆಂದು ಸೂಚಿಸಿದ್ದು, ಜಿಲ್ಲಾಧಿಕಾರಿಗಳು ಫೆ.23ರ ಸೋಮವಾರ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಭೆ ಕರೆದಿದ್ದಾರೆಂದು ಮಾಜಿ ಶಾಸಕರಾದ ಎಚ್ ಪಿ ಮಂಜುನಾಥ್ ಹಾಗೂ ಎಂ ಲಕ್ಷಣ್ ತಿಳಿಸಿದ್ದಾರೆ.

# ನವಜಾತ ಶಿಶು ಸಾವಿಗೆ ವೈದ್ಯರು ನಿರ್ಲಕ್ಷ್ಯ ಧೋರಣೆ ಪಾಲಕರು ಆಕ್ರೋಶ

• **ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು**

ನಗರದ ಪಿಡಬ್ಲ್ಯೂಡಿ ಕ್ಯಾಂಪ್ ನಲ್ಲಿ ಇರುವ ತಾಯಿ ಮಕ್ಕಳು ಆಸ್ಪತ್ರೆಯಲ್ಲಿ ನವಜಾತಿ ಶಿಶು ಹೆರಿಗೆ ಸಮಯದಲ್ಲಿ ಸಾವನ್ನಪ್ಪಿದ್ದು. ನೋಡಿದರೆ ಸಾವಿಗೆ ವೈದ್ಯರು ಹಾಗೂ ಸಿಬ್ಬಂದಿ ವರ್ಗ ನಿರ್ಲಕ್ಷ್ಯ ಧೋರಣೆ ಕಾರಣ ಎಂದು ತಿಳಿದು ಪಾಲಕರು ಆಸ್ಪತ್ರೆ ಮುಂದೆ ಆಕ್ರೋಶವನ್ನು ವ್ಯಕ್ತಪಡಿಸಿದರು

ಮಸ್ಕಿ ತಾಲೂಕಿನ ತಿಡಿಗೋಳ ಗ್ರಾಮದ ಚಂದ್ರಕಲಾ ಅಮರೇಶ ಎನ್ನುವ ಗರ್ಭಿಣಿ ಮಹಿಳೆ ತನಗೆ ಹೆರಿಗೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ನಗರದ ತಾಯಿ ಮಕ್ಕಳು ಆಸ್ಪತ್ರೆಗೆ ಶುಕ್ರವಾರ ದಿನದಂದು ಬಂದು ದಾಖಲಾಗಿದ್ದರು. ಆದರೆ ಹೆರಿಗೆ ಮಹಿಳೆಗೆ ನಾಲ್ಕು ವರ್ಷಗಳ ನಂತರ ಗರ್ಭಿಣಿ ಧರಿಸಿದ್ದಾರೆ. ಆದರೆ ಹೆರಿಗೆ ಸಮಯದಲ್ಲಿ ಸರಿಯಾಗಿ ವೈದ್ಯರು ಸಲಹೆ ಪಡೆಯದೆ



ಅಲ್ಲಿನ ನರ್ಸ್ ಸಿಬ್ಬಂದಿ ವರ್ಗದವರು ಮೂಲಕ ಹೆರಿಗೆ ಮಾಡಿಸಿದ್ದಾರೆ. ಸಂದರ್ಭದಲ್ಲಿ ಸ್ಥಳದಲ್ಲಿ ಮಗು ಸಾವನ್ನಪ್ಪಿದೆ. ಇದಕ್ಕೆ ಕಾರಣ ವೈದ್ಯರಾದ ಡಾ. ಶಕುಂತಲಾ ಹಾಗೂ ಅನುಭವ ಇಲ್ಲದ ನರ್ಸ್ ಗಳು ಎಂದು ಪಾಲಕರು ಆಕ್ರಂದನ ಮುಗಿಲು ಮುಟ್ಟಿತ್ತು. ವೈದ್ಯರ ವಿರುದ್ಧ ಆಕ್ರೋಶಗೊಂಡ ಆಸ್ಪತ್ರೆ ಮುಂದೆ ಪ್ರತಿಭಟನೆ ನಡೆಸಿದರು ಶುಕ್ರವಾರದ ಸಂಜೆ ದಿನದಂದು ಹಿಡಿದು ಶನಿವಾರ ಬೆಳಗ್ಗೆ ವರೆಗೆ ಸೇವೆಯಲ್ಲಿ ಇದ್ದು. ನನ್ನ ಅವಧಿಯಲ್ಲಿ ಗರ್ಭಿಣಿ ಮಹಿಳಯನ್ನು ಸರಿಯಾಗಿ ಚಿಕಿತ್ಸೆ ನೀಡಿದ್ದೇನೆ. ಆದರೆ ಶನಿವಾರ ಬೆಳಗ್ಗೆ ಹೆರಿಗೆ ಸಮಯದಲ್ಲಿ ಡಾ. ಶಕುಂತಲಾ ಅವರು ಇದ್ದಿದ್ದು. ಆದರೆ ತಾಯಿ ಹೊಟ್ಟೆಯಲ್ಲಿ ಮಗುವಿಗೆ ಕರುಳು ಬೆಳ್ಳಿ ಕುತ್ತಿಗೆಗೆ ಸುತ್ತಿ ಕೊಂಡಿದ್ದರಿಂದ ಹೆರಿಗೆ ಸಮಯದಲ್ಲಿ ಮಗು ಸಾವನ್ನಪ್ಪಿದೆ. ಎಂದರು

**ಹೆರಿಗೆ ಸಮಸ್ಯೆ ಇದ್ದರೆ ಯಾಕೆ..? ಆಪರೇಷನ್ ಮಾಡಿಲ್ಲ.. ಪಾಲಕರು ಪ್ರಶ್ನೆ..**

ತಾಯಿ ಯಾವುದೋ ಸಮಸ್ಯೆಗಳು ಕಾಣಿಸಿಕೊಂಡಿಲ್ಲ ನಾರ್ಮಲ್ ಡೆಲಿವರಿ ಮಾಡಬೇಕೆಂದು ಹೇಳಿದ್ದು. ಆದರೆ ಹೆರಿಗೆ ಸಮಯದಲ್ಲಿ ನೋವು ಜಾಸ್ತಿ ಆಗಿ ಮಗುವಿಗೆ ಕರುಳು ಬೆಳ್ಳಿ ಕುತ್ತಿಗೆಗೆ ಸುತ್ತಿ ಕೊಂಡು ಸಾವನ್ನಪ್ಪಿದಕ್ಕೆ. ಈ ಸಮಸ್ಯೆ ಕಂಡು ಬಂದಿದೆ ಆದರೆ ಹೆರಿಗೆ ಸಹಾಯಕ ಸಿಬ್ಬಂದಿ ವರ್ಗ ಡಿಗ್ರಿ ಪದವಿ ಪಡೆದವರು ಹೆರಿಗೆಯಲ್ಲಿ ಅನುಭವ ಹೊಂದಿದವರು ಎಂದು. ಹೆರಿಗೆ ಡಾ. ನಾಗರಾಜ ಕಾಟ್ವ ತಿಳಿಸಿದರು.

*ಠಥ* ತಾಯಿ ಮಕ್ಕಳು ಸ್ಥಳಕ್ಕೆ ಸುಡಾ ಅಧ್ಯಕ್ಷ ಬಾಬು ಗೌಡ ಬಾದರ್ಲಿ ಅವರು ಮಗುವು ಸಾವನ್ನಪ್ಪಿದ್ದು ಪಾಲಕರಿಗೆ ರೌಡುಕುಂದ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರು ಬಸವರಾಜ ಹಿರೇಗೌಡ ಹಾಗೂ ಎಲೆಕೂಡ್ಲಿಗಿ ಜಿಲ್ಲಾ ಪಂ.ಮಾಜಿ ಸದಸ್ಯ ಶಿವನಗೌಡ ಅವರು ಮೊದಲು ಮಗುವಿನ ಅಂತ್ಯ ಸಂಸ್ಕಾರ ನಡೆಸಲು ಅನುವು ಮಾಡಿಕೊಡಿ ಎಲ್ಲಾ ರೀತಿಯ ಪರಿಶೀಲನೆ ಮಾಡಿ ಕಾನೂನು ಕ್ರಮಕ್ಕೆ ಆಗ್ರಹ ಮಾಡೋಣ ಎಂದು ಹೇಳಿ ಧೈರ್ಯ ತುಂಬಿದರು

.ಪ್ರತಿಭಟನೆ ವಿಷಯ ತಿಳಿದ ನಗರ ಪೋಲಿಸ್ ಠಾಣೆ ಸಿಪಿಐ ವೀರಾರೆಡ್ಡಿ ಸಂಚಾರ ಪೊಲೀಸ್ ಠಾಣೆ ಪಿಎ ಪೊಲೀಸ್ ಸಿಬ್ಬಂದಿ ವರ್ಗದವರು ಸ್ಥಳಕ್ಕೆ ಆಗಮಿಸಿ ಮುನ್ನೆಚ್ಚರಿಕೆ ಕ್ರಮವಾಗಿ ಯಾವುದೇ ಗಲಾಟೆ ಆಗದಂತೆ ನೋಡಿಕೊಂಡರು.

# ರಸ್ತೆ ಸಂಚಾರ ಸಮೀಕ್ಷೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಲೋಕೋಪಯೋಗಿ ಇಲಾಖೆಯಿಂದ ಪ್ರತಿ ವರ್ಷಕ್ಕೊಮ್ಮೆ ಎರಡು ದಿನ ಮತ್ತು ಐದು ವರ್ಷಗಳಿಗೊಮ್ಮೆ ಏಳು ದಿನಗಳ ರಾಜ್ಯ ಹೆದ್ದಾರಿಗಳು, ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ವಾಹನ ಸಂಚಾರ ಸಮೀಕ್ಷಯ ಕಾರ್ಯವನ್ನು ಕೈಗೊಳ್ಳಲಾಗುತ್ತದೆ. ಈ ಸಮೀಕ್ಷೆಯಿಂದ ಸಂಗ್ರಹಿಸಿದ ಮಾಹಿತಿಯಿಂದ ಸರ್ಕಾರಕ್ಕೆ ರಸ್ತೆಗಳ ಸಂಚಾರ ಸಾಂಧ್ರತೆ ಸಂಚಾರ ತೀವ್ರತೆ ಕಂಡು ಹಿಡಿಯುವುದಕ್ಕೆ ರಸ್ತೆಗಳ ಅಗಲಳತೆ ನಿರ್ಧರಿಸಲು ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ರಸ್ತೆಗಳ ಸ್ಥಿತಿಗತಿ ಸುಧಾರಿಸಲು ಅನುಕೂಲವಾಗುತ್ತದೆ.

ಪ್ರಸ್ತುತ ವರ್ಷದಲ್ಲಿ ಫೆ.26ರ ಬೆಳಿಗ್ಗೆ 6 ಗಂಟೆಯಿಂದ ಫೆ.28ರ ಬೆಳಿಗ್ಗೆ 6 ಗಂಟೆಯವರೆಗೆ ಒಟ್ಟು ಎರಡು ದಿನಗಳ ರಸ್ತೆ ಸಂಚಾರ ಸಮೀಕ್ಷೆ ಕಾರ್ಯವನ್ನು ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಸ್ಥಾಪಿಸಲಾಗುವ ಕ್ಯಾಮರ ಸಮೇತ ಸಮೀಕ್ಷಾ ಕೇಂದ್ರಗಳಲ್ಲಿ ಕೈಗೊಳ್ಳಲಾಗುತ್ತದೆ.

ಲೋಕೋಪಯೋಗಿ ಇಲಾಖೆಯಿಂದ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ರಸ್ತೆ ಸಂಚಾರ ಸಮೀಕ್ಷೆ ಕೈಗೊಳ್ಳಲಾಗುತ್ತದೆ. ಇದಕ್ಕಾಗಿ ರಸ್ತೆಗಳ ಮೇಲೆ ಕ್ಯಾಮರ ಸಮೇತ ಸಮೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತದೆ. ಸಮೀಕ್ಷಾ ಕೇಂದ್ರಗಳಿದ್ದಲ್ಲಿ ವಾಹನ ರಸ್ತೆ ಸಂಚಾರ ಸಮೀಕ್ಷೆ ಕೇಂದ್ರವಿದೆ, ತಮ್ಮ ವಾಹನಗಳನ್ನು ನಿಧಾನವಾಗಿ ಚಲಿಸಿ ಎಂದು ಸೂಚನಾ ಫಲಕಗಳನ್ನು ಅಳವಡಿಸಿರುತ್ತಾರೆ. ಎಲ್ಲಾ ವಾಹನ ಚಾಲಕರು ತಮ್ಮ ವಾಹನವನ್ನು ನಿಧಾನವಾಗಿ ಸಾಗಿಸಿಕೊಂಡು ಮುಂದೆ ಸಾಗಿಸಬೇಕು ಎಂದು ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೋವಿ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲನಾ ಸಭೆ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ ಅವರ ಅಧ್ಯಕ್ಷತೆಯಲ್ಲಿ ಫೆ.24ರ ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಧಿಕಾರಿಗಳ ಸಮನ್ವಯದೊಂದಿಗೆ ನಿಗಮದ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಭೋವಿ ಸಮಾಜದ ಎಲ್ಲಾ ಮುಖಂಡರು ಮತ್ತು ಸಾರ್ವಜನಿಕರು ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

ಅಂದು ಸಭೆಗೂ ಮುನ್ನು ಬೆಳಿಗ್ಗೆ 10.30 ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡಲಿದ್ದಾರೆ. ನಂತರ ಭೋವಿ ಸಮುದಾಯದ ಮುಖಂಡರುಗಳೊಂದಿಗೆ ಸಭೆಯನ್ನು ಏರ್ಪಡಿಸಲಾಗಿದೆ.

ಸಂಜೆ 4 ಗಂಟೆಗೆ ರಾಮನಗರ ಕ್ಯಾಂಪ್ ಹಾಗೂ ಪಂಚಮುಖಿ ಗಾಣದಾಳ ಗ್ರಾಮದಲ್ಲಿನ ಭೋವಿ ಕಾಲೋನಿಗಳಲ್ಲಿ ಭೇಟಿ ನೀಡಿ ಸಮಾಜದ ಕುಂದುಕೊರತೆಗಳ ಹಾಗೂ ನಿಗಮದ ಸೌಲಭ್ಯಗಳ ಬಗ್ಗೆ ಜನರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾನಗರ ಪಾಲಿಕೆ ಆಯುಕ್ತರಿಂದ ನಗರ ಸಂಚಾರ: ಕಾಮಗಾರಿಗಳ ಪರಿಶೀಲನೆ



• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಾಪಾತ್ರ ಅವರು ಫೆ.20ರಂದು ನಗರದ ವಿವಿಧ ಪ್ರದೇಶಗಳಲ್ಲಿ ಸಂಚರಿಸಿ ಪ್ರಗತಿಯಲ್ಲಿರುವ ಮತ್ತು ಪ್ರಸ್ತಾವಿತ ಅಭಿವೃದ್ಧಿ ಕಾಮಗಾರಿಗಳು ಹಾಗೂ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದರು.

ಈ ವೇಳೆ ಅವರು ಚಾಲ್ತಿಯಲ್ಲಿರುವ ಯೋಜನೆಗಳನ್ನು ವೇಗಗೊಳಿಸುವುದು ಹಾಗೂ ಭವಿಷ್ಯದ ಅಭಿವೃದ್ಧಿ ಯೋಜನೆಗಳನ್ನು ರೂಪಿಸುವ ಕುರಿತು ಅಧಿಕಾರಿಗಳೊಂದಿಗೆ ಸಮಗ್ರ ಚರ್ಚೆ ನಡೆಸಿ ಅಗತ್ಯ ಮಾರ್ಗದರ್ಶನ ನೀಡಿದರು.

ಆಯುಕ್ತರು ಮೊದಲು ಮಾವಿನಕೆರೆ ಪ್ರದೇಶಕ್ಕೆ ಭೇಟಿ ನೀಡಿ ಅಲ್ಲಿನ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು. ಸಾರ್ವಜನಿಕ ಸ್ಥಳಗಳಲ್ಲಿನ ಅತಿಕ್ರಮಣಗಳನ್ನು ತಕ್ಷಣವೇ ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಇದರ ಜೊತೆಗೆ ಮಾವಿನಕೆರೆಯ ಉದ್ಯಾನವನ ಅಭಿವೃದ್ಧಿ ಕಾಮಗಾರಿಯನ್ನು ನಿಗದಿತ ಗುಣಮಟ್ಟದೊಂದಿಗೆ ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಳಿಕ ಇಂದಿರಾ ನಗರದಲ್ಲಿ ನೂತನವಾಗಿ ನಿರ್ಮಿಸಲಾದ ಹೈಟೆಕ್ ಸಾರ್ವಜನಿಕ ಶೌಚಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಈ ಸೌಲಭ್ಯವನ್ನು ತ್ವರಿತವಾಗಿ ಪ್ರಾರಂಭಿಸುವ ಮೂಲಕ ಸ್ಥಳೀಯ ನಿವಾಸಿಗಳಿಗೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ನಂತರ ಸ್ವಚ್ಛತಾ ಕಾರ್ಮಿಕರಿಗಾಗಿ ಮೀಸಲಿಟ್ಟಿರುವ ಸ್ಮಶಾನ ಸ್ಥಳದ ಅಭಿವೃದ್ಧಿ ಕಾಮಗಾರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಲ್ಲಿ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಚರ್ಚಿಸಿ, ಈ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಂತಿಮವಾಗಿ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ ಅಡಿಯಲ್ಲಿ ಪ್ರಸ್ತಾಪಿಸಲಾದ ಅಭಿವೃದ್ಧಿ ಕಾಮಗಾರಿಗಳ ವ್ಯಾಪ್ತಿಯಲ್ಲಿ ಹೊಸ ರಸ್ತೆಗಳ ನಿರ್ಮಾಣ ಮತ್ತು ಅಭಿವೃದ್ಧಿಗಾಗಿ ಸ್ಥಳ ಪರಿಶೀಲನೆ ನಡೆಸಿದರು. ಈ ಯೋಜನೆಯಡಿ ಕೈಗೊಳ್ಳಬೇಕಿರುವ ಕಾಮಗಾರಿಗಳಿಗಾಗಿ ಸಮಗ್ರ ಯೋಜನೆಯನ್ನು ರೂಪಿಸಿ ಬೇಗನೇ ಕಾರ್ಯಾರಂಭ ಮಾಡುವಂತೆ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು. ಅಲ್ಲದೆ ನಗರದ ಸಮಗ್ರ ಅಭಿವೃದ್ಧಿ, ಸೌಂದರ್ಯೀಕರಣ ಮತ್ತು ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಮಹಾನಗರ ಪಾಲಿಕೆ ಬದ್ಧವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಭರತ್ ಕುಮಾರ್, ಕಂದಾಯ ವಿಭಾಗದ ಉಪ ಆಯುಕ್ತರಾದ ಬಿ.ಶರಣಪ್ಪ, ಪಾಲಿಕೆಯ ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಸೇರಿದಂತೆ ವಿವಿಧ ವಿಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಇದ್ದರು.

# ಸಂತೋಷ ಅವರಿಗೆ ಜಿಲ್ಲಾ ವಿದ್ಯಾರತ್ನ ಪ್ರಶಸ್ತಿ ಪ್ರದಾನ



• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘ ಬೆಂಗಳೂರು, ಜಿಲ್ಲಾ ಶಾಖೆ ಬೀದರ ವತಿಯಿಂದ ಫೆಬ್ರವರಿ 21ರಂದು ಭಾಲ್ಕಿ ತಾಲೂಕಿನ ಭೀಮಣ್ಣ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯದ ಸಭಾ ಭವನದಲ್ಲಿ ನಡೆದ ಸಂಘದ ಜಿಲ್ಲಾ ಸಮಾವೇಶದಲ್ಲಿ ಚಿಟಗುಪ್ಪ ಜ್ಞಾನ ಜ್ಯೋತಿ ಪ್ರೌಢ ಶಾಲೆಯ ದೈಹಿಕ ಶಿಕ್ಷಕ ಸಂತೋಷ ಹಂದಿಕೇರ ಇವರಿಗೆ ಬೀದರ್ ಲೋಕಸಭಾ ಸದಸ್ಯ ಸಾಗರ್ ಖಂಡ್ರೆ ಅವರು ಜಿಲ್ಲಾ ಮಟ್ಟದ ವಿದ್ಯಾರತ್ನ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಿದರು.



**ಭಾಲ್ಕಿ ಪಟ್ಟಣದಲ್ಲಿ ಶ್ರೀ ಚನ್ನಬಸವೇಶ್ವರ ಪಿಯು ಕಾಲೇಜಿನಲ್ಲಿ ಗೋಲ್ಡನ್ ಸ್ಕಾಲರ್ ಶಿಪ್ ವಿಜ್ಞಾನ ವಿಭಾಗಕ್ಕೆ ನಡೆದ ಪ್ರವೇಶ ಪರೀಕ್ಷೆಯಲ್ಲಿ ಕಾಲೇಜಿನ ಕೋಆರ್ಡಿನೇಟರ್ ಯಲ್ಲಾಲಿಂಗ ಮೇತ್ರೆ ಅವಲೋಕಿಸಿದರು.**

# ಇನ್ಕ್ಯುಬೇಶನ್ ಕಾರ್ಯಾಗಾರಕ್ಕೆ ಚಾಲನೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಕಲಬುರಗಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಕೇಂದ್ರ ಪುರಸ್ಕೃತ ವಿಶ್ವ ಬ್ಯಾಂಕ್ ನೆರವಿನ ಮಹತ್ವಾಕಾಂಕ್ಷಿ ಆರ್‌ಎಎಮ್‌ಪಿ (RAMP) ಯೋಜನೆಯಡಿ ಒಂದು ದಿನದ ಇನ್ಕ್ಯುಬೇಶನ್ (Incubation) ಕಾರ್ಯಾಗಾರವನ್ನು ಕಲಬುರಗಿಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ.) ದಲ್ಲಿ ಶನಿವಾರ ಹಮ್ಮಿಕೊಳ್ಳಲಾಯಿತು.

ಬೆಂಗಳೂರಿನ ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶನಾಲಯದ (ಎಂಎಸ್ಎಂಇ & ಪಿಪಿ) ಅಪರ ನಿರ್ದೇಶಕ ಮಾಣಿಕ ವ್ಹಿ. ರಘೋಜಿ ಅವರು ಉದ್ಘಾಟಿಸಿ ಮಾತನಾಡಿ, ಅಂತಿಮ ವರ್ಷದ ವಿದ್ಯಾರ್ಥಿಗಳು ತಮ್ಮ ಸ್ವಂತ ನವೋದ್ಯಮ ಸ್ಥಾಪಿಸುವ ನಿಟ್ಟಿನಲ್ಲಿ ಯೋಚಿಸಿ, ಉದ್ಯಮಿದಾರರಾಗಿ ಬೇರೆಯವರಿಗೆ ಉದ್ಯೋಗ ನೀಡಲು ಪ್ರೇರಣೆ ನೀಡಿದರು.

# ಯುವ ಸಮೂಹದಿಂದ ಬದಲಾವಣೆ ಸಾಧ್ಯ: ಸಿದ್ಧಾರಾಮಪ್ಪ ಭಟ್ಟರ್

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಯುವ ಜನರಿಗೆ ಸರಿಯಾದ ಮಾರ್ಗದರ್ಶನ ಮತ್ತು ಬೆಂಬಲ ನೀಡಿ ಪ್ರೋತ್ಸಾಹಿಸಿದಲ್ಲಿ ಕೇವಲ ಕುಟುಂಬ ಮಾತ್ರವಲ್ಲ, ಸಮಾಜದಲ್ಲಿಯೂ ನಿರೀಕ್ಷಿತ ಪ್ರಮಾಣದ ಬದಲಾವಣೆ ಸಾಧ್ಯವೆಂದು ಕೆರೆಹಳ್ಳಿ ಗ್ರಾಮದ ಹಿರಿಯ ಧುರೀಣರಾದ ಸಿದ್ದರಾಮಪ್ಪ ಭಟ್ಟರ್ ಅಭಿಪ್ರಾಯ ಪಟ್ಟರು.

ಜಿಲ್ಲೆಯ ಕೆರೆಹಳ್ಳಿ ಗ್ರಾಮದೇವತೆ ಶ್ರೀ ಲಕ್ಕಮ್ಮ ದೇವಿಯ 9 ನೇ ವರ್ಷದ ವಾರ್ಷಿಕ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ, ಹಿರಿಯರಾದವರು ಯುವಜನತೆಗೆ ಜವಾಬ್ದಾರಿಗಳನ್ನು ನೀಡಬೇಕು. ಸೂಕ್ತ ಮಾರ್ಗದರ್ಶನದ ಜೊತೆಗೆ ಬೆಂಬಲವಾಗಿ ನಿಲ್ಲಬೇಕು. ಕೆರೆಹಳ್ಳಿ ಗ್ರಾಮದ ಸರ್ವತೋಮುಖ ಅಭಿವೃದ್ಧಿ ಕಾರ್ಯಗಳಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದೆ. ಗ್ರಾಮದಲ್ಲಿ ಪೂರ್ವಕಾಲದಿಂದಲೂ ಆಚರಿಸಿಕೊಂಡು ಬರುತ್ತಿದ್ದ ಹಬ್ಬ, ಹರಿದಿನ, ಆಚರಣೆಗಳನ್ನು ಯುವಕರು ಸಮರ್ಪಕವಾಗಿ ಮುನ್ನಡೆಸಿಕೊಂಡು ಬರುತ್ತಿದ್ದಾರೆ. ಐತಿಹಾಸಿಕ ಲಕ್ಕಮ್ಮ ದೇವಿ ಜಾತ್ರೆಯ ಯಶಸ್ಸಿನಲ್ಲಿ ಯುವಕರ ಪಾತ್ರ ಬಹಳಷ್ಟು ಇದೆ. ಕಲೆ, ಸಂಗೀತ, ಸಾಹಿತ್ಯ, ಸಂಸ್ಕೃತಿ ಮತ್ತು ಪರಂಪರೆಯನ್ನು ನಮ್ಮ ಯುವಕರು ಮೈಗೂಡಿಸಿಕೊಂಡು ಬರುತ್ತಿರುವುದು ನಿಜಕ್ಕೂ ಹೆಮ್ಮೆ ಎನಿಸುತ್ತಿದೆ ಎಂದರು.

ಜಾತ್ರೆಯ ಅಂಗವಾಗಿ ಗ್ರಾಮದಲ್ಲಿ ಹಬ್ಬದ ವಾತಾವರಣ ಏರ್ಪಟ್ಟಿತ್ತು. ಪ್ರಾತಃಕಾಲದಿಂದಲೇ ಶ್ರೀ ಲಕ್ಕಮ್ಮದೇವಿಗೆ ಅಭಿಷೇಕ, ವಸ್ತ್ರ ಧಾರಣ, ಅಲಂಕಾರ, ದೀಪ, ಧೂಪಗಳನ್ನು ಬೆಳಗಿ ಅರ್ಚಿಸಲಾಯಿತು. ಕೆರೆಹಳ್ಳಿ ಗ್ರಾಮದ ಹಿರಿಯರ ನೇತೃತ್ವದಲ್ಲಿ ಸುಹಾಸಿನಿಯರಿಂದ ಕುಂಭ ಕಳಸ, ವಾದ್ಯ ಮೇಳಗಳೊಡನೆ ಗಂಗೆಗೆ ತೆರಳಿ, ಗ್ರಾಮದ ತುಂಬೆಲ್ಲ ಭವ್ಯ ಮೆರವಣಿಗೆ ನಡೆಸಲಾಯಿತು. ಲಕ್ಕಮ್ಮದೇವಿಯ ಭಾವಚಿತ್ರದ ಮೆರವಣಿಗೆಯುದ್ದಕ್ಕೂ ಭಕ್ತಿ ಇಮ್ಮಡಿಗೊಂಡು, ಧಾರ್ಮಿಕ



ಆಚರಣೆಗಳನ್ನು ನಡೆಸಲಾಯಿತು. ಮಹಾಮಂಗಳಾರತಿ ಬಳಿಕ ಸಾಮೂಹಿಕ ಭೋಜನ ವ್ಯವಸ್ಥೆ ಅಖಂಡವಾಗಿ ಜರುಗಿತು.

ಸಂಜೆಯ ಹೊತ್ತು ದನಕನದೊಡ್ಡಿಯ ಗಾನಕೋಲಿಗೆ ಮೆಲೋಡಿಸ್ ಆರ್ಕೆಸ್ಟ್ರಾ ಸೇರಿದಂತೆ ಹಲವು ಸಂಗೀತಗಾರರಿಂದ ಹಾಡು, ಮನರಂಜನೆ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆದವು. ಜನಪದ ವೈಭವ ವೀಕ್ಷಿಸಲು ಕೆರೆಹಳ್ಳಿ ಗ್ರಾಮದ ನೆರೆಹೊರೆಯ ಹತ್ತಾರು ಗ್ರಾಮಗಳ ಭಕ್ತರು, ಬೆಂಗಳೂರು ಸೇರಿದಂತೆ ನಾಡಿನ ನಾನಾ ಭಾಗಗಳಿಂದ ಆಗಮಿಸಿದ ಭಕ್ತರೂ ಈ ಜಾತ್ರೆಗೆ ಸಾಕ್ಷಿಯಾದರು. ಸಂಜೆ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಇಡೀ ಗ್ರಾಮಸ್ಥರು ರಾತ್ರಿಯಿಡೀ ನೆರೆದಿದ್ದರು.

ಪ್ರತಿವರ್ಷ ಈ ರೀತಿಯ ಜಾತ್ರೆ ಆಚರಿಸುವ ಮೂಲಕ ಗ್ರಾಮದಲ್ಲಿ ಸೌಹಾರ್ದತೆ ವೃದ್ಧಿಗೊಳಿಸಲು ಪ್ರಜ್ಞಾವಂತರು ಶ್ರಮಿಸುತ್ತಿದ್ದಾರೆಂದು ಗ್ರಾಮದ ಹಿರಿಯರು ಮೆಚ್ಚುಗೆ ವ್ಯಕ್ತಪಡಿಸಿದರು.

ವೇದಿಕೆಯ ಮೇಲೆ ಗ್ರಾಮದ ಮುಖಂಡರಾದ ಲಕ್ಕಪ್ಪ ಶಿಳ್ಳೆಕ್ಯಾತರ್, ಮಲ್ಲಯ್ಯ ಉಡುಮಕಲ್, ಸುರೇಶ್ ಗಗ್ಗರಿ, ರಮೇಶ್ ಸಿಂದೋಗಿ, ಪರಸಪ್ಪ ಶಿಳ್ಳೆಕ್ಯಾತರ್, ಗುರುರಾಜ ಬೋವಿ, ಲಕ್ಷ್ಮಣ ಕೆರಿ, ಬಸವರಾಜ ಆರೇರ, ಬಸವರಾಜ ಹೂಗಾರ, ಬೂದಗುಂಪಾ ಗ್ರಾಮದ ತಾ.ಪಂ. ಮಾಜಿ ಸದಸ್ಯರಾದ ಬಸವರಾಜ ಪೆದ್ಲರ್, ಗ್ರಾ.ಪಂ.ಅಧ್ಯಕ್ಷರು, ಉಪಾಧ್ಯಕ್ಷರು, ಎಲ್ಲ ಸದಸ್ಯರುಗಳು, ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷರು, ಸರ್ವ ಸದಸ್ಯರು, ಶ್ರೀ ಲಕ್ಕಮ್ಮ ದೇವಿ ದಾಸೋಹ ಸೇವಾ ಟ್ರಸ್ಟ್‌ನ ಪದಾಧಿಕಾರಿಗಳು ಮತ್ತು ಯುವ ಧುರೀಣರಾದ ಶಿವಕುಮಾರ ದನದರ ಇನ್ನಿತರರು ಇದ್ದರು.

# ಯೋಜನೆಗಳ ಪ್ರಗತಿಗೆ ವೇಗ ನೀಡಿ: ಕುಮಾರ ನಾಯಕ ಕಟ್ಟುನಿಟ್ಟಿನ ನಿರ್ದೇಶನ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ರೈಲ್ವೆ ಲೈನ್ ನಿರ್ಮಾಣ ಯೋಜನೆ, ಇಂಡಿಯಾ ಪೋಸ್ಟ್, ಬಿಎಸ್‌ಎನ್‌ಎಲ್, ಸರ್ವ ಶಿಕ್ಷಣ ಶಿಕ್ಷಣ ಅಭಿಯಾನ, ಸ್ವಚ್ಛ ಭಾರತ ಮಿಷನ್, ಜಲಜೀವನ ಮಿಷನ್, ಪ್ರಧಾನಮಂತ್ರಿ ಉಜ್ವಲ ಯೋಜನೆ, ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ, ಸೇರಿದಂತೆ ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿಗೆ ವೇಗ ನೀಡಬೇಕು ಎಂದು ರಾಯಚೂರು ಲೋಕಸಭಾ ಕ್ಷೇತ್ರದ ಸದಸ್ಯರಾದ ಜಿ. ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಫೆ.21ರಂದು ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೊದಲಿಗೆ ಕೃಷಿ ಇಲಾಖೆಯ ಯೋಜನೆಗಳ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ 2025ನೇ ಸಾಲಿನ ಮುಂಗಾರಿನಲ್ಲಿ 12,477 ರೈತರು ಮತ್ತು ಹಿಂಗಾರಿನಲ್ಲಿ 6909 ರೈತರು ನೋಂದಣಿ ಮಾಡಿದ್ದಾರೆ. ವಿಮಾ ಸಂಸ್ಥೆಯಿಂದ ಬೆಳೆವಿಮೆ ಪರಿಹಾರ ಇತ್ಯರ್ಥಪಡಿಸುವ ಕಾರ್ಯ ಪ್ರಗತಿಯಲ್ಲಿದೆ. ರಾಯಚೂರು ಜಿಲ್ಲೆಯಲ್ಲಿ ಒಟ್ಟು 2,34,988 ರೈತರಿಗೆ 736.14 ಕೋಟಿ




ರೂ. ಪಿಎಂ ಕಿಸಾನ್ ಯೋಜನೆಯಡಿ ಕೇಂದ್ರ ಸರ್ಕಾರವು ನೆರವು ನೀಡಿದೆ ಎಂದು ಕೃಷಿ ಜಂಟಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. ರಾಯಚೂರು ಫಲವತ್ತಾದ ಮಣ್ಣು ಹೊಂದಿದ ಜಿಲ್ಲೆಯಾಗಿದ್ದು, ರೈತರಿಗೆ ನ್ಯಾಯ ಸಿಗುವ ದಿಶೆಯಲ್ಲಿ ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯ ಅನುಷ್ಠಾನಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಸಂಸದರು ಕೃಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆ ನಿರ್ಮಾಣಕ್ಕಾಗಿ ಆಯ್ಕೆ ಮಾಡಲಾಗಿರುತ್ತದೆ ಎಂದು ಕೃಷಿ ಅಧಿಕಾರಿಗಳು ಸಭೆಗೆ ವಿವರಿಸಿದರು.

ರಾಯಚೂರು ಜಿಲ್ಲೆಯಲ್ಲಿ ರೈಲ್ವಿ ಲೈನ್ ನಿರ್ಮಾಣ ಯೋಜನೆಯ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಮುನಿರಾಬಾದ್–ಮೆಹಬೂಬನಗರ ರೈಲ್ವೆಲೈನ್ ನಿರ್ಮಾಣದ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಸಿಂಧನೂರ, ರಾಯಚೂರು, ಮಾನವಿ, ಸಿರವಾರ ತಾಲೂಕಿನ ಕೆಲವು ಹಳ್ಳಿಗಳಲ್ಲಿ ನಡೆದ ಭೂಸ್ವಾಧೀನ ಪ್ರದೇಶದ ವಿಸ್ತೀರ್ಣವನ್ನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ಕೆಲವು ಕಡೆಗಳಲ್ಲಿ ಹೊಸದಾಗಿ ಪ್ರಸ್ತಾವನೆ ಸಲ್ಲಿಸಿದ್ದು ಭೂಸ್ವಾಧೀನ ಪ್ರಕ್ರಿಯೆಗೆ ಕ್ರಮ ವಹಿಸಲಾಗುತ್ತದೆ. ಗದಗ–ವಾಡಿ ರೈಲ್ವೆ ಯೋಜನೆಗೆ ಸಂಬಂಧಿಸಿದಂತೆ ರಾಯಚೂರು ತಾಲೂಕಿನ ಕುರುಬದೊಡ್ಡಿ, ಚಂದ್ರಬಂಡ, ಸಿಂಗನೋಡಿ ಗ್ರಾಮಗಳಲ್ಲಿ ಹೊಸದಾಗಿ ಕೈಗಾರಿಕಾ ಪ್ರದೇಶ ಮತ್ತು ಸೌರ ವಿದ್ಯುತ್ ಸ್ಥಾಪನೆಗಾಗಿ ಭೂಸ್ವಾಧಿನಪಡಿಸಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಎಂದು ರೈಲ್ವೆ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಬೆಂಗಳೂರು, ಕಲಬುರಗಿ, ಸೊಲ್ಲಪುರ ಸೇರಿದಂತೆ ಪ್ರಮುಖ ವಾಣಿಜ್ಯ ನಗರಗಳ ಮೂಲಕ ದಕ್ಷಿಣದ ಚೆನ್ನೈದಿಂದ ಉತ್ತರದ ಹೊಸದಿಲ್ಲಿವರೆಗೆ ಪ್ರಮುಖ ರೈಲುಗಳು ರಾಯಚೂರು ಮಾರ್ಗವಾಗಿಯೇ ಸಂಚರಿಸುತ್ತವೆ. ಇದು ನಮ್ಮ ಭಾಗ್ಯ. ಈ ರೈಲ್ವೆ ಲೈನದಲ್ಲಿ ಪ್ರತಿ ದಿನ ಸಾಕಷ್ಟು ಗೂಡ್ಸ್ ರೈಲುಗಳು ಸಂಚರಿಸುತ್ತವೆ. ಕೃಷಿ, ತೋಟಗಾರಿಕೆ, ವಾಣಿಜ್ಯ ಉತ್ಪನ್ನಗಳ ಸರಬರಾಜಿಗೆ ಇದು ಸಾಕಷ್ಟು ಅನುಕೂಲವಾಗಲಿದೆ. ಹಾಗಾಗಿ ರೈಲ್ವೆ ಇಲಾಖೆಗೆ ಸಂಬಂಧಿಸಿದ ಯಾವುದೇ ಕಾರ್ಯಗಳ ಪ್ರಗತಿಗೆ ಒತ್ತು ಕೊಡಬೇಕು ಎಂದು ಸಂಸದರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೈಲ್ವೆ ಯೋಜನೆಗಳ ಅನುಷ್ಠಾನಕ್ಕೆ ಭೂಮಿ ಒದಗಿಸುವ ರೈತರಿಗೆ ಭೂ ಪರಿಹಾರ ಪಾವತಿಯು ಕಾಲಮಿತಿಯೊಳಗೆ ಆಗಬೇಕು. ರೈತರಿಗೆ ನ್ಯಾಯ ಸಿಗುವಂತಾಗಬೇಕು. ಇದಕ್ಕೆ ಅಧಿಕಾರಿಗಳು ಹೆಚ್ಚಿನ ಒತ್ತು ಕೊಡಬೇಕು. ಸಭೆಯಲ್ಲಿ ವರದಿ ಒಪ್ಪಿಸುವುದಷ್ಟೇ ಅಧಿಕಾರಿಗಳ ಕೆಲಸವಲ್ಲ, ಕಾಳಜಿ ಮತ್ತು ಶ್ರದ್ಧೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಅಧಿಕಾರಿಗಳಿಗೆ ಇದೆ ವೇಳೆ ಸೂಚನೆ ನೀಡಿದರು.

ಪಿಎಂಶ್ರೀ ಶಾಲೆಗಳಿಗೆ ಮಂಜೂರಾಗಿರುವ ಕಾಮಗಾರಿಗಳ ಬಗ್ಗೆ ಸಂಸದರು ಪರಿಶೀಲಿಸಿದರು. 2024–25ನೇ ಸಾಲಿಗೆ ಪಿಎಂಶ್ರೀ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಕೋಟಿಗೂ ಹೆಚ್ಚು ಅನುದಾನ ಮಂಜೂರಾಗಿದ್ದು, ಪಿಆರ್‌ಇಡಿ, ಲೋಕೋಪಯೋಗಿ ಇಲಾಖೆಗಳಿಂದ ಕೊಠಡಿಗಳ ನಿರ್ಮಾಣ ಕಾರ್ಯ ನಡೆ–ಯುತ್ತಿದೆ. ಅದೇ ರೀತಿ 2025–26ನೇ ಸಾಲಿನಲ್ಲಿ 115 ಲಕ್ಷ ರೂ ವೆಚ್ಚದಲ್ಲಿ 4 ಶಾಲೆಗಳಲ್ಲಿ ಕೊಠಡಿಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. 2025–26ನೇ ಸಾಲಿನಲ್ಲಿ ಕೇಂದ್ರ ಅನುಮೋದನೆ ಮಂಡಳಿಯಿಂದ ಧರ್ತಿ ಅಬಾ ಜನ್ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ವಸತಿ ನಿಲಯಗಳ ನಿರ್ಮಾಣಕ್ಕೆ 23 ಕೋಟಿ ರೂ ಮಂಜೂರಾಗಿದೆ. 2025–26ನೇ ಸಾಲಿನಲ್ಲಿ ಕೆಕೆರ್ಡಿಬಿಯಿಂದ 35 ಕೆಪಿಎಸ್ ಶಾಲೆಗಳು ಮಂಜೂರಾಗಿವೆ. ಸಮಗ್ರ ಶಿಕ್ಷಣ ಕರ್ನಾಟಕದಿಂದ 2023–24ನೇ ಸಾಲಿನಲ್ಲಿ ಮಂಜೂರಾದ ಪೂರ್ವ ಪ್ರಾಥಮಿಕ ತರಗತಿಗಳನ್ನು 2024–25ನೇ ಸಾಲಿನಲ್ಲಿ 4 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿ ಕೆ.ಡಿ.ಬಡಿಗೇರ ಅವರು ಸಭೆಗೆ ಮಾಹಿತಿ ನೀಡಿದರು.

ಜನತೆಗೆ ನೀರು ಪೂರೈಸಿ: ಜಲಜೀವನ ಮಿಷನ್ ಯೋಜನೆ ಅನುಷ್ಠಾನದ ಚರ್ಚೆ ವೇಳೆ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಜನತೆಗೆ ನೀರು ಪೂರೈಸುವ ಕಾರ್ಯವಾಗಬೇಕು. ನೀರು ಪೂರೈಸದಿದ್ದರೆ ಜನ ಬೀದಿಗಿಳಿದು ಪ್ರತಿಭಟಿಸುತ್ತಾರೆ ಎಂಬುದರ ಬಗ್ಗೆ ಅರಿವಿರಬೇಕು. ನಾವು ಜನರ ಭಾವನೆಗಳಿಗೆ ಸ್ಪಂದನೆ ನೀಡಬೇಕು. ಜಿಲ್ಲಾ ಪಂಚಾಯತ್ ಸಿಇಓ ಅವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಕಾಲಕಾಲಕ್ಕೆ ಸಭೆ ನಡೆಸಿ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನಕ್ಕೆ ಹೆಚ್ಚಿನ ಆದ್ಯತೆ ಕೊಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸುಗಿರಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ ರೋಣಿ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಿಯು ಪರೀಕ್ಷೆಯು ವ್ಯವಸ್ಥಿತ, ಪಾರದರ್ಶಕವಾಗಿ ನಡೆಯಲಿ: ಅಪರ ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಫೆ.28 ರಿಂದ ಆರಂಭವಾಗಿ ಮಾರ್ಚ 17ರವರೆಗೆ ನಡೆಯಲಿದ್ದು, ಪರೀಕ್ಷೆಯನ್ನು ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಫೆ.21ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಸಿದ್ಧತೆ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳನ್ನು ಯಾವುದೇ ರೀತಿಯ ಗೊಂದಲಕ್ಕೆ ಅವಕಾಶವಿರದಂತೆ, ಸುಗಮ ಹಾಗೂ ಸುವ್ಯವಸ್ಥಿತವಾಗಿ ನಡೆಸಬೇಕು. ಪರೀಕ್ಷೆಗೆ ಮೇಲ್ವಿಚಾರಕರ ನಿಯೋಜನೆ, ಪೊಲೀಸರು ಹಾಗೂ ಆರೋಗ್ಯ ಸಿಬ್ಬಂದಿ ನಿಯೋಜನೆ ಸೇರಿದಂತೆ ಪಿಯು ಪರೀಕ್ಷಾ ಪ್ರಾಧಿಕಾರದ ನಿರ್ದೇಶನವನ್ನು ಚಾಚೂ ತಪ್ಪದೆ ಪಾಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.

ಪರೀಕ್ಷಾ ಕೊಠಡಿಗಳಲ್ಲಿ ಸಿಸಿಟಿವಿ ಅಳವಡಿಸುವುದು ಸೇರಿದಂತೆ ಪರೀಕ್ಷಾ ಪಾವಿತೆಯನ್ನು ಕಾಪಾಡಬೇಕು. ಪರೀಕ್ಷಾ ಕೇಂದ್ರಗಳ ಚಲನವಲನಕ್ಕೆ ಸಂಬಂಧಿಸಿದಂತೆ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಬೇಕು. ವಿದ್ಯಾರ್ಥಿಗಳು ನೋಂದಣಿ ಸಂಖ್ಯೆ ಹಾಗೂ ಕೊಠಡಿ ಸಂಖ್ಯೆ ಖಾತರಿ ಪಡಿಸಿಕೊಳ್ಳಲು ಪರೀಕ್ಷಾ ಕೇಂದ್ರದಲ್ಲಿ ಮಾಹಿತಿ ಒದಗಿಸುವಂತಾಗಬೇಕು ಎಂದರು.



ಪರೀಕ್ಷಾ ದಿನಗಳಲ್ಲಿ ಅಗತ್ಯ ವಾಹನ ನಿಯೋಜಿಸುವುದು ಜೊತೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗದಂತೆ ನೋಡಿಕೊಳ್ಳುವುದು, ಆರೋಗ್ಯ ಇಲಾಖೆಯಿಂದ ಶುಶ್ರೂಷಕರನ್ನು ನೇಮಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕ ಜಾರಿಗೊಳಿಸಲಾಗುತ್ತದೆ. ಹಾಗೆಯೇ ಪರೀಕ್ಷಾ ದಿನಗಳಂದು ಜೆರಾಕ್ಸ್ ಅಂಗಡಿಗಳನ್ನು ಸಹ ಮುಚ್ಚಿಸಲಾಗುತ್ತದೆ ಎಂದರು.

ಈ ವೇಳೆ ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮುಶೇಖರಪ್ಪ ಹೋಕ್ರಾಣಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಈ ಬಾರಿ 22,442 ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಬರೆಯಲಿದ್ದು, ಮೊದಲ ಬಾರಿಗೆ 18,419 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. 560 ಖಾಸಗಿಯಾಗಿ ಹಾಗೂ 3,450 ಪುನರಾವರ್ತಿತ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಜಿಲ್ಲೆಯ 43 ಕೇಂದ್ರಗಳಲ್ಲಿ ದ್ವಿತೀಯ ಪಿಯು ಪರೀಕ್ಷೆ ನಡೆಯಲಿದೆ ಎಂದರು.

ಪರೀಕ್ಷೆ ಕೇಂದ್ರಗಳು: ರಾಯಚೂರು ತಾಲೂಕಿನಲ್ಲಿ 13, ಲಿಂಗಸುಗೂರು 07, ದೇವದುರ್ಗ 05, ಸಿಂಧನೂರು 09, ಮಾನವಿ 05, ಮಸ್ಕಿ 02, ಸಿರವಾರ 02 ಸೇರಿದಂತೆ ಒಟ್ಟು 43 ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಇದೇ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ತಹಶಿಲ್ದಾರರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿವಿಧ ಕಾಲೇಜಿನ ಪ್ರಾಂಶುಪಾಲರು, ಹಿರಿಯ ಉಪನ್ಯಾಸಕರು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ವಿವಿಧ ಅಧಿಕಾರಿಗಳು, ಸಿಬ್ಬಂದಿ ಸಭೆಯಲ್ಲಿ ಇದ್ದರು.

## ಅಂಕಗಳಿಗೆ ಮಾತ್ರ ಅಲ್ಲ, ಜ್ಞಾನಕ್ಕೂ ಒತ್ತು ಕೊಡಿ: ಸೋಮನಗೌಡ ಪಾಟೀಲ ಅಭಿಮತ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಪಟ್ಟಣದ ವಿದ್ಯಾನಂದ ಗುರುಕುಲ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಶನಿವಾರ ಸಂಜೆ ವಾರ್ಷಿಕೋತ್ಸವವನ್ನು ಸಂಭ್ರಮದ ನಡೆಯಿತು.

ಈ ಸಂದರ್ಭದಲ್ಲಿ ನಿವೃತ್ತ ಪ್ರಿನ್ಸಿಪಾಲ ಸೋಮನಗೌಡ ಪಾಟೀಲ್ ಅವರು ಅತಿಥಿಯಾಗಿ ಮಾತನಾಡಿ, "ಶಿಕ್ಷಣ ದುಬಾರಿ ಆದರೂ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕೆಂಬ ಹಂಬಲ ಪ್ರತಿಯೊಬ್ಬ ಪಾಲಕರಲ್ಲಿಯೂ ಇದೆ. ವಿದ್ಯಾರ್ಥಿಗಳನ್ನು ಜ್ಞಾನವಂತರನ್ನಾಗಿ ರೂಪಿಸುವುದು ನಮ್ಮ ಜವಾಬ್ದಾರಿ. ವಿದ್ಯಾರ್ಥಿಗಳು ಕೇವಲ ಅಂಕಗಳಿಗೆ ಮುಗ್ಗರದೆ, ಜ್ಞಾನ, ನೈತಿ-ಕತೆ ಮತ್ತು ಸಾಮರ್ಥ್ಯವನ್ನು ಅಭಿವೃದ್ಧಿಪಡಿಸಬೇಕು," ಎಂದರು.

"ಶಾಲೆಯು ಮಕ್ಕಳ ಭವಿಷ್ಯ ನಿರ್ಮಾಣಕ್ಕೆ ಪ್ರೇರಣಾದಾಯಕವಾಗಬೇಕು. ವಿದ್ಯಾರ್ಥಿಗಳು 'ಕಾಯಕವೇ ನಾಯಕ್' ಎಂಬ ತತ್ವದಲ್ಲಿ ಬೆಳೆಯಬೇಕು," ಎಂದು ಹೇಳಿದರು. 16 ವರ್ಷಗಳಿಂದ ಗುರುಕುಲದಲ್ಲಿ ಓದುತ್ತಿರುವ ವಿದ್ಯಾರ್ಥಿಯೊಬ್ಬರು ತಮ್ಮ ಅನುಭವವನ್ನು ಹಂಚಿಕೊಂಡು, "ಬಹುಶ್ರಮದಿಂದ ಓದುತ್ತಾ ಬಂದು ಒಂದು ಹಂತಕ್ಕೆ ತಲುಪಿದ್ದೇನೆ. ಇಂಗ್ಲಿಷ್, ಹಿಂದಿ ಭಾಷಾ ಜ್ಞಾನ ಜೊತೆಗೆ ಕಂಪ್ಯೂಟರ್ ಜ್ಞಾನ ಕಲಿಯಬೇಕು. ಮಕ್ಕಳು ಕೇವಲ ಅಂಕಗಳಿಗೆ ಮುಚ್ಚಡೆಯಾಗಬಾರದು; ಜ್ಞಾನ ಸಂಪಾದನೆಗೆ ಮನಸ್ಸು ಮುಳುಗಿಸಬೇಕು. ವಿದ್ಯಾರ್ಥಿಗಳು ತಮ್ಮ ಭವಿಷ್ಯ ರೂಪಿಸಿಕೊಂಡು, ವಿವಿಧ ಉನ್ನತ ಹುದ್ದೆಗಳಿಗೆ ಆಯ್ಕೆಯಾಗುವಂತೆ ಬೆಳೆಯಬೇಕು. 'ಕಾಯಕವೇ ನಾಯಕ್' ತತ್ವದಲ್ಲಿ ಮುಂದುವರಿಯಬೇಕು. ನಮ್ಮ ಭಾಗದ ಗವಿಮಠ್ ಶಿಕ್ಷಣಕ್ಕೆ ಉತ್ತಮ ಪ್ರೇರಣೆಯಾಗಿದೆ," ಎಂದರು. ಸಂಸ್ಥೆಯ ಉಪಾಧ್ಯಕ್ಷ ಶರಣಪ್ಪ ಹೊಸಮನಿ ಮಾತನಾಡಿ, "ವಿದ್ಯಾರ್ಥಿಗಳು ಮೊಬೈಲ್ ಮತ್ತು ಟಿವಿ ನೋಡುವುದನ್ನು ಕಡಿಮೆ ಮಾಡಿ ಓದಿನ ಕಡೆ ಹೆಚ್ಚು ಒತ್ತು ನೀಡಬೇಕು. ಶಿಕ್ಷಕರು ಸಹ ಕಷ್ಟಪಟ್ಟು, ಇಷ್ಟಪಟ್ಟು ಕೆಲಸ ಮಾಡಿದಾಗ ಸಂಸ್ಥೆಗೆ ಉತ್ತಮ ಹೆಸರು ಬರುತ್ತದೆ," ಎಂದು ತಿಳಿಸಿದರು. ಮಕ್ಕಳಿಂದ ನೃತ್ಯ, ಗಾನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವೈವಿಧ್ಯಮಯ ಪ್ರದರ್ಶನಗಳು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿದ್ದು, ಶಾಲೆಯ ಸಾಂಸ್ಕೃತಿಕ ಪರಂಪರೆಯನ್ನು ಮೆರೆದವು. ಇದೇ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರು, ನಿವೃತ್ತ ಸೈನಿಕರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಲಾಯಿತು. ಜೊತೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಶಾಲೆಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ವೇದಿಕೆಯಲ್ಲಿ ಕೆ.ಜಿ. ಕುಲಕರ್ಣಿ, ಕಾರ್ಯದರ್ಶಿ ಜಿ.ವಿ.ಜಹಾಂಗೀರ್, ಆಡಳಿತಾಧಿಕಾರಿ ಶೇಕ್ ಮಹಿಬೂಬ್, ಶಿವಕುಮಾರ್ ಹೇಳವರ, ಶಿಕ್ಷಕಿ ಶ್ರೀಲತಾ ಕೆ, ನಿವೃತ್ತ ಸೈನಿಕ ದೇವರೆಡ್ಡಿ ಮುಂದಲಮನಿ, ಎಸ್.ಎಚ್. ದೇಸಾಯಿ, ಅಮರೇಶ್ ಎಂ., ರೂಪಾ ದೇಸಾಯಿ, ಸೋಮಶೇಖರ ಲಮಾಣಿ, ಗಿರಿಜಾ ಸಿ, ಎನ್.ಕೆ. ದೀಕ್ಷಿತ್ ಸೇರಿದಂತೆ ಶಾಲೆಯ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ತಾಲೂಕಾ ಅಧ್ಯಕ್ಷರ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ ಕಲಘಟಗಿ ಧಾರವಾಡ ಗ್ರಾಮೀಣ ಜನತಾದಳದ (ಜ್ಯಾ) ಅಧ್ಯಕ್ಷರಾದ ಜಿ.ಬಿ ಗಂಗಾಧರಮಠ ಇವರು ತಾಲೂಕಿನ ಬಸವರಾಜ ತಿಪ್ಪಣ್ಣವರ ಇವರನ್ನು ಜನತಾದಳದ (ಜ್ಯಾ) ತಾಲೂಕಾ ಘಟಕದ ಅಧ್ಯಕ್ಷರನ್ನಾಗಿ ಆಯ್ಕೆಮಾಡಲಾಗಿದೆ ಎಂದು ಪತ್ರಿಕಾ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ರಾಜಾಧ್ಯಕ್ಷರಾಗಿ ಆದಮ್ ಖಾಜಿ ಅವಿರೋಧ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಇತ್ತೀಚೆಗೆ ಕಲಬುರಗಿಯಲ್ಲಿ ಕರ್ನಾಟಕದ 'ಅಂಜುಮನ್-ಎ-ಖಜಾಯತ್' ಸಂಸ್ಥೆಯ ಬಲವರ್ಧನೆಗಾಗಿ ರಾಜ್ಯದ ವಿವಿಧ ಭಾಗಗಳ ಖಾಜಿಯವರನ್ನು ಸದಸ್ಯರನ್ನಾಗಿ ಅವಿರೋಧವಾಗಿ ನೂತನ ಪದಾಧಿಕಾರಿಗಳು ಹಾಗೂ ಕಾರ್ಯಕಾರಿ ಸಮಿತಿಯ ಸದಸ್ಯರ ಆಯ್ಕೆ ಪ್ರಕ್ರಿಯೆ ಗೌರವ ಅಧ್ಯಕ್ಷ ಖಾಜಿ ಮೊಹಮ್ಮದ್ ಹಮೀದ್ ಅಲಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ಕೆಂಭಾವಿ ಮತ್ತು ಹುಣಸಗಿಯ ಸದರ್ ಖಾಜಿಯವರಾದ ಖಾಜಿ ಮೊಹಮ್ಮದ್ ಆದಮ್ ಫಾರೂಕಿಯವರನ್ನು ರಾಜ್ಯಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು,

ಉಪಾಧ್ಯಕ್ಷರು: ಖಾಜಿ ಮಿರ್ ಇಬ್ರಾಹಿಂ ಅಲಿ (ಗಂಗಾವತಿ) ಮತ್ತು ಸಯ್ಯದ್ ಗೌಸುದ್ದಿನ್. ಕಾರ್ಯದರ್ಶಿ: ಹಮೀದ್ ಫೈಸಲ್ ಸಿದ್ದಿಕಿ (ಕಲಬುರ್ಗಿ). ಜಂಟಿ ಕಾರ್ಯದರ್ಶಿ: ಮೌಲಾನಾ ಖಾಜಿ ಜಮೀರ್ ಅಹಮದ್ (ಮುದ್ಗಲ್). ಖಜಾಂಚಿ: ಖಾಜಿ ಆಜಮ್ ಸಿದ್ದಿಕಿ (ಚಿತ್ತಾಮಪುರ). ಜಂಟಿ ಖಜಾಂಚಿ: ಖಾಜಿ ಸಯ್ಯದ್ ಇಮ್ರಾನ್ (ಆಳಂದ್). ಕಾರ್ಯಕಾರಿ ಸಮಿತಿ ಸದಸ್ಯರು: ಖಾಜಿ ರಿಯಾಜುದ್ದಿನ್ (ಮಸ್ಕಿ) ಖಾಜಿ ಮಸೂದ್ ಅಹಮದ್ (ಕಾಳಗಿ) ಖಾಜಿ ಅಹಮದ್ ಮೋಹಿದ್ದಿನ್ ಸಿದ್ದಿಕ್ (ಗುರ್ಮಿಟ್ಕಲ್) ಸಯ್ಯದ್ ಶಂಶಾಲಾಮ್ ಹುಸೈನಿ (ಕೊಂಗಂಡ) ಖಾಜಿ ಶಂಶುದ್ದಿನ್ (ಕೌತಾಲ್) ಖಾಜಿ ಸಯ್ಯದ್ ಜಾಫರ್ (ಗುರಗುಂಟಾ) ಖಾಜಿ ಮಲೀಕ್ (ಸಿಂಧನೂರು) ಖಾಜಿ ಅಬ್ದುಲ್ ಖಲೀಕ್ (ಉತ್ತಕೂರು) ಖಾಜಿ ಹಾಫಿಜ್ ಯುನೂಸ್ (ಲಿಂಗಸಗೂರು) ಖಾಜಿ ಮುಕ್ರಮ (ಗೋಗಿ) ಸಯ್ಯದ್ ಅಬುಲ್ ಹಸನ (ಕಂಪ್ಲಿ) ಖಾಜಿ ಆಸೀಫ್ ಜಿಲಾನಿ (ದೇವದುರ್ಗ) ಖಾಜಿ ಏಜಾಜುದ್ದಿನ್ (ತಾವರಗೇರಾ) ಖಾಜಿ ಆತಿಫ್ (ಚಿಂಚೋಳಿ ) ಖಾಜಿ ಮಸೂದ್ ಅಹೇಮದ್ (ಕಾಳಗಿ) ಸಭೆಯಲ್ಲಿ ರಾಜ್ಯದಾದ್ಯಂತ ಆಗಮಿಸಿದ್ದ ಹಲವು ಗಣ್ಯ ಖಾಜಿಯವರು ಉಪಸ್ಥಿತರಿದ್ದು ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದರು.

## ಬಸ್ ನಿಲ್ದಾಣದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಪಟ್ಟಣದ ಬಸ್ ನಿಲ್ದಾಣದಲ್ಲಿ ಶನಿವಾರ ಶುದ್ಧ ಕುಡಿಯುವ ನೀರಿನ (ಆರ್‌ಒ) ಘಟಕಕ್ಕೆ ಚಾಲನೆ ನೀಡಲಾಯಿತು.

ಪಟ್ಟಣ ಪಂಚಾಯಿತಿ ನೂತನ ಅಧ್ಯಕ್ಷೆ ಲೀಲಾವತಿ ಮುಧೋಳ ಹಾಗೂ ಉಪಾಧ್ಯಕ್ಷೆ ಮಂಜುಳಾ ಕಲ್ಮನಿ ಅವರು ರಿಬ್ಬನ್ ಕತ್ತರಿಸುವ ಮೂಲಕ ಘಟಕವನ್ನು ಉದ್ಘಾಟಿಸಿದರು.

'ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ಕೊರತೆಯಿಂದ ಪ್ರಯಾಣಿಕರು ಹಲವು ವರ್ಷಗಳಿಂದ ಸಂಕಷ್ಟ ಅನುಭವಿಸುತ್ತಿದ್ದರು. ಬೇಸಿಗೆ ಕಾಲದಲ್ಲಿ ಸಮಸ್ಯೆ ತೀವ್ರವಾಗುತ್ತಿದ್ದ ಹಿನ್ನೆಲೆಯಲ್ಲಿ, ಸಾರಿಗೆ ಘಟಕ ವ್ಯವಸ್ಥಾಪಕ ವೆಂಕಟಾಚಲಪತಿ ಅವರು ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆಗೆ ಮನವಿ ಸಲ್ಲಿಸಿದ್ದರು.

ಮನವಿಗೆ ಸ್ಪಂದಿಸಿದ ಶಾಸಕ ಬಸವರಾಜ ರಾಯರಡ್ಡಿ, ಪಟ್ಟಣ ಪಂಚಾಯಿತಿ ಅನುದಾನದಲ್ಲಿ ಘಟಕ ಸ್ಥಾಪನೆಗೆ ಸೂಚನೆ ನೀಡಿದಂತೆ, ಮುಖ್ಯಾಧಿಕಾರಿ ನಾಗೇಶ ಅವರ ಮಾರ್ಗದರ್ಶನದಲ್ಲಿ ಘಟಕವನ್ನು ಸ್ಥಾಪಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷೆ ಲಲಿತಮ್ಮ ಯಡಿಯಾಪೂರ, ಸದಸ್ಯರಾದ ಪ್ರಶಾಂತ ಆರಬೆರಳಿನ, ಮುಖಂಡರಾದ ರಾಮಣ್ಣ ಬಂಕದಮನಿ, ಮಲಿಯಪ್ಪ ಆಣ್ಣಿಗೇರಿ,

ಮಹಾಂತೇಶ ಮುಧೋಳ, ಮುತ್ತು ವಾಲ್ಮೀಕಿ, ರವಿ ಬಜೇಂತ್ರಿ, ಸಂಚಾರಿ ನಿಯಂತ್ರಕರಾದ ಬಸಯ್ಯ ಹಿರೇಮಠ, ವೀರಯ್ಯ ಹಿರೇಮಠ, ಮಜರ್ ಹುಸೇನ ಬಾಬಾ, ನಾಗೇಶ ಬಿನ್ನಾಳ, ಬಿ.ಬಿ. ನಾಗಪ್ಪ, ಕಳಕಮ್ಮ ಅಂಗಡಿ, ಬಸನಗೌಡ ಭೂಮನಗೌಡ, ಎಸ್.ಎನ್. ಕೈಸರ್, ರೇಣುಕಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಧ್ಯಕ್ಷ ಸ್ಥಾನಕ್ಕೆ ಲೀಲಾವತಿ ಮುಧೋಳ್ ಉಪಾಧ್ಯಕ್ಷ ಸ್ಥಾನಕ್ಕೆ ಮಂಜುಳಾ ಕಲ್ಮನಿ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಕುಕನೂರ

ಕುಕನೂರು ಪಟ್ಟಣ ಪಂಚಾಯಿತಿ ಅಧ್ಯಕ್ಷ ಉಪಾಧ್ಯಕ್ಷರ ಸ್ಥಾನಕ್ಕೆ ಜನವರಿ 22ರಂದು ರಾಜೀನಾಮೆ ನೀಡಲಾಗಿತ್ತು ಒಂದು ತಿಂಗಳ ನಂತರ 21-02-2026ರಂದು. ಚುನಾವಣೆ ಪ್ರಕ್ರಿಯೆ ಮಧ್ಯಾಹ್ನ 1:45 ಗಂ-ಟೆಗೆ ಈ ಪ್ರಕ್ರಿಯೆ ತಹಸೀಲ್ದಾರ್ ಬಸವರಾಜ್ ಬೆಣ್ಣೆ ಶಿರೂರು ಅವರ ಸಮ್ಮುಖದಲ್ಲಿ ನಡೆಯಿತು.

ಪಟ್ಟಣ ಪಂಚಾಯತಿ ಸದಸ್ಯರು ಮತ್ತು ಲೋಕಸಭೆ ಸದಸ್ಯರು ಹಾಗೂ ವಿಧಾನಸಭೆ ಸದಸ್ಯರು ಭಾಗವಹಿಸಿ ಕೈ ಎತ್ತುವುದರ ಮೂಲಕ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆಯನ್ನು ಮಾಡಲಾಯಿತು. ಚುನಾವಣೆಯ ಪ್ರಕ್ರಿಯೆಯನ್ನು ಬಹಳ ಶಾಂತವತವಾಗಿ ನಡೆಸಲಾಯಿತು.

ಪಟ್ಟಣ ಪಂಚಾಯಿತಿಯ 19 ಸದಸ್ಯರು ಭಾಗವಹಿಸಿದ್ದರು ಕಾಂಗ್ರೆಸ್ ಪಕ್ಷದಿಂದ 10 ಸದಸ್ಯರು ಹಾಗೂ ಬಿಜೆಪಿ ಪಕ್ಷದಿಂದ 9 ಸದಸ್ಯರು ಇದ್ದರು. ಅಧ್ಯಕ್ಷ ಸ್ಥಾನಕ್ಕೆ ಎರಡು ನಾಮಪತ್ರಗಳು ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಎರಡು ನಾಮಪತ್ರಗಳು ಸಲ್ಲಿಕೆಯಾಗಿದ್ದವು ಕಾಂಗ್ರೆಸ್ ಪಕ್ಷದಿಂದ ಲೀಲಾವತಿ ಗಂಡ ಪ್ರವೀಣ್ ಕುಮಾರ್ ಮುಧೋಳ್ 12 ಮತಗಳನ್ನು ಪಡೆದು ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾದರು ಮಂಜುಳಾ ಗಂಡ ಯಲ್ಲಪ್ಪ ಕಲ್ಮನಿ 12 ಮತಗಳ ಪಡೆದು ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾದರು.

ಬಿಜೆಪಿಯಿಂದ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆ ಮಾಡಿದ ಲಕ್ಷ್ಮಿ ಸಬರದ 9 ಮತಗಳು ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನೇತ್ರಾವತಿ ಮಾಲಗಿತ್ತಿಗೆ 9 ಮತಗಳು ಪಡೆದುಕೊಂಡಿದ್ದರು ಈ ಸಂದರ್ಭದಲ್ಲಿ ಶಾಸಕ ಬಸವರಾಜ ರಾ ರೆಡ್ಡಿ ಸಂಸದ ರಾಜಶೇಖರ್ ಹಿಟ್ನಾಳ್ ಮತ ಚಲಾಯಿಸಿ ಗೆದ್ದ ಅಭ್ಯರ್ಥಿಗಳಿಗೆ ಶುಭ ಕೋರಿದರು ಈ ವೇಳೆಯಲ್ಲಿ ಅಧಿಕಾರಿಗಳಾದ ಪಟ್ಟಣ ಪಂಚಾಯತಿ ಮುಖ್ಯ ಅಧಿಕಾರಿ ನಾಗೇಶ್ ಸೇರಿದಂತೆ ಕಂದಾಯ ಇಲಾಖೆ ಸಿಬ್ಬಂದಿಗಳು ಹಾಗೂ ಪೊಲೀಸ್ ಬಂದೋಬಸ್ತಿನಲ್ಲಿ ಚುನಾವಣೆ ಪ್ರಕ್ರಿಯೆ ನಡೆಯಿತು. ಪಟ್ಟಣ ಪಂಚಾಯತ ಸದಸ್ಯರು ಹಾಗೂ ಕಾಂಗ್ರೆಸ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚೋದರೊಂದಿಗೆ ಸಂಭ್ರಮ ಹಂಚಿಕೊಂಡರು.

## ರಂಜಾನ್ ಉಪವಾಸದಲ್ಲಿ: ಶ್ರದ್ಧೆ ಮೆರೆದ ಬಾಲೆ



• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಪವಿತ್ರ ರಂಜಾನ್ ಮಾಸದ ಅಂಗವಾಗಿ ಮುಸ್ಲಿಂ ಬಾಂಧವರು ಶ್ರದ್ಧಾ ಭಕ್ತಿಯಿಂದ ಉಪವಾಸ ವ್ರತ ಆಚರಿಸುತ್ತಿದ್ದಾರೆ. ಈ ನಡುವೆ ಯಾದಗಿರಿ ಜಿಲ್ಲೆಯ ಕೆಂಭಾವಿ ಪಟ್ಟಣದ 6 ವರ್ಷದ ಬಾಲಕಿ ಜೋಹರಾ ಬತೂಲ್ ಕಠಿಣ ಉಪವಾಸ ಕೈಗೊಳ್ಳುವ ಮೂಲಕ ಎಲ್ಲರ ಗಮನ ಸೆಳೆದಿದ್ದಾಳೆ.

ಪಟ್ಟಣದ ನಿವಾಸಿ ಬಂದೇನವಾಜ್ ನಾಲತವಾಡ ಅವರ ಪುತ್ರಿಯಾಗಿರುವ ಜೋಹರಾ, ಇಷ್ಟು ಚಿಕ್ಕ ವಯಸ್ಸಿನಲ್ಲೇ ಅತ್ಯಂತ ನಿಷ್ಠೆ ಮತ್ತು ಭಕ್ತಿಯಿಂದ ದಿನಪೂರ್ತಿ ಉಪವಾಸ (ರೋಜಾ) ಆಚರಿಸುವ ಮೂಲಕ ಹಿರಿಯರ ಮೆಚ್ಚುಗೆಗೆ ಪಾತ್ರಳಾಗಿದ್ದಾಳೆ.

## ಹತ್ತು ಸಾವಿರ ಫಲಾನುಭವಿಗಳು ನೋಂದಣಿ ಗುರಿ



• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆಯಡಿ ಜಿಲ್ಲೆಯ ಹತ್ತು ಸಾವಿರ ಅಸಂಘಟಿತ ಕಾರ್ಮಿಕ ಫಲಾನುಭವಿಗಳ ನೋಂದಣಿಗೆ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಸಿದರು.

ನಗರದ ಜಿಲ್ಲಾಡಳಿತ ಸಭಾಂಗಣದಲ್ಲಿ ಬುಧವಾರ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕಾರ್ಮಿಕ ಇಲಾಖೆ ವತಿಯಿಚಿದ ಅಸಂಘಟಿತ ವಲಯ ಕಾರ್ಮಿಕರಿಗೆ ಪಿಂಚಣಿ ಯೋಜನೆ ಜಿಲ್ಲಾ ಮಟ್ಟದ ಸಭೆ ನಡೆಸಲಾಯಿತು.

ಪ್ರಧಾನಮಂತ್ರಿ ಶ್ರಮಯೋಗಿ ಮಾನ್-ಧನ್ ಪಿಂಚಣಿ ಯೋಜನೆಅಡಿ ರಿಕ್ಷಾ ಚಾಲಕರು, ಹಮಾಲುಗಳು, ಇಟ್ಟಿಗೆ ಭಟ್ಟಿಕಾರ್ಮಿಕರು, ಗೃಹ ಆಧಾರಿತ ಕಾರ್ಮಿಕರು, ಬೀದಿ ಬದಿ ವ್ಯಾಪಾರಿ, ಬಿಸಿಯೂಟ ಸಿದ್ಧಪಡಿಸುವವರು, ಚಮ್ಮಾರರು, ಚಿಂದಿ ಆಯುವವರು, ಮನೆ ಕೆಲಸದವರು ಮುಂತಾದ ಅಸಂಘಟಿತ ಕಾರ್ಮಿಕರು ಈ ಯೋಜನೆಅಡಿ ನೊಂದಾಯಿಸಿಕೊಳ್ಳಬಹುದು. ಕೇಂದ್ರ ಸರ್ಕಾರವು 18 ವರ್ಷ ಮೇಲ್ಪಟ್ಟ ಕಾರ್ಮಿಕರು, ಫಲಾನುಭವಿಗಳು ಪಾವತಿಸುವ ವಂತಿಕೆಗೆ ಸಮಾನಾಚಿತರ ವಂತಿಕೆಯನ್ನು ಪಿಂಚಣಿ ಖಾತೆಗೆ ಪಾವತಿಸುತ್ತದೆ. 60 ವರ್ಷ ವಯಸ್ಸು ಪೂರ್ಣಗೊಂಡ ನಚಿತರ ತಿಂಗಳಿಗೆ ರೂ.3,000 ಖಚಿತ ಕನಿಷ್ಠ ಮಾಸಿಕ ಪಿಂಚಣಿ ಪಡೆಯಲು ಅರ್ಹರಾಗುತ್ತಾರೆ.

## ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದ ಶಾಸಕ ನಾರಾ ಭರತ್ ರೆಡ್ಡಿ

• ಮಲ್ಲಮ್ಮ ನುಡಿ ವಾರ್ತೆ ,ಬಳ್ಳಾರಿ



ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿಯವರು ಶನಿವಾರ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಿವಿಧ ವಾರ್ಡುಗಳಲ್ಲಿ ವಿವಿಧ ಕಾಮಗಾರಿಗಳಿಗ ಭೂಮಿ ಪೂಜೆ ನೆರವೇರಿಸಿದರು.

ಬಳ್ಳಾರಿ ನಗರದ 23ನೇ ವಾರ್ಡಿನ ಮಹಾನಂದಿಕೊಟ್ಟಂ ಸರ್ಕಾರಿ ಪ್ರಾಥಮಿಕ ಶಾಲೆಯನ್ನು ಅಂ-ದಾಜು 1.32 ಕೋಟಿ ರೂ.ಗಳ ವೆಚ್ಚದಲ್ಲಿ ಮರು ನಿರ್ಮಾಣ ಮಾಡಲಾಗಿದ್ದು, 5 ನೂತನ ಕೊಠಡಿಗಳನ್ನು ಉದ್ಘಾಟಿಸಿದರು. 5 ಕೊಠಡಿಗಳು, ಒಂದು ಅಡುಗೆ ಕೋಣೆ, ಶೌಚಾಲಯ ಹಾಗೂ ಕಾಂಪೌಂಡ್, ಪೇವರ್ಸ್ ಅಳವಡಿಕೆ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸುಸಜ್ಜಿತವಾಗಿ ನಿರ್ಮಿಸಲಾಗಿದೆ. ಉದ್ಘಾಟನಾ ಸಮಾರಂಭದಲ್ಲಿ ಮೇಯರ್ ಗಾದೆಪ್ಪ, ಆಯುಕ್ತರಾದ ಮಂಜುನಾಥ್, ವಾರ್ಡ್ ಪ್ರಮುಖರಾದ ಸೋಮಶೇಖರ್, ಗೌತಮ್, ಬ್ರಹ್ಮಯ್ಯ, ಹುಲಿಗೆಪ್ಪ, ಕೆಂಚಪ್ಪ, ಮಾಜಿ ಮೇಯರ್ ಎಂ.ರಾಜೇಶ್ವರಿ, ಕಾಂಗ್ರೆಸ್ ಮುಖಂಡರಾದ ಸುಬ್ಬರಾಯುಡು, ಪರಶುರಾಮುಡು, ಥಿಯೇಟರ್ ಶಿವು ಮತ್ತಿತರರು ಹಾಜರಿದ್ದರು.

ನಗರದ 35ನೇ ವಾರ್ಡ್ ವ್ಯಾಪ್ತಿಯ ರಾಜೇಶ್ವರಿ ನಗರದಲ್ಲಿ ಅಂದಾಜು ವೆಚ್ಚ 20 ಲಕ್ಷ ರೂ. ಗಳಲ್ಲಿ ಮೇದಾರ ಸಮುದಾಯ ಭವನದ ನಿರ್ಮಾಣ ಕಾಮಗಾರಿ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭ ವಾರ್ಡಿನ ಸದಸ್ಯ ಮಿಂಚು ಶ್ರೀನಿವಾಸ, ಪಾಲಿಕೆಯ ಸದಸ್ಯರಾದ ಕುಬೇರಾ, ಮಾಜಿ ಮೇಯರ್ ರಾಜೇಶ್ವರಿ, ಕಾಂಗ್ರೆಸ್ ಮುಖಂಡರಾದ ಎಲ್.ಮಾರೆಣ್ಣ, ಶೇಖಣ್ಣ, ರಾಮಾಂಜನೇಯ, ದಾನಪ್ಪ, ಬಾನಕ್ಕ, ಪ್ರಸಾದ್, ಮಂಜು, ಶ್ಯಾಮ್, ದೇಗಲಪಾಡು ನಾರಾಯಣ ಸೇರಿದಂತೆ ಹಲವರು ಹಾಜರಿದ್ದರು.

ವಾರ್ಡ್ ಸಂಖ್ಯೆ 3ರ ಭತ್ರಿ ಪ್ರದೇಶದಲ್ಲಿ 20 ಲಕ್ಷ ರೂ.ಗಳ ವೆಚ್ಚದಲ್ಲಿ ಅಂಗನವಾಡಿ ಕೇಂದ್ರ ನಂ.01ರ ನಿರ್ಮಾಣ ಕಾಮಗಾರಿಗೆ ಶಾಸಕ ನಾರಾ ಭರತ್ ರೆಡ್ಡಿಯವರು ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭ ವಾರ್ಡಿನ ಸದಸ್ಯರೂ ಮಾಜಿ ಮೇಯರ್ ಎಂ.ರಾಜೇಶ್ವರಿ, ಕಾಂಗ್ರೆಸ್ ಮುಖಂಡರಾದ ವಿಷ್ಣು ಬೋಯಪಾಟಿ, ಪರಶುರಾಮುಡು, ಸುಬ್ಬರಾಯುಡು, ಭತ್ರಿ ಮಂಜು, ಸೋಮಪ್ಪ ಮತ್ತಿತರರು ಹಾಜರಿದ್ದರು.

## 'ಸರ್ಕಲ್ ಆಫ್ ಲೈಫ್,' ಮಾತಿಲ್ಲದ ಪಪೆಟ್ ನಾಟಕ

ಕಲಬುರಗಿ: ಕಲಬುರಗಿ ನಾಟಕೋತ್ಸವ 2026ರ ಅಂಗವಾಗಿ ಫೆಬ್ರವರಿ 22ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ರಂಗಾಯಣದಲ್ಲಿ 'ಸರ್ಕಲ್ ಆಫ್ ಲೈಫ್' ಎಂಬ ಮಾತಿಲ್ಲದ ಪಪೆಟ್ ನಾಟಕವನ್ನು ಯಶಸ್ವಿಯಾಗಿ ಪ್ರದರ್ಶಿಸಲಾಯಿತು. ಈ ನಾಟಕವನ್ನು ರಂಗ ಶಂಕರ ನಿರ್ಮಿಸಿದ್ದು, ಸುರೇಂದ್ರನಾಥ ಎಸ್. ಅವರು ನಿರ್ದೇಶನ ವಹಿಸಿದ್ದರು.

ಮಾತುಗಳಿಲ್ಲದೆ ಕೇವಲ ಪಪೆಟ್‌ಗಳ ಚಲನೆ, ಭಾವಾಭಿನಯ ಮತ್ತು ದೃಶ್ಯ ಸಂಕೇತಗಳ ಮೂಲಕ ಮಾನವ ಜೀವನದ ಸೌಂದರ್ಯವನ್ನು ನಾಟಕವು ಮನಮುಟ್ಟುವಂತೆ ಚಿತ್ರಿಸಿತು. ಬಾಲ್ಯದಿಂದ ಯೌವನ, ನಂತರ ವೃದ್ಧಾಪ್ಯದವರೆಗೆ ಸಾಗುವ ಮಾನವ ಜೀವನದ ಚಕ್ರವನ್ನು ಈ ನಾಟಕವು ಸರಳವಾದರೂ ಗಾಢ ಅರ್ಥಪೂರ್ಣವಾಗಿ ಪ್ರೇಕ್ಷಕರ ಮುಂದಿಟ್ಟಿತು. ಮಗು ಹಿರಿಯನಾಗುವುದು, ಹಿರಿಯನು ಮತ್ತೆ ಮಗುವಿನಂತಹ ನಿರ್ದೋಷಿತ ಮನಸ್ಥಿತಿಗೆ ತಲುಪುವುದು ಎಂಬ ಜೀವನದ ಸಹಜ ಪರಿವರ್ತನೆಗಳನ್ನು ನಾಟಕವು ಸ್ಪಷ್ಟವಾಗಿ ತೋರಿಸಿತು.

# ನಾಗರಾಜ ಶೆಟ್ಟಿ ಅವರ ನಿಧನಕ್ಕೆ ವಿದ್ಯಾರ್ಥಿಗಳು ನುಡಿ ನಮನ



• ಮಲ್ಲಮ್ಮ ನುಡಿ ವಾರ್ತೆ ಮಸ್ಕಿ

ಶುಕ್ರವಾರಹಠಾತ್‌ಹೃದಯಾಘಾತದಿಂದ ಮೃತಪಟ್ಟ ಶಿಕ್ಷಣ ಪ್ರೇಮಿ ಹಾಗೂ ಉದ್ಯಮಿ ಸಹೃದಯ ಸಂಪನ್ನರಾದ ದಿ.ನಾಗರಾಜ ಶೆಟ್ಟಿ ಅವರಿಗೆ ವಿದ್ಯಾರ್ಥಿಗಳಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಪಟ್ಟಣದ ವಿದ್ಯಾನಿಕೇತನ ಸ್ವತಂತ್ರ ಪದವಿ ಪೂರ್ವ ಕಾಲೇಜು ಸಂಸ್ಥೆಯ ಸಂಸ್ಥಾಪಕರಾದ ದಿ.ಶ್ರೀ ನಾಗರಾಜ ಶೆಟ್ಟಿ ಅವರ ನಿಧನಕ್ಕೆ ಸಂಸ್ಥೆಯ ಪ್ರಾಚಾರ್ಯರು, ಉಪನ್ಯಾಸಕರು ಮತ್ತು ಸಮಸ್ತ ವಿದ್ಯಾರ್ಥಿ ಬಳಗ ನುಡಿ ನಮನ ಹಾಗೂ 2 ನಿಮಿಷಗಳ ಮೌನಾಚರಣೆ ಮಾಡುವ ಮೂಲಕ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಿದರು. ನುಡಿ ನಮನ ಕಾರ್ಯಕ್ರಮದ ವೇಳೆ ಪ್ರಾಚಾರ್ಯರು, ಪ್ರಾಧ್ಯಾಪಕರು, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾವುಕರಾದರು.

## ಕೃಷ್ಣಾ ಮೇಲ್ದಂಡೆ ಯೋಜನೆ ಭೂಸ್ವಾಧೀನ ಕುರಿತು ಸಭೆ

# ಆದ್ಯತೆಯ ಮೇರೆಗೆ ಪರಿಹಾರ ವಿತರಣೆಗೆ ಕ್ರಮ : ಸಚಿವ ತಿಮ್ಮಾಪೂರ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರಕ್ಕೆ ಸಂಬಂಧಿಸಿದಂತೆ ಭೂಸ್ವಾಧೀನಗೊಂಡ ರೈತರಿಗೆ ಆದ್ಯತೆಯ ಮೇರೆಗೆ ಪರಿಹಾರ ವಿತರಣೆಗೆ ಕ್ರಮಕೈಗೊಳ್ಳುವಂತೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶನಿವಾರ ಜರುಗಿದ ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸರಕಾರ ಘೋಷಿಸಿದ ಐತಿಹಾಸಿಕ ತೀರ್ಪಿನನ್ವಯ ಭೂಸ್ವಾಧೀನಗೊಂಡ ರೈತರಿಗೆ ಸೂಕ್ತ ಪರಿಹಾರವನ್ನು ಸರಕಾರ ಘೋಷಿಸಿದ್ದು, ಭೂಮಿ ಕಳೆದುಕೊಳ್ಳುವ ರೈತರಿಗೆ ಆದ್ಯತೆಯ ಮೇರೆಗೆ ಪರಿಹಾರ ವಿತರಣೆಗೆ ಕ್ರಮವಹಿಸಬೇಕಿದೆ. ಈಗಾಗಲೇ ಭೂಸ್ವಾಧೀನಕ್ಕೆ ಸಂಬಂಧಿಸಿದ ಪ್ರಕರಣಗಳು ನ್ಯಾಯಾಲಯದ ಹಂತದಲ್ಲಿದ್ದು, ಈಗಾಗಲೇ ಐತೀರ್ಪಿನನ್ವಯ ಪರಿಹಾರ ವಿತರಣೆಗೆ ನ್ಯಾಯಾಲಯದ ಅನುಮತಿ ಪಡೆಯುವುದು ಸೂಕ್ತವಾಗಿದೆ ಎಂದು ತಿಳಿಸಿದರು.

ನ್ಯಾಯಾಲಯದ ಅನುಮತಿ ಪಡೆದುಕೊಂಡ ನಂತರ ಭೂಸ್ವಾಧೀನಗೊಳ್ಳುವ ಗ್ರಾಮಗಳನ್ನು ಆದ್ಯತೆಯ ಮೇರೆಗೆ ಪಟ್ಟಿ ಮಾಡಿಕೊಳ್ಳುವಂತೆ ಕೃಷ್ಣಾ ಮೇಲ್ದಂಡೆ ಯೋಜನೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಲ್ಲೆಲ್ಲಿ



ಮುಳುಗಡೆಯಾಗುತ್ತದೆ ಎಂಬುದನ್ನು ಗುರುತು ಮಾಡಿ ಯೋಜನೆ ರೂಪಿಸಬೇಕು. ಯುಕೆಪಿ ಹಂತ–3 ರಿಂದ ಮುಳುಗಡೆಯಾಗುವ ಜಮೀನುಗಳಲ್ಲಿ ಮೊದಲು ಯಾರಿಗೆ ಆದ್ಯತೆಯ ಮೇಲೆ ಕೊಡಬೇಕೆಂಬುದನ್ನು ಸಭೆಯಲ್ಲಿ ಚರ್ಚಿಸಿದ ಸಚಿವರು ಈ ಬಗ್ಗೆ ಯೋಜನೆ ರೂಪಿಸಿ ನೀಡಲು ತಿಳಿಸಿದರು. ಬಜೆಟ್ ನಂತರ ಮುಖ್ಯಮಂತ್ರಿಗಳು ಜಿಲ್ಲೆಗೆ ಬರಲಿದ್ದು, ಅದಕ್ಕೂ ಪೂರ್ವದಲ್ಲಿ ಪರಿಹಾರ ವಿತರಣೆಯ ಪಟ್ಟಿ ಸಿದ್ದವಾಗಿರಬೇಕು ಎಂದರು.

ಪುನರ್ವಸತಿ ಕೇಂದ್ರಗಳನ್ನು ವರ್ಗಾವಣೆ ಮಾಡಲಾಗಿದೆ. ಅವುಗಳು ಇನ್ನು ಕೆಲವು ಮೂಲಭೂತ ಸೌಲಭ್ಯಗಳು ಬೇಕಾಗಿದ್ದು, ಪುನರ್ವಸತಿ ಕೇಂದ್ರಗಳಲ್ಲಿ ಉಳಿಕೆ ಜಾಗವನ್ನು ಸಹ ಗ್ರಾಮ ಪಂಚಾಯತಿಗೆ ಠರಾವು ಮಾಡಿ ಹಸ್ತಾಂತರಿಸುವ ಕೆಲಸವಾಗಬೇಕು ಎಂದು ಬೀಳಗಿ ಶಾಸಕರ ಜೆ.ಟಿ.ಪಾಟೀಲ ಹೇಳಿದರು. ಅಲ್ಲದೇ ಪುನರ್ವಸತಿ ಕೇಂದ್ರಗಳಲ್ಲಿ ಶಾಲೆ, ಪಿಕೆಪಿಎಸ್‌ಗಳಿಗೆ ಕಟ್ಟಲಿಕ್ಕೆ ಯಾವುದೇ ರೀತಿಯಲ್ಲಿ ಅನಾವಶ್ಯಕ ತೊಂದರೆ ಆಗಬಾರದು ಎಂದು ತಿಳಿಸಿದರು.

ಸಭೆಯಲ್ಲಿ ಬೆಳಗಾವಿ ವಿಭಾಗದ ಆಯುಕ್ತರಾದ ಜಾನಕಿ ಕೆ.ಎಂ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ ಕಾರ್ಯನಿರ್ವಾಹಕ ಶಶಿಧರ ಕುರೇರ, ಯುಕೆಪಿ ಮಾಹಾ ವ್ಯವಸ್ಥಾಪಕ ಗಜಾನನ ಬಾಲೆ, ಯುಕೆಪಿ ವಿಶೇಷ ಜಿಲ್ಲಾಧಿಕಾರಿ ಮಹಾದೇವ ಮುರುಗಿ ಸೇರಿದಂತೆ ಆರ್‌ಈ ಹಾಗೂ ಎಸ್‌ಎಲ್‌ಓಗಳು ಉಪಸ್ಥಿತರಿದ್ದರು.

# ಉಪ ಚುನಾವಣೆ : ಸೆಕ್ಟರ ಅಧಿಕಾರಿಗಳ ಸಭೆ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಮುಂಬರುವ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಚುಣಾವನೆಯನ್ನು ನಿಷ್ಪಕ್ಷಪಾತ, ಪಾರದರ್ಶಕ ಹಾಗೂ ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಸಂಗಪ್ಪ ಅವರ ಅಧ್ಯಕ್ಷತೆಯಲ್ಲಿ ಸೆಕ್ಟರ ಅಧಿಕಾರಿಗಳ ಸಭೆ ಶನಿವಾರ ಜರುಗಿತು. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಮಾತನಾಡಿದ ಜಿಲ್ಲಾ ಚುನಾವಣಾಧಿಕಾರಿಗಳು ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದಲ್ಲಿ ಒಟ್ಟು 319 ಮತಗಟ್ಟೆಗಳು ಇದ್ದು, 29 ಸೆಕ್ಟರ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಪ್ರತಿ ಸೆಕ್ಟರ ಅಧಿಕಾರಿ ತಮ್ಮ ವ್ಯಾಪ್ತಿಯ ಮತಗಟ್ಟೆಗಳನ್ನು ಸಮಗ್ರವಾಗಿ ಪರಿಶೀಲಿಸಿ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ವಿದ್ಯುತ್, ಶೌಚಾಲಯ, ರ್‍ಯಾಂಪ್ ವ್ಯವಸ್ಥೆ ಸೇರಿದಂತೆ ಇತರೆ ಎಲ್ಲ ಸಿದ್ದತೆಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಸೂಚನೆ ನೀಡಿದರು. ತಮ್ಮ ಮತಗಟ್ಟೆ ವ್ಯಾಪ್ತಿಯಲ್ಲಿ ಬರುವ ಮತದಾರರ ಪಟ್ಟಿಯನ್ನು ಪರಿಶೀಲನೆ ಮಾಡಿ, ಮತಗಟ್ಟೆಗಳ ಸ್ಥಳಬದಲಾವಣೆ ಅವಶ್ಯವಾಗಿದ್ದಲ್ಲಿ ಮತಗಟ್ಟೆ ಅಧಿಕಾರಿಗಳಿಂದ ವರದಿ ಪಡೆದುಕೊಂಡು ಬದಲಾವಣೆ ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು. ದುರ್ಬಲ ಪ್ರದೇಶಗಳನ್ನು ಗುರುತಿಸುವಲ್ಲಿ ಸೆಕ್ಟರ ಅಧಿಕಾರಿಗಳು ಹಾಗೂ ಪೊಲೀಸ್ ಸೆಕ್ಟರ ಅಧಿಕಾರಿಗಳು ಜಂಟಿ–ಯಾಗಿ ಸ್ಥಳ ತನಿಖೆ ಕೈಗೊಂಡು ಭಯಕ್ಕೆ ಒಳಗಾಗುವ ಮತದಾರ ಅಥವಾ ಮತದಾರರ ಸಮುದಾಯ ಗುಂಪುಗಳನ್ನು ಗುರುತಿಸುವ, ಭೀತಿ ಹುಟ್ಟಿಸುವ ಜನರನ್ನು ಗುರುತಿಸಿ, ಭೀತಿಯನ್ನು ಹೋಗಲಾಡಿಸಲು ಕ್ರಮಕೈಗೊಳ್ಳುವ ಕಾರ್ಯವಾಗಬೇಕು ಎಂದರು.

ದುರ್ಬಲ ಪ್ರದೇಶಗಳ ಮ್ಯಾಪಿಂಗ್ ಮಾಡುವಲ್ಲಿ ಕ್ರಮಗಳನ್ನು ಅನುಸರಿಸಬೇಕು. ತಯಾರಿಸಿದ ದುರ್ಬಲ ಪ್ರದೇಶದ ಮ್ಯಾಪಿಂಗ್‌ನ್ನು ಸಹಾಯಕ ಚುನಾವಣಾಧಿಕಾರಿ ಆಗಿರುವ ತಹಶೀಲ್ದಾರರು ಪರಿಶೀಲಿಸಿ ನಂತರ ಉಪವಿಭಾಗಾಧಿಕಾರಿಗಳಿಗೆ ಸಲ್ಲಿಸಬೇಕು. ಉಪವಿಭಾಗಾಧಿಕಾರಿಗಳು ಸಹ ಪರಿಶೀಲಿಸಿ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸಲ್ಲಿಸಲು ತಿಳಿಸಿದರು. ಸಹಾಯಕ ಚುನಾವಣಾಧಿಕಾರಿಗಳು ಕಳೆದ ಮೂರು ಚುನಾವಣೆಗಳನ್ನು ಆಧಾರವಾಗಿಟ್ಟುಕೊಂಡು ಕ್ರಿಟಿಕಲ್ ಮಗಟ್ಟೆಗಳನ್ನು ಗುರುತಿಸುವ ಕೆಲಸವಾಗಬೇಕು ಎಂದು ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ ಸ್ವಾಮಿ, ಚುನಾವಣಾ ವಿಭಾಗದ ಮಹೇಶ ಪಾಂಡವ ಸೇರಿದಂತೆ ಸೆಕ್ಟರ ಅಧಿಕಾರಿಗಳು ಉಪಸ್ಥಿತರಿದ್ದರು.

# ಫೆ, 25ಕ್ಕೆ ತಾಳಿಕೋಟಿ ಸಂಪೂರ್ಣ ಬಂದ್‌ಗೆ ಕರೆ

• ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ

ಮೇಲೇಶ್ವರ ಗ್ರಾಮದ ಹತ್ತಿರ ಪ್ರಜಾಸೌಧ ನಿರ್ಮಾಣಕ್ಕೆ ಆಯ್ಕೆ ಮಾಡಿದ ಸ್ಥಳ ಪಟ್ಟಣದಿಂದ 4 ರಿಂದ 5 ಕಿ ಮೀ ದೂರ ಇರುವುದರಿಂದ ತಾಲೂಕಿನ ಸಾರ್ವಜನಿಕರಿಗೆ ತುಂಬಾ ಅನಾನುಕೂಲವಾಗುತ್ತದೆ ಇದನ್ನು ರದ್ದು ಪಡಿಸಿ ತಾಳಿಕೋಟಿ ಪಟ್ಟಣದಲ್ಲಿಯೇ ಪ್ರಜಾಸೌಧ ನಿರ್ಮಾಣ ಮಾಡಬೇಕೆಂದು ಒತ್ತಾಯಿಸಿ ತಾಳಿಕೋಟಿ ತಾಲೂಕ ಹೋರಾಟ ಸಮಿತಿಯ ಪದಾಧಿಕಾರಿಗಳು ಶುಕ್ರವಾರ ವಿಠ್ಠಲ ಮಂದಿರದಲ್ಲಿ ಕರೆದ ಪಟ್ಟಣದ ಸರ್ವ ಸಮಾಜದ ಗಣ್ಯರ ಹಾಗೂ ವ್ಯಾಪಾರಸ್ಥರ, ಅಸೋಷಿಯೇಷನಗಳ ಪೂರ್ವಬಾವಿ ಸಭೆಯಲ್ಲಿ ಫೆಬ್ರವರಿ 25ರಂದು ಸ್ವಯಂ ಪ್ರೇರಿತ ಸಂಪೂರ್ಣ ಬಂದಗೆ ಕರೆ ನೀಡಿ ಅಂದಿನಿಂದಲೇ ಅನಿರ್ದಿಷ್ಟಾವಧಿಯವರೆಗೆ ಧರಣಿ ಸತ್ಯಾಗ್ರಹ ಆರಂಭಿಸುವುದಾಗಿ ನಿರ್ಣಯಿಸಿದರು.

ಸಭೆಯಲ್ಲಿ ಹೋರಾಟ ಸಮಿತಿಯ ಪ್ರಮುಖರಾದ ಕಾಶಿನಾಥ ಮುರಾಳ, ಹಾಗೂ ವಿಜಯಸಿಂಗ್ ಹಜೇರಿ, ರವಿ ಕಟ್ಟಿಮನಿ ಅವರು ಮಾತನಾಡಿ ಅಂದು ಮುಂಜಾನೆ 10 ಗಂಟೆಗೆ ಅಂಬೇಡ್ಕರ್



ವೃತದಿಂದ ಬೃಹತ್ ಮೆರವಣಿಗೆ ಮೂಲಕ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಬಸವೇಶ್ವರ ವೃತ್ತಕ್ಕೆ ತಲುಪಿ ಅಲ್ಲಿಯೇ ಧರಣಿ ಆರಂಭಿಸಲಾಗುವುದು ಇದಕ್ಕೆ ಸರ್ವ ಸಮಾಜದವರೂ ಜ್ಯಾತ್ಯತೀತವಾಗಿ, ಪಕ್ಷಾತೀತವಾಗಿ ಈ ಹೋರಾಟಕ್ಕೆ ಸಹಕರಿಸಬೇಕೆಂದು ಕೇಳಿಕೊಂಡರು.

ಸಭೆಯಲ್ಲಿ ಕಾರ್ಯಕ್ರಮದ ವಿವಿಧ ಜವಾಬ್ದಾರಿಗಳನ್ನು ವಹಿಸಿಕೊಡಲಾಯಿತು. ಈ ಸಂದರ್ಭದಲ್ಲಿ ಹೋರಾಟ ಸಮಿತಿಯ ಗೌರವ ಅಧ್ಯಕ್ಷರಾದ ಎಸ್.ಬಿ.ಕಟ್ಟಿಮನಿ, ಅಧ್ಯಕ್ಷರಾದ ದಶರತಸಿಂಗ್ ಮನಗೂಳಿ, ಉಪಾಧ್ಯಕ್ಷರಾದ ಎಂ.ಕೆ.ಚೋರಗಸ್ತಿ, ಮುತ್ತಪ್ಪ ಚಮಲಾಪುರ, ಮಾಸೂಮಸಾಬ ಕೆಂಭಾವಿ, ಪರಶುರಾಮ ತಂಗಡಗಿ, ವೆಂಕಣ್ಣ ತಾಳಪಲ್ಲೆ, ಎಂ. ಆರ್. ಕತ್ತಿ, ಶರಣಗೌಡ ಪಾಟೀಲ, ಪ್ರಕಾಶ ಹಜೇರಿ, ತಿಪ್ಪಣ್ಣ ಸಜ್ಜನ, ಚನ್ನಬಸ್ಸು ದೇಸಾಯಿ, ತಿರುಪತಿ ನವಲೆ , ಶ್ರೀಶೈಲ್ ಬಬಲೇಶ್ವರ, ಮನೋಹರ ಪತ್ತಾರ, ಗಂಗಾಧರ ಕಸ್ತೂರಿ, ಮಂಜು ಶೆಟ್ಟಿ, ಸಿರಸಕುಮಾರ ಹಜೇರಿ, ಸುರೇಶ ಹಜೇರಿ, ಅಮಿತ್ ಮನಗೂಳಿ, ಶ್ರೀನಿವಾಸ್ ಸೋನಾರ್, ರಾಮಪ್ಪ ಕಟ್ಟಿಮನಿ, ಜುಮ್ಮಣ್ಣ ನಾಲತವಾಡ ಯಂಕಪ್ಪ ಗೊಲ್ಲರ, ಸಂಜು ಬರದೇನಾಳ, ನಾರಾಯಣ ಹಿಂಗಮೋರೆ, ಬಸ್ಸು ಕೊಡೇಕಲ್, ಹಾಗೂ ಸರ್ವ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಮಾಜದ ಕಳಕಳಿ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಸರ್ಕಾರಿ ಶಾಲೆಗಳ ಸುಧಾರಣೆ ಹಾಗೂ ಅಭಿವೃದ್ಧಿಗೆ ಸಮುದಾಯದ ಸಹಕಾರ ಅಗತ್ಯವಾಗಿದೆ ಎಂದು ಜಿಪಂ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಶಶಿಧರ ಕುರೇರ ಹೇಳಿದರು. ಸ್ಥಳೀಯ ಸರ್ಕಾರಿ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಶನಿವಾರ ಜರುಗಿದ ಸ್ನೇಹ ಸಮ್ಮೇಳನ ಹಾಗೂ ನಮ್ಮ ಶಾಲೆ, ನಮ್ಮ ಜವಾಬ್ದಾರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸರ್ಕಾರದ ಸೌಲಭ್ಯಗಳ ಜೊತೆಗೆ ಊರಿನ ನಾಗರಿಕರು, ಶಾಲೆಯ ಹಳೇ ವಿದ್ಯಾರ್ಥಿಗಳು ಮತ್ತು ಶಾಲಾಭಿವೃದ್ಧಿ ಸಮಿತಿ ಅಳಿಲು ಸೇವೆ ಸಲ್ಲಿಸಬೇಕು ಎಂದರು. ವ್ಯಕ್ತಿ ಬೆಳೆಯಲು ಶಿಕ್ಷಣದ ಅವಶ್ಯಕತೆಯಿದೆ. ಈ ವ್ಯವಸ್ಥೆ ಸುಧಾರಣೆಗೆ ಸರ್ವರ ಸಹಕಾರ, ಶ್ರಮ, ಪ್ರಯತ್ನದ ಅವಶ್ಯಕತೆಯಿದೆ ಎಂದ ಕುರೇರ, ಎಲ್ಲರೂ ಒಳ್ಳೆಯ ಆಲೋಚನೆ ಹೊಂದಿ ಜವಾಬ್ದಾರಿ ಅರಿತು ಕೆಲಸ ಮಾಡಿದಾಗ ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ಹಾಗೂ ಬದಲಾವಣೆ ತರಬಹುದಾಗಿದೆ ಎಂದು ಹೇಳಿದರು. ಮುಖ್ಯ ಅತಿಥಿ ಶಾಲಾ ಶಿಕ್ಷಣ ಇಲಾಖೆಯ ನಿವೃತ್ತ ನಿರ್ದೇಶಕ ಎಸ್. ಆರ್.ಮನಹಳ್ಳಿ , ಶಿಕ್ಷಣ ಕೇವಲ ಕಲಿಸುವುದಷ್ಟೇ ಅಲ್ಲ. ಕಲಿಸುವ ವಾತಾವರಣ ಸೃಷ್ಟಿ ಮಾಡುವುದಾಗಿದೆ. ಇಂದಿನ ಸ್ಪರ್ಧಾ ಜಗತ್ತಿನಲ್ಲಿ ಸರ್ಕಾರಿ ಶಾಲೆಗಳನ್ನು ಆಕರ್ಷಕವಾಗಿ ಬೆಳೆಸದೇ ಹೋದರೆ ಅವುಗಳನ್ನು ಉಳಿಸಿಕೊಳ್ಳುವುದು ಕಷ್ಟವಾಗುತ್ತದೆ ಎಂದರು. ಇನ್ನೋರ್ವ ಮುಖ್ಯ ಅತಿಥಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಅಜೀತ ಮನ್ನಿಕೇರಿ ಮಾತನಾಡಿ, ಶಾಲೆಗಳ ಅಭಿವೃದ್ಧಿಗೆ ಸರ್ಕಾರದ ಸೌಲಭ್ಯಗಳ ಜೊತೆ ಸಮಾಜದ ಕಳಕಳಿಯೂ ಇರಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ವೃತ್ತಿ ಶಿಕ್ಷಕಿ ಶೋಭಾ ಹಡಗಲಿ ಅವರ 'ಸಖಿ ಸಂಗಾತಿ' ಕೃತಿ ಬಿಡುಗಡೆಗೊಳಿಸಲಾಯಿತು. ಜಿ.ವೈ. ಹೆರಕಲ್ ಸಾನಿಧ್ಯ, ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ರವಿಕುಮಾರ ತಳವಾರ ಅಧ್ಯಕ್ಷತೆ ವಹಿಸಿದ್ದರು. ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಜಿಲ್ಲಾಯೋಜನಾ ಸಮನ್ವಯಾಧಿಕಾರಿ ಪ್ರಮೋದಿನಿ ಬಳೋಲಮಟ್ಟಿ, ಶಿಕ್ಷಣ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ಎಸ್.ವೈ.ಶಿರೂರ, ನಿಂಗಪ್ಪ ಮಾಗನೂರ, ಎಂ.ಎಸ್. ವೈಜಾಪುರ, ಕುಮಾರ ಬಿಂಜವಾಡಗಿ, ಗ್ಯಾನಪ್ಪ ಚಲವಾದಿ, ಎಸ್.ಡಿ.ಎಂ.ಸಿ ಸದಸ್ಯರು ಅತಿಥಿಗಳಾಗಿದ್ದರು. ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಶಾಲೆಯ ಮುಖ್ಯಗುರು ಬಿ.ಆರ್.ಶೆಟ್ಟಿ ಸ್ವಾಗತಿಸಿದರು. ಅನ್ನಪೂರ್ಣಾ ಮಾಗನೂರ ವರದಿ ವಾಚಿಸಿದರು. ಸುನೀಲ ಪಾಟೀಲ ಹಾಗೂ ಪಾಂಡುರಂಗ ಸನ್ನಪ್ಪನವರ ನಿರೂಪಿಸಿದರು.

# ಬಾಲಕಿಯರ ಪ್ರೌಢಶಾಲೆ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ

• ಮಲ್ಲಮ್ಮ ನುಡಿ ಹುಣಸಗಿ

ಶನಿವಾರ ಸಂಜೆ ಪಟ್ಟಣದ ಸರಕಾರಿ ಬಾಲಕಿಯರ ಪ್ರೌಢಶಾಲೆ ಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಸಾಂಪ್ರದಾಯಿಕವಾಗಿ ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮವು ಪ್ರಾರ್ಥನೆ ಹಾಗೂ ದೀಪ ಬೆಳಗಿಸುವ ಮೂಲಕ ಪ್ರಾರಂಭವಾಯಿತು. ಈ ಸಂದರ್ಭದಲ್ಲಿ ಪಟ್ಟಣದ ಹಿರಿಯ ಮುಖಂಡರಾದ ನಾಗಣ್ಣ ಸಾಹುಕಾರ ದಂಡಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ವಿದ್ಯಾರ್ಥಿಗಳ ಜೀವನದಲ್ಲಿ ಹತ್ತನೇ ತರಗತಿ ಒಂದು ಪ್ರಮುಖ ಘಟ್ಟವಾಗಿದ್ದು, ಇದು ಮುಂದಿನ ಶಿಕ್ಷಣ ಹಾಗೂ ಜೀವನದ ದಿಕ್ಕನ್ನು ನಿರ್ಧರಿಸುವ ಮಹತ್ವದ ಘಟ್ಟವಾಗಿದೆ ಈ ಸಮಯದಲ್ಲಿ ಉತ್ತಮವಾಗಿ ಅಧ್ಯಯನ ಮಾಡಿ ಶಾಲೆಗೆ ಹಾಗೂ ತಂದೆ–ತಾಯಿಗಳಿಗೆ ಕೀರ್ತಿ ತಂದುಕೊಡಬೇಕು ಎಂದು ಅವರು ಸಲಹೆ ನೀಡಿದರು.

ನಂತರ ಶಾಲೆಯ ಖಆಒಆ ಅಧ್ಯಕ್ಷರಾದ ಸಿದ್ದು ಮುದಗಲ್



ಮಾತನಾಡಿ ಹತ್ತನೇ ತರಗತಿ ಅಂತಿಮ ಗುರಿಯಲ್ಲ, ಇದು ನಿಮ್ಮ ಯಶಸ್ಸಿನ ಹೊಸ ಆರಂಭ. ನೀವು ಈವರೆಗೆ ಕಲಿತ ಪಾಠಗಳು, ಶಿಕ್ಷಕರ ಮಾರ್ಗದರ್ಶನ ಹಾಗೂ ಶಾಲೆಯ ಅನುಭವಗಳು ನಿಮ್ಮ ಮುಂದಿನ ಬದುಕಿಗೆ ಬಲವಾದ ಅಡಿಪಾಯವಾಗುತ್ತವೆ ಎಂದು ಹೇಳಿದರು .

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಶಾಲೆಯಲ್ಲಿ ಕಳೆದ ಸ್ಮರಣೀಯ ದಿನಗಳು, ತಮ್ಮ ಅನುಭವಗಳು ಹಾಗೂ ಶಿಕ್ಷಕರ ಮಾರ್ಗದರ್ಶನವನ್ನು ಹಂಚಿಕೊಂಡರು. ಕಿರಿಯ ವಿದ್ಯಾರ್ಥಿಗಳು ಹಿರಿಯ ವಿದ್ಯಾರ್ಥಿಗಳಿಗಾಗಿ ಹಾಡು, ನೃತ್ಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಿ ಸಮಾರಂಭವನ್ನು ಇನ್ನಷ್ಟು ಮೆರಗು ತಂದುಕೊಟ್ಟರು.

ಕಾರ್ಯಕ್ರಮದಲ್ಲಿ ಮುಖಂಡರಾದ ಬಸವರಾಜ ಬಳಿ, ಶರಣು ದಂಡಿನ ಆರ್ ಎಮ್ ರೇವಡಿ, ರಾಚಪ್ಪ ಪಟ್ಟಣಶಟ್ಟಿ, ಶಾಂತಗೌಡ ಪಾಟೀಲ್ ಪಟ್ಟಣ ಪಂಚಾಯತ ಅಧ್ಯಕ್ಷ ತಿಪ್ಪಣ್ಣ ನಾಯಕ, ಬಸವರಾಜ ಸಜ್ಜನ, ಮಹಾದೇವಿ ಬೇವಿನಾಳ ಮಠ, ರಮೇಶ ವಾಲಿ, ಮುಖ್ಯ ಗುರುಗಳಾದ ವಿಠಲ ರಾಠೋಡ, ಮಶಾಕ್ ಯಾಳಗಿ, ಗುರುರಾಜ ಕುಲಕರ್ಣಿ ಸೋಮನಗೌಡ, ಶಿಕ್ಷಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶಿಕ್ಷಕರಾದ ಭೀಮಮಣ್ಣ ವಾಲ್ಮೀಖಿ ನಿರೂಸಿದರು, ಬಸವರಾಜ ತೆಗ್ಗಳ್ಳಿ ಪ್ರಾಸ್ತವಿಕ ನೀಡಿ ಹೇಳಿದರು, ನಾಗನಗೌಡ ಪಾಟೀಲ್ ವಂದಿಸಿದರು.

# ಅಂಕಗಳನ್ನು ಪಡೆಯುವದಕ್ಕೆ ಶಿಕ್ಷಣ ಮೀಸಲಾಗಬಾರದು : ಮಹಾಂತೇಶ ದರಗದ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ವಿದ್ಯಾರ್ಥಿಗಳು ಹೆಚ್ಚು ಅಂಕಗಳನ್ನು ಪಡೆಯುವುದು ಮುಖ್ಯವಲ್ಲ ಬದುಕನ್ನು ಹೇಗೆ ರೂಪಿಸಿಕೊಳ್ಳಬೇಕೆಂದು ಶಿಕ್ಷಣದ ಮುಖ್ಯ ಉದ್ದೇಶ ಆಗ ಬೇಕಾಗಿದೆ ಎಂದು ಜಿಲ್ಲಾ ಹಿರಿಯ ಸಿವ್ಹಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಮಹಾಂತೇಶ ದರಗದ ರವರು ಹೇಳಿದರು.

ಪಟ್ಟಣದ ಸಮೀಪ ದದೇಗಲ್ಲದಲ್ಲಿರುವ ಎಸ್.ಎ.ನಿಂಗೋಜಿ ಇಂಟರ್ ನ್ಯಾಶನಲ್ ಪಬ್ಲಿಕ ಶಾಲೆಯ 11 ನೇ ವಾರ್ಷಿಕೊತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು ಅಂದಿನ ಪೂರ್ವ ಶಿಕ್ಷಣದಲ್ಲಿ ನೈತಿಕತೆಗೆ ಹೆಚ್ಚು ಆಧ್ಯತೆಯನ್ನು ಕೊಡಲಾಗುತ್ತಿತ್ತು. ಶಿಕ್ಷಣದ ಉದ್ದೇಶ ನೌಕರಿಯನ್ನು ಪಡೆದುಕೊಳ್ಳುವದಕ್ಕೆ ಸೀಮಿತವಾಗಬಾರದು ಉತ್ತಮ ಸಮಾಜವನ್ನು ಕಟ್ಟುವುದು ಹಾಗೂ ನೈತಿಕತೆಯು ಅಧಃಪತನವಾಗದಂತೆ ಸಂರಕ್ಷಿಸಿದಾಗ ಜೀವನ ಸಮ್ರುದ್ಧಿ ಆಗುತ್ತದೆ.

ವಿದ್ಯೆಗಿಂತ ವಿನಯ ಮುಖ್ಯ ಪ್ರೀತಿ ಪ್ರೇಮ ಹೆಸರಿನಲ್ಲಿ ಮೋಸ ವಂಚನೆ ಆಗದಂತೆ ಪವಿತ್ರತೆಗೆ ಹೆಸರಾಗಬೇಕು ಎಂದರು. ಮಕ್ಕಳ ಮನಸನ್ನು ಅರಿತು ಅವರ ಅಭಿರುಚಿಗೆ ತಕ್ಕ ಶಿಕ್ಷಣವನ್ನು ಶಿಕ್ಷಕರು ಬೋಧಿಸಿದಾಗ ಆ ಮಗುವಿನ ಕಲಿಕಾಸಕ್ತಿ ಇಮ್ಮಡಿಗೊಂಡು ಮುಂದೆ ಸ್ವಾವಲಂಬಿ ಜೀವನ ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಈ ದಿಶೆಯಲ್ಲಿ ಶಿಕ್ಷಕರು ಹಾಗೂ ಪಾಲಕರು ಜಾಗೂರಕತೆ ವಹಿಸಬೇಕೆಂದು ಕರೆ ನೀಡಿದರು. ಕಾನೂನಿನ ತಿಳುವಳಿಕೆ ಇಲ್ಲದೆ ಇರುವದಕ್ಕೆ ಅಪರಾಧಿ ಮನೋಭಾವನೆಯುಳ್ಳವರು ಸಮಾಜದಲ್ಲಿ ಹೆಚ್ಚಾಗುತ್ತಿರುವದಕ್ಕೆ



ಕಳವಳ ವ್ಯಕ್ತಪಡಿಸಿದರು.

ಸಾನಿಧ್ಯವಹಿಸಿದ್ದ ಚುಕನಕಲ್ಲ ವಿವೇಕಾನಂದ ಆಶ್ರಮದ ಚೈತನ್ಯಾನಂದ ಸ್ವಾಮೀಜಿಗಳು ಆಶೀರ್ವದಿಸುತ್ತಾ ನಿಂಗೋಜಿ ಶಿಕ್ಷಣ ಸಂಸ್ಥೆಯು ಮೌಲ್ಯಾಧಾರಿತ ಶಿಕ್ಷಣಕ್ಕೆ ಮಹತ್ವ ನೀಡುತ್ತಾ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೆ ಆಧ್ಯತೆ ನೀಡುವದರ ಜೊತೆಗೆ ನೈತಿ–ಕತೆಯ ಪಾಠಗಳನ್ನು ಬೋಧಿಸಿ ವಿದ್ಯಾರ್ಥಿಗಳ ಮನೋ ವಿಕಾಸಕ್ಕೆ ಪ್ರೇರಣೆ ನೀಡುವುದು ಸ್ವಾಗತಾರ್ಹವಾಗಿದೆ ಎಂದರಲ್ಲದೆ ಶಿಕ್ಷಣದ ಮಹತ್ವವನ್ನು ಗ್ರಾಮೀಣ ಪ್ರದೇಶಕ್ಕೆ ಕೊಂಡೊಯ್ದು ಗ್ರಾಮೀಣ ಪ್ರತಿಭೆಗಳ ಅನಾವರಣ ಗೊಳಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು. ಈಗಾಗಲೆ ಶಿಕ್ಷಣ ಕ್ಷೇತ್ರದಲ್ಲಿ ಜಿಲ್ಲಾದ್ಯಾಂತ ಹೆಸರು ಮಾಡಿರುವ ನಿಂಗೋಜಿ ಶಿಕ್ಷಣ ಸಂಸ್ಥೆ ಮತ್ತಷ್ಟು ಹೆಮ್ಮರವಾಗಿ ಬೆಳೆಯಲಿ ಎಂದು ಆಶಿಸಿದರು.

ಅಧ್ಯಕ್ಷತೆಯನ್ನು ನಿ.ಪ್ರಾಚಾರ್ಯ ಜಿ.ಎಂ.ನಿಂಗೋಜಿ ವಹಿಸಿಕೊಂಡು ಮಾತನಾಡುತ್ತಾ ಅನೇಕ ಕಷ್ಟ ನಷ್ಟಗಳ ಮಧ್ಯ ಶಿಕ್ಷಣ ಸಂಸ್ಥೆಯನ್ನು ಕಟ್ಟಿ ಬಡ ಮಕ್ಕಳಿಗೆ ನಿಲುಕಲಾರದ ಶಿಕ್ಷಣವನ್ನು ಗ್ರಾಮಾಂತಾರ ಜನರಿಗೆ ತಲುಪಿಸುವ ಕಾರ್ಯ ವನ್ನು ಎಲ್ಲರೂ ಮೆಚ್ಚಲೆ ಬೇಕೆಂದು ಹೇಳುತ್ತಾ ಇನ್ನು ಅನೇಕ ಕೋರ್ಸಗಳನ್ನು ತಂದು ಎಲ್ಲರಿಗೂ ಅನುಕೂಲವಾಗಲಿ ಎಂದು ಶುಭ ಕೋರಿದರು. ಮರಿಯಪ್ಪ ಲಿಂಗಣ್ಣನವರ ದಂಪತಿಗಳ ಸುವರ್ಣ ವಿವಾಹ ಮಹೋತ್ಸವವನ್ನು ಹಾಗೂ ನಿಂಗೋಜಿ ಶಿಕ್ಷಣ ಹಾಗೂ ಗ್ರಾಮೀಣಾಭಿವ್ರದ್ಧಿ ಟ್ರಸ್ಟಿನ ಅಧ್ಯಕ್ಷರು ಹಾಗೂ ಹಿರಿಯ ನ್ಯಾಯವಾದಿಗಳಾದ ಶಶಿಕಾಂತ ನಿಂಗೋಜಿ ರವರ 55 ನೇ ಹುಟ್ಟು ಹಬ್ಬವನ್ನು ಇದೇ ಸಂದರ್ಭದಲ್ಲಿ ಅವರ ಅಭಿಮಾನಿಗಳು ಆಚರಿಸಿದರು. ವಾರ್ಷಿಕ ಕ್ರೀಡಾ ಕೂಟದಲ್ಲಿ ಭಾಗಿಯಾಗಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು

ಚಿಣ್ಣರ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಗಮನ ಸೆಳೆದವು.

ನ್ಯಾಯವಾದಿಗಳಾದ ವಿವೇಕ ಜೈನ ಐ.ಬಿ.ನಿಡಗುಂದಿ ಬಿ.ಎಂ.ಸಜ್ಜನ ಪ್ರಕಾಶ ಹಾದಿಮನಿ ರಾಜಾಸಾಬ ಬೆಳ್ಳಕುರ್ಕಿ ಯು.ಎಸ್. ಸೊಪ್ಪಿಮಠ ರತ್ನಮ್ಮ ನಿಂಗೋಜಿ ರಾಜಶೇಖರ ನಿಂಗೋಜಿ ಪ್ರಾ. ಸಂಪತ್ ಆಕಳವಾಡಿ ರವಿ ನಿಂಗೋಜಿ ಅಂದಪ್ಪ ಸೊಂಪುರ ಬಸವರಾಜ ಸೊಂಪೂರ ಶಶಿಕಲಾ ನಿಂಗೋಜಿ ಶಿವಪುತ್ರಪ್ಪ ಹಾಗೂ ಇನ್ನಿತರರು ವೇದಿಕೆ ಮೇಲೆ ಉಪಸ್ಥಿತರಿದ್ದರು. ಲಿಂಗರಾಜ ಬಿಸನಳ್ಳಿ ಹಾಗೂ ಖಾನಸಾಬ ಕಲ್ಲೂರ ರವರು ಸಂಗೀತ ಕಾರ್ಯಕ್ರಮ ನೀಡಿ ಸ್ವಾಗತ ಗೀತೆ ಗೈದರು. ಗದುಗಿನ ಪಿಪಿಜಿ ಕಾಲೇಜಿನ ಸಹ ಪ್ರಾಧ್ಯಾಪಕರು ಹಾಗೂ ಟ್ರಸ್ಟಿಗಳಾದ ಪ್ರೊ.ಡಾ. ವಿ.ಎ. ನಿಂಗೋಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ರೇವಯ್ಯ ನಿರೂಪಿಸಿದರು .

